ಸಂಪುಟ : 13 Volume ಸಂಚಿಕೆ : 228 Issue ಪುಟಗಳು : 08 Pages ಭಾನುವಾರ 26 ಅಕ್ಟೋಬರ್ 2025 ₹2 PRGINO.120927(RNINO:KARKAN/2011/48371) BDR/054/2026-20274 www.mallammanudi.in mallammanudi@gmail.com 9448604450

ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಬಳ್ಳಾರಿ | ವಿಜಯನಗರ | ಕೊಪ್ಪಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನಿಮ್ಮ ಹಾದಿಯಲ್ಲಿ ಮುಳ್ಳು ಚೆಲ್ಲಿದವರ ಹಾದಿಯಲ್ಲಿ ಹೂ ಚೆಲ್ಲಿ
ಸ್ವಾಮಿ ವಿವೇಕಾನಂದ .

2. ಕೇರಳಕ್ಕೆ ಹೊರಟ ಜಿಲ್ಲೆಯ ಗ್ರಾ.ಪಂ. ಸದಸ್ಯರು
8 ಸ್ಪರ್ಧಾತ್ಮಕ ಪರೀಕ್ಷೆಯ ಯಶಸ್ಸಿಗೆ ಉತ್ತಮ ತಯಾರಿ ಅಗತ್ಯ
4 ಜಾನುವಾರು ಪೋಷಣೆ: ರೈತರ ಆದಾಯ ಹೆಚ್ಚಳ

# ವ್ಯಕ್ತಿತ್ವರೂಪಿಸಲು ಶಿಕ್ಷಣ ಅಗತ್ಯ: ಸಿಎಂ

ಬೆಂಗಳೂರು:ಅ.25:ವ್ಯಕ್ತಿತ್ವರೂಪಿಸಿಕೊಳ್ಳಲು ಶಿಕ್ಷಣಪಡೆಯುವುದುಅಗತ್ಯವಾಗಿದ್ದು,ಪ್ರತಿಯೊಬ್ಬ ಮುಸಲ್ಮಾನನೂಶಿಕ್ಷಣವಂತನಾಗಬೇಕುಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಶನಿವಾರ ಹೇಳಿದರು.

ಜೆಯುಗ್ರೂಪ್ ಆಫ್ ಇನ್ಸ್ ಟಿಟ್ಯೂಟ್ ನಲ್ಲಿ ಆಯೋಜಿಸಿದ್ದ ದಾರುಲ್ ಕುರಾನ್ ಕ್ಯಾಂಪಸ್ ಅನ್ನು ಉದ್ಘಾಟನಾಸಮಾರಂಭದಲ್ಲಿಮಾತನಾಡಿದ ಮುಖ್ಯಮಂತ್ರಿ, ಯಾವುದೇ ಜಾತಿ ಧರ್ಮಕ್ಕೆ ಸೇರಿದ್ದರೂ, ಪ್ರತಿಯೊಬ್ಬರಿಗೂ ವಿದ್ಯೆ ಮುಖ್ಯ. ಸ್ವಾಭಿಮಾನಿ ಬದುಕಿಗೆ ಶಿಕ್ಷಣ ಅತ್ಯಂತ ಮುಖ್ಯ. ಸಾಮಾಜಿಕ ಸಂಕೋಲೆಗಳಿಂದ ಮುಕ್ತರಾಗಲು ಶಿಕ್ಷಣ ಅಗತ್ಯವೆಂದು ಡಾ.ಬಿ.ಆರ್.ಅಂಬೇಡ್ಕರ್ ರವರು ತಿಳಿಸಿದ್ದಾರೆ. ಪ್ರತಿಯೊಬ್ಬ ಮುಸಲ್ಮಾನನೂ ಶಿಕ್ಷಣವಂತನಾಗಬೇಕು ಎಂದರು.

ಸಂವಿಧಾನ ಅಸ್ತಿತ್ವಕ್ಕೆ ಬಂದ ನಂತರವಷ್ಟೇ ಎಲ್ಲರಿಗೂ ಶಿಕ್ಷಣ ಪಡೆಯುವ ಸಮಾನ ಅವಕಾಶ ಸಾಧ್ಯವಾಯಿತು. ಶಿಕ್ಷಣಕ್ಕೆ ಸರ್ಕಾರ ಹೆಚ್ಚು ಒತ್ತು ನೀಡಿದ್ದು, ಇದಕ್ಕಾಗಿ ಅನುದಾನವನ್ನೂ ನೀಡಲಾಗುವುದು. ಅಲ್ಲದೇ ವಸತಿಶಾಲೆಗಳನ್ನು ಸ್ಥಾಪಿಸಿ ಮುಸಲ್ಮಾನ ಬಂಧುಗಳಿಗೆ ಪ್ರಾಥಮಿಕ,




ಹಿರಿಯ ಪ್ರಾಥಮಿಕ ಶಿಕ್ಷಣಕ್ಕೂ ಅನುಕೂಲ ಮಾಡಿಕೊಡಲಾಗುವುದು ಎಂದು ಹೇಳಿದರು.

ತಮ್ಮ ಧರ್ಮವನ್ನು ಪಾಲಿಸುತ್ತಾ ಪರ ಧರ್ಮವನ್ನು ಗೌರವಿಸಬೇಕು, ಸಹಬಾಳ್ವೆ, ಸೌಹಾರ್ದತೆಯನ್ನು ಪಾಲಿಸಬೇಕು ಎಂದು ನಮ್ಮ ಸಂವಿಧಾನ ತಿಳಿಸುತ್ತದೆ. ಯಾವುದೇ ಧರ್ಮ ದ್ವೇಷವನ್ನು ಪ್ರಚೋದಿಸುವುದಿಲ್ಲ. ದ್ವೇಷರಾಜಕಾರಣ ಮಾಡಬಾರದು. ದ್ವೇಷದಿಂದ ಯಾರ ಮನಸ್ಸನ್ನೂ ಗೆಲ್ಲಲು ಸಾಧ್ಯವಿಲ್ಲ. ಈ ಅರಿವಿಗೆ ಶಿಕ್ಷಣ ಮುಖ್ಯವಾಗಿದೆ. ಅಜೀಂಪ್ರೇಮ್‌ಜಿ ಅವರ ವಿಪ್ರೋ ಸಂಸ್ಥೆಯೊಂದಿಗೆ ಒಪ್ಪಂದ ಮಾಡಿಕೊಂಡು ಆರು ದಿನಗಳ ಕಾಲ ಶಾಲಾ ಮಕ್ಕಳಿಗೆ ಮೊಟ್ಟೆ ನೀಡಲಾಗುತ್ತಿದೆ. ಇದಲ್ಲದೇ ರಾಗಿ ಮಾಲ್ಟ್, ಹಾಲು, ಬಿಸಿಯೂಟ ಒದಗಿಸಲಾಗುತ್ತಿದೆ. ಕಾಲೇಜಿನಲ್ಲಿ ಓದುವ 2ನೇ ಪುಟನೋಡಿ

## ಮಾನವ ಹಕ್ಕುಗಳ ಉಲ್ಲಂಘನೆ: ಪಾಕ್‌ಗೆ ಭಾರತ ತರಾಟೆ

ನ್ಯೂಯಾರ್ಕ್,ಅ.25- ಜಮ್ಮು ಮತ್ತು ಕಾಶ್ಮೀರ, ಭಾರತದ ಅವಿಭಾಜ್ಯ ಅಂಗ, ಅದನ್ನು ಎಂದಿಗೂ ಯಾರಿಂದಲೂ ಬೇರ್ಪಡಿಸಲು ಸಾಧ್ಯವಿಲ್ಲ ಎಂದು ವಿಶ್ವಸಂಸ್ಥೆಯಲ್ಲಿ ಭಾರತ-ಪಾಕಿಸ್ತಾನಕ್ಕೆ ಖಡಕ್ ಸಂದೇಶ ರವಾನಿಸಿದೆ.

ಪಾಕಿಸ್ತಾನ ಆಕ್ರಮಿತ ಕಾಶ್ಮೀರ -ಪಿಒಕೆಯಲ್ಲಿ ಪ್ರತಿಭಟನಾಕಾರರ ಮೇಲೆ ಪಾಕಿಸ್ತಾನ ಸೇನೆ ಗುಂಡು ಹಾರಿಸಿದ ನಂತರ ಹಲವಾರು ನಾಗರಿಕರು ಸಾವನ್ನಪ್ಪಿದ್ದು ಮಾನವ ಹಕ್ಕುಗಳ ಉಲ್ಲಂಘನೆ ಮಾಡುವುದನ್ನು ತಕ್ಷಣವೇ ನಿಲ್ಲಿಸುವಂತೆ ಪಾಕಿಸ್ತಾನಕ್ಕೆ ಭಾರತ ಒತ್ತಾಯಿಸಿದೆ.



ವಿಶ್ವಸಂಸ್ಥೆಯ 80ನೇ ದಿನದಂದು ಆಯೋಜಿಸಲಾದ ಮುಕ್ತ ಚರ್ಚೆಯ ಸಂದರ್ಭದಲ್ಲಿ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸಾಮಾನ್ಯ ಸಭೆಯನ್ನುದ್ದೇಶಿಸಿ ಮಾತನಾಡಿದ ಭಾರತದ ಖಾಯಂ ಪ್ರತಿನಿಧಿ ಪರ್ವತನೇನಿ ಹರೀಶ್, ಪಾಕ್ ಆಕ್ರಮಿತ ಕಾಶ್ಮೀರದ ಜನರ ಬೇಡಿಕೆಗಳನ್ನು ಈಡೇರಿಸಲು ಪಾಕಿಸ್ತಾನ ವಿಫಲವಾಗಿದೆ. ಹೀಗಾಗಿ ಪ್ರತಿಭಟನೆಗಳು ಭುಗಿಲೆದ್ದಿವೆ. ಇದನ್ನು ತಕ್ಷಣ ನಿಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

ಪಾಕಿಸ್ತಾನ ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಪ್ರದೇಶದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆ ಪದೇ ಪದೇ ಆಗುತ್ತಿದೆ, ಇದನ್ನು ನೋಡಿಕೊಂಡು ಕೂರಲು ಸಾಧ್ಯವಿಲ್ಲ, ಪಾಕಿಸ್ತಾನ ತಕ್ಷಣ ಮಾನವ ಹಕ್ಕುಗಳ ಉಲ್ಲಂಘನೆಯಾಗುತ್ತಿರುವುದನ್ನು ನಿಲ್ಲಸಬೇಕು ಎಂದು ಒತ್ತಾಯಿಸಿದ್ದಾರೆ.

ಪಾಕಿಸ್ತಾನ ಆಕ್ರಮಿಸಿಕೊಂಡಿರುವ ಪ್ರದೇಶಗಳಲ್ಲಿ ನಡೆಯುತ್ತಿರುವ ಕ್ರೌರ್ಯ, ದೌರ್ಜನ್ಯ ಮತ್ತು ಮಾನವ ಹಕ್ಕುಗಳ ಉಲ್ಲಂಘಟನೆ ನಿಲ್ಲಿಸಬೇಕು, ಜೊತೆಗೆ ಪಾಕಿಸ್ತಾನ ಸೇನೆಯ ಆಕ್ರಮಣ, ದಮನ, ಕ್ರೌರ್ಯ ಮತ್ತು ಸಂಪನ್ಮೂಲಗಳ ಅಕ್ರಮ ಶೋಷಣೆಯ ವಿರುದ್ಧ ಜನಸಂಖ್ಯೆಯು ಬಹಿರಂಗದಂಗೆ ಎದ್ದಿದೆ ಅದಕ್ಕೆ ಮತ್ತಷ್ಟು ಅವಕಾಶ ಮಾಡಿಕೊಡಬಾರದು ಎಂದು ಹೇಳಿದ್ದಾರೆ. 2ನೇ ಪುಟನೋಡಿ

## ಅಕ್ರಮ ಗಣಿಗಾರಿಕೆ : ಖೂಬಾಗೆ ದಂಡ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಅ.25:ಅಕ್ರಮಗಣಿಗಾರಿಕೆ ಮಾಡಿದ ಆರೋಪದ ಮೇಲೆ ಮಾಜಿ ಕೇಂದ್ರ ಸಚಿವ ಭಗವಂತ್ ಖೂಬಾ ಅವರಿಗೆ ಕಲಬುರಗಿ ಜಿಲ್ಲೆಯ ಕಾಳಗಿ ತಹಶೀಲ್ದಾರ್ 25.30 ಕೋಟಿ ರೂ. ದಂಡ ಪಾವತಿಸುವಂತೆ ಸೂಚಿಸಿ ನೋಟಿಸ್ ನೀಡಿದ್ದಾರೆ.

ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲೂಕಿನ ವಚ್ಚಾ ಗ್ರಾಮದಲ್ಲಿ 2014ರ ಜು.19 ರಿಂದ 2019ರ ಜು.18ರ ವರೆಗೆ ವಚ್ಚಾ ಗ್ರಾಮದ ಸರ್ವೆ ನಂ.24/4 ರಲ್ಲಿ 2 ಎಕರೆಗೆ ಅನುಮತಿ ಪಡೆದು 8 ಎಕರೆಗಿಂತ ಹೆಚ್ಚಿನ 2ನೇ ಪುಟನೋಡಿ

## ಭಾರತದ ವಿರುದ್ಧ ಯುದ್ಧದಿಂದ ಪಾಕಿಸ್ತಾನಕ್ಕೆ ಯಾವುದೇ ಪ್ರಯೋಜನವಿಲ್ಲ: ಜಾನ್ ಕಿರಿಯಾಕೌ

ಮಲ್ಲಮ್ಮ ನುಡಿ ವಾರ್ತೆ



ಇಸ್ಲಾಮಾಬಾದ್:ಅ.25:ಭಾರತದ ವಿರುದ್ಧ ಯುದ್ಧ ಮಾಡುವುದರಿಂದ ಪಾಕಿಸ್ತಾನಕ್ಕೆ ಯಾವುದೇ ಪ್ರಯೋಜನವಿಲ್ಲ ಎಂದು ಪಾಕ್ ಕಾರ್ಯಾಚರಣೆಗಳ ನೇತೃತ್ವ ವಹಿಸಿದ್ದ ಮಾಜಿ ಸಿಐಎ ಅಧಿಕಾರಿ ಜಾನ್ ಕಿರಿಯಾಕೌ ಹೇಳಿಕೆ ನೀಡಿದ್ದಾರೆ. ಭಾರತ ಮತ್ತು ಪಾಕಿಸ್ತಾನದ ನಡುವಿನ ಯುದ್ಧದಿಂದ ಏನೂ ಒಳ್ಳೆಯದಾಗುವುದಿಲ್ಲ. ಏಕೆಂದರೆ ಪಾಕಿಸ್ತಾನಿಗಳು ಸೋಲುತ್ತಾರೆ. ನಾನು ಪರಮಾಣು ಶಸ್ತ್ರಾಸ್ತ್ರಗಳ ಬಗ್ಗೆ ಮಾತನಾಡುತ್ತಿಲ್ಲ. ನಾನು ಸಾಂಪ್ರದಾಯಿಕ ಯುದ್ಧದ ಬಗ್ಗೆ ಮಾತ್ರ ಮಾತನಾಡುತ್ತಿದ್ದೇನೆ. ನಿರಂತರವಾಗಿ ಭಾರತೀಯರನ್ನು ಪ್ರಚೋದಿಸುವುದರಿಂದ ಯಾವುದೇ ಪ್ರಯೋಜನವಿಲ್ಲ ಎಂದು ಮಾತನಾಡಿದ್ದಾರೆ.

2016 ರಲ್ಲಿ ಸರ್ಜಿಕಲ್ ಸ್ಟ್ರೈಕ್, 2019 ರಲ್ಲಿ ಬಾಲಾಕೋಟ್ ದಾಳಿ ಮತ್ತು ಈ ವರ್ಷದ ಏಪ್ರಿಲ್‌ನಲ್ಲಿ 26 ಅಮಾಯಕರ ಸಾವಿಗೆ ಕಾರಣವಾದ ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತ ಆಪರೇಷನ್ ಸಿಂಧೂರ ಕಾರ್ಯಾಚರಣೆ ನಡೆಸಿತು. ಹಲವು ವರ್ಷಗಳಿಂದ ಗಡಿಯಾಚೆಯಿಂದ ಭಯೋತ್ಪಾದಕರು ನಡೆಸಿದ ದಾಳಿಗಳಿಗೆ ಭಾರತ ನಿರ್ಣಾಯಕವಾಗಿ ಪ್ರತ್ಯುತ್ತರ ನೀಡಿದೆ.

2001 ರ ಸಂಸತ್ತಿನ ದಾಳಿಯ ನಂತರ, ಆಪರೇಷನ್ ಪರಾಕ್ರಮ್ ಕಾರ್ಯಾಚರಣೆ ನಡೆಯಿತು. ಭಾರತ-ಪಾಕಿಸ್ತಾನದ ಉದ್ವಿಗ್ನತೆಗಳು ಯುದ್ಧಕ್ಕೆ ಕಾರಣವಾಗಬಹುದೆಂದು ಅಮೆರಿಕವು ನಿರೀಕ್ಷಿಸಿತ್ತು. ಆಗ ಪಾಕಿಸ್ತಾನ ತನ್ನ ನಾಗರಿಕರನ್ನು ಸ್ಥಳಾಂತರಿಸಲು ಪ್ರಾರಂಭಿಸಿತ್ತು ಎಂದು ಕಿರಿಯಾಕೌ ನೆನಪಿಸಿಕೊಂಡಿದ್ದಾರೆ.

ಪಾಕಿಸ್ತಾನದ ಪರಮಾಣು ಬಾಂಬ್ ವಿನ್ಯಾಸಗೊಳಿಸಿದ ಅಬ್ದುಲ್ ಖದೀರ್ ಖಾನ್ ಅವರನ್ನು ಅಮೆರಿಕ ನಿರ್ಮೂಲನೆ ಮಾಡಬಹುದಿತ್ತು. 2ನೇ ಪುಟನೋಡಿ


## ಮಹಾರಾಷ್ಟ್ರ ವೈದ್ಯೆ ಆತ್ಮಹತ್ಯೆ ಕೇಸ್

## 5 ತಿಂಗಳಿಂದ ಮಾನಸಿಕವಾಗಿ ಕಿರುಕುಳ ನೀಡಿದ್ದ ಟೆಕ್ಕಿ ಅರೆಸ್ಟ್

ಮುಂಬೈ:ಅ.25:ಸತಾರಾದ ಉಪಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯೆ ಆತ್ಮಹತ್ಯೆ ಮಾಡಿಕೊಂಡ ಪ್ರಕರಣಕ್ಕೆ ಸಂಬಂಧಿಸಿದಂತೆ 5 ತಿಂಗಳಿಂದ ಮಾನಸಿಕವಾಗಿ ಕಿರುಕುಳ ನೀಡಿದ್ದ ಟೆಕ್ಕಿಯೋರ್ವನನ್ನು ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಯನ್ನು ಪ್ರಶಾಂತ್ ಬಂಕರ್ ಎಂದು ಗುರುತಿಸಲಾಗಿದ್ದು, ಸಾಫ್ಟ್‌ವೇರ್ ಎಂಜಿನಿಯರ್ ಆಗಿದ್ದರು. ಮೃತ ವೈದ್ಯೆ ಆತ್ಮಹತ್ಯೆಗೂ ಮುನ್ನ ತನ್ನ ಅಂಗೈಯಲ್ಲಿ, 5 ತಿಂಗಳಿನಿಂದ ಟೆಕ್ಕಿ ಮಾನಸಿಕವಾಗಿ ಕಿರುಕುಳ ನೀಡಿದ್ದಾರೆ ಎಂದು ಬರೆದುಕೊಂಡಿದ್ದರು. ಇನ್ನೂ ವೈದ್ಯೆಯ ಮೇಲೆ ಹಲವು ಬಾರಿ ಅತ್ಯಾಚಾರ ಮತ್ತು ಕಿರುಕುಳ ನೀಡಿದ್ದ ಆರೋಪ ಹೊತ್ತಿದ್ದ ಪೊಲೀಸ್ ಇನ್ಸ್‌ಪೆಕ್ಟರ್ ಗೋಪಾಲ್ ಬದ್ನೆ ತಲೆಮರೆಸಿಕೊಂಡಿದ್ದಾನೆ. ಈತನನ್ನು ಬಂಧಿಸಲು ಸತಾರ ಪೊಲೀಸರು ನಾಲ್ಕು ತಂಡಗಳನ್ನು ರಚಿಸಿದ್ದಾರೆ. ಈ ನಡುವೆ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಸತಾರಾ ಪೊಲೀಸ್ ವರಿಷ್ಠಾಧಿಕಾರಿ ತುಷಾರ್ ಅವರೊಂದಿಗೆ ಮಾತನಾಡಿ, ಆತ್ಮಹತ್ಯೆ ಪತ್ರದಲ್ಲಿ ಹೆಸರಿಸಲಾದ ಪೊಲೀಸ್ ಇನ್ಸ್‌ಪೆಕ್ಟರ್ ಅವರನ್ನು ಅಮಾನತುಗೊಳಿಸಲು ಆದೇಶಿಸಿದ್ದಾರೆ.

## ಬಂಗಾಳ ಕೊಲ್ಲಿಯಲ್ಲಿ 'ಮೋಂಥಾ' ಸೈಕ್ಲೋನ್ ಅಬ್ಬರ



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಅ.25:ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತ ಹಿನ್ನೆಲೆ ಅ.27ರ ಹೊತ್ತಿಗೆ ಚಂಡಮಾರುತ ಅಪ್ಪಳಿಸುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಎಚ್ಚರಿಸಿದೆ. ಹೀಗಾಗಿ ಮುಂದಿನ ಎರಡೂ ಮೂರು ದಿನಗಳ ಕಾಲ ಚೆನ್ನೈನಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ.

ಇಂದು ಆಗ್ನೇಯ ಭಾಗದಲ್ಲಿ ಒತ್ತಡ ಸೃಷ್ಟಿಯಾಗಲಿದೆ. ನಾಳೆ ಇದು ಇನ್ನಷ್ಟು ತೀವ್ರಗೊಳ್ಳಲಿದೆ. ನಂತರ ಚಂಡಮಾರುತವು ವಾಯುವ್ಯ ಭಾಗಕ್ಕೆ ನಿಧಾನಕ್ಕೆ ಸಾಗುವ ಸಾಧ್ಯತೆಗಳಿವೆ 2ನೇ ಪುಟನೋಡಿ

## ಬೀದರ್‌ನ ಗುರಮ್ಮಾ ಸಿದ್ದಾರಡ್ಡಿ ರವರ ಸಮಾಜಮುಖಿ ಸೇವೆಗೆ ಮೆಚ್ಚುಗೆಗಳ ಹರಿವು

ಮಲ್ಲಮ್ಮ ನುಡಿ ವಾರ್ತೆ

ಬೀದರ್:

ಬೀದರ್ ನಗರದ ಪ್ರಗತಿ ಮತ್ತು ಸಮಾಜದ ಕಲ್ಯಾಣಕ್ಕಾಗಿ ನಿರಂತರವಾಗಿ ಶ್ರಮಿಸುತ್ತಿರುವ ಗುರಮ್ಮಾ ಸಿದ್ದಾರಡ್ಡಿ ರವರ ಸಾಮಾಜಿಕ ಕಾರ್ಯ ಇತ್ತೀಚೆಗೆ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ. ಸಮಾಜದ ಬಡವರ, ನಿರಾಶ್ರಿತರ ಮತ್ತು ಹಿಂದುಳಿದ ವರ್ಗದ ಸರ್ವ ಧರ್ಮ ಜನರ ಸೇವೆಯಲ್ಲಿ ತೊಡಗಿಕೊಂಡಿರುವ ಅವರು, ತಮ್ಮ ವೈಯಕ್ತಿಕ ಜೀವನದೊಂದಿಗೆ ಜನಸೇವೆಗೇ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಿದ್ದಾರೆ.

ಗುರಮ್ಮಾ ಸಿದ್ದಾರಡ್ಡಿ ರವರು ವಿಶೇಷವಾಗಿ ಮಹಿಳಾ ಸಬಲೀಕರಣ, ಶಿಕ್ಷಣದ ಪ್ರೋತ್ಸಾಹ, ಮತ್ತು ಆರೋಗ್ಯ ಜಾಗೃತಿ ಕ್ಷೇತ್ರಗಳಲ್ಲಿ ಹಲವು ಸಕಾರಾತ್ಮಕ ಕಾರ್ಯಗಳನ್ನು ಕೈಗೊಂಡಿದ್ದಾರೆ. ಬಡ ವಿದ್ಯಾರ್ಥಿಗಳಿಗೆ ಪುಸ್ತಕ, ಯೂನಿಫಾರ್ಮ್ ಹಾಗೂ ಶಾಲಾ ಸಾಮಗ್ರಿಗಳನ್ನು ವಿತರಿಸುವ ಮೂಲಕ ಅವರು ಶಿಕ್ಷಣದ ಬೆಳಕನ್ನು ಹಂಚುತ್ತಿದ್ದಾರೆ. ಗ್ರಾಮೀಣ ಭಾಗದ ಮಹಿಳೆಯರಿಗೆ ಸ್ವಾವಲಂಬನೆ ತರಬೇತಿ ನೀಡುವ ಮೂಲಕ ಅವರ ಜೀವನಮಟ್ಟವನ್ನು ಸುಧಾರಿಸಲು ಶ್ರಮಿಸುತ್ತಿದ್ದಾರೆ.

ಇದಲ್ಲದೆ, ಪರಿಸರ ಸಂರಕ್ಷಣೆಗಾಗಿ ಮರನೆಡುವ ಅಭಿಯಾನ, ಸ್ವಚ್ಛತಾ



ಜಾಗೃತಿ ಕಾರ್ಯಕ್ರಮಗಳು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತಾ 2ನೇ ಪುಟನೋಡಿ

## ಹೈಕಮಾಂಡ್ ಹೇಳಿದ್ರೆ ಸಚಿವ ಸ್ಥಾನ ಬಿಡಲು ಸಿದ್ಧ: ಕೃಷ್ಣ ಬೈರೇಗೌಡ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಪಕ್ಷ ನನಗೆ ಮೂರು ಬಾರಿ ಸಚಿವ ಸ್ಥಾನ ನೀಡಿದೆ. ಹೈಕಮಾಂಡ್ ಹೇಳಿದರೆ ನಾನು ಸಚಿವ ಸ್ಥಾನ ಬಿಡಲು ಸಿದ್ಧ ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಕ್ಷ ನನಗೆ ಎಲ್ಲವನ್ನೂ ನೀಡಿದೆ. ಅರ್ಹತೆಗೂ ಮೀರಿ ಅವಕಾಶ ಸಿಕ್ಕಿದೆ. ಪಕ್ಷ ನನ್ನನ್ನ ಗುರುತಿಸಿ ಸಾಕಷ್ಟು ಅವಕಾಶ ನೀಡಿದೆ. ಕ್ಷೇತ್ರ ಪುನರ್ವಿಂಗಡಣೆ ನಂತರ ಹೊಸ ಕ್ಷೇತ್ರದ ಅವಕಾಶ ನೀಡುವುದರಿಂದ ಇಲ್ಲಿಯವರೆಗೂ ಅವಕಾಶ ನೀಡಿದೆ.



ಸಚಿವಸ್ಥಾನದಿಂದ ಕ್ಷೇತ್ರದಲ್ಲಿ ಕೆಲಸ ಮಾಡಲು ಆಗುತ್ತಿಲ್ಲ. ಅವಕಾಶದ ವಿಷಯದಲ್ಲಿ ನನಗೆ ಹೊಟ್ಟೆ ತುಂಬಿದೆ, ಆದ್ರೆ ಕೆಲಸದಲ್ಲಿ ಅಲ್ಲ. ಇನ್ನೂ ಮಾಡುವ ಕೆಲಸ ಬಾಕಿ ಇದೆ, ಅವಕಾಶದ ವಿಚಾರದಲ್ಲಿ ನಾನು ಸಂತೃಪ್ತನಾಗಿದ್ದೇನೆ ಎಂದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಎರಡೂವರೆ ವರ್ಷ ಪೂರೈಸಿದ ಬೆನ್ನಲ್ಲೆ ಸಚಿವ ಸಂಪುಟ ಪುನಾರಚನೆ ವಿಚಾರವಾಗಿ ಮಾತನಾಡಿದ ಅವರು, ಸರ್ಕಾರ ರಚನೆಯ ಸಂದರ್ಭದಲ್ಲೇ ಬೇರೆಯವರಿಗೂ ಅವಕಾಶ ನೀಡುವ ಬಗ್ಗೆ ಚರ್ಚೆಯಾಗಿತ್ತು. ಸಚಿವಸ್ಥಾನ ಸ್ವೀಕರಿಸುವುದಕ್ಕೂ ಮೊದಲೇ ಗಮನಕ್ಕೆ ತಂದು ಸಂಪುಟ ರಚಿಸಲಾಗಿತ್ತು. ಈ ಸರ್ಕಾರ ಬಂದಾಗಲೇ ಈ ನಿರ್ಧಾರ 2ನೇ ಪುಟನೋಡಿ

## 6 ತಿಂಗಳಲ್ಲಿ 1500 ಕೋಟಿ ಸೈಬರ್ ವಂಚನೆ

ಬೆಂಗಳೂರು.ಅ. 25: ಪ್ರಮುಖ ನಗರಗಳಲ್ಲಿ ಕಳೆದ ಆರು ತಿಂಗಳಲ್ಲಿ 30,000 ಕ್ಕೂ ಹೆಚ್ಚು ಜನರು ಹೂಡಿಕೆ ವಂಚನೆಗೆ ಗುರಿಯಾಗಿದ್ದು, 1,500 ಕೋಟಿ ರೂಪಾಯಿಗಳಿಗಿಂತಲೂ ಅಧಿಕ ನಷ್ಟ ಸಂಭವಿಸಿದೆ ಎಂದು ಗೃಹ ಮಂತ್ರಾಲಯದ ಸೈಬರ್ ವಿಭಾಗದ ವರದಿ ಬಹಿರಂಗಪಡಿಸಿದೆ. ಬೆಂಗಳೂರು, ಹೈದರಾಬಾದ್ ಮತ್ತು ದೆಹಲಿ-ಎನ್ಸಿಆರ್ ಪ್ರದೇಶಗಳು ಹೆಚ್ಚಿನ ನಷ್ಟ ಮತ್ತು ಬಲಿತಾಯಿತ ಜನರ ಸಂಖ್ಯೆಯನ್ನು ಹೊಂದಿವೆ. ಇಂಡಿಯನ್ ಸೈಬರ್ ಕ್ರೈಮ್ ಕೋಆರ್ಡಿನೇಶನ್ ಸೆಂಟರ್ (ಐ4ಸಿ) ವರದಿಯ ಪ್ರಕಾರ, ಒಟ್ಟು ನಷ್ಟದ 26.38 ಶತಮಾನ ಭಾಗವನ್ನು ಹೊಂದಿರುವ ಬೆಂಗಳೂರು ಅತ್ಯಧಿಕ ಆರ್ಥಿಕ ಹಾನಿ ಅನುಭವಿಸಿದ ನಗರವಾಗಿದೆ.

**ಯಾರು ಗುರಿಯಾಗುತ್ತಿದ್ದಾರೆ**

ಹೂಡಿಕೆದಾರರ ವಂಚನೆಗಳು ಪ್ರಾಥಮಿಕವಾಗಿ ಕೆಲಸ ಮಾಡುವ ವಯಸ್ಸಿನ ಜನರನ್ನು ಗುರಿ ಹೊಂದಿವೆ. 30 ರಿಂದ 60 ವಯಸ್ಸಿನ ವ್ಯಕ್ತಿಗಳು ಒಟ್ಟು ಬಲಿತಾಯಿತರಲ್ಲಿ 76% ರಷ್ಟಿದ್ದಾರೆ. ಹಣ ಸಂಪಾದನೆಯ ಪ್ರಮುಖ ವಯಸ್ಸಿನಲ್ಲಿರುವವರ ಆರ್ಥಿಕ ಆಕಾಂಕ್ಷೆಯನ್ನು ವಂಚಕರು ಉಪಯೋಗಿಸುತ್ತಾರೆ.

## ಬಾಲಿವುಡ್ ಹಾಸ್ಯ ನಟ ಸತೀಶ್ ಶಾ ನಿಧನ



ಮಲ್ಲಮ್ಮ ನುಡಿ ವಾರ್ತೆ

ಮುಂಬಯಿ:ಅ.25:ಜನಪ್ರಿಯ ಹಾಸ್ಯ ನಟ ಸತೀಶ್ ಶಾ (74) ಅವರು ಶನಿವಾರ ನಿಧನರಾದರು. ಕಿಡ್ನಿ ವೈಫಲ್ಯದಿಂದ ಬಳಲುತ್ತಿದ್ದ ನಟ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾರೆ.

ನಟ ಸತೀಶ್ ಶಾ ಅವರ ನಿಧನ ಸುದ್ದಿಯನ್ನು ಚಲನಚಿತ್ರ ನಿರ್ಮಾಪಕ ಅಶೋಕ್ ಪಂಡಿತ್ ಅವರು ದೃಢಪಡಿಸಿದ್ದಾರೆ. 'ಭಾರವಾದ ಹೃದಯದಿಂದ ಹೇಳುತ್ತಿದ್ದೇನೆ. ನಮ್ಮ ಸ್ನೇಹಿತ ಮತ್ತು ನಟ ಸತೀಶ್ ಶಾ ಇಂದು ಮಧ್ಯಾಹ್ನ 2:30 ರ ಸುಮಾರಿಗೆ ಮೂತ್ರಪಿಂಡ ವೈಫಲ್ಯದಿಂದ ನಿಧನರಾದರು ಎಂದು ನಾನು ಹೇಳಲು ಬಯಸುತ್ತೇನೆ. ಅವರು ಮನೆಯಲ್ಲಿದ್ದಾಗ ಆರೋಗ್ಯ ಹದಗೆಟ್ಟಿತು. ಅವರನ್ನು ತಕ್ಷಣ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ, ಬದುಕಲು ಸಾಧ್ಯವಾಗಲಿಲ್ಲ. ಅವರ ಅಂತ್ಯಕ್ರಿಯೆ ಇಂದು ನಡೆಯಲಿದೆ. ಇದು ಸಿನಿಮಾರಂಗಕ್ಕೆ ಬಹಳ ದೊಡ್ಡ ನಷ್ಟ. ನಾನು ಅವರೊಂದಿಗೆ ಅನೇಕ ಯೋಜನೆಗಳಲ್ಲಿ ಕೆಲಸ ಮಾಡಿದ್ದೇನೆ. ಪಿಯೂಷ್ ಪಾಂಡೆ ಅವರ ಅಂತ್ಯಕ್ರಿಯೆ ಮುಗಿಸಿ ಹಿಂತಿರುಗುತ್ತಿದ್ದಾಗ, ಸತೀಶ್ ಅವರ ನಿಧನದ ವಾರ್ತೆ ತಿಳಿಯಿತು' ಎಂದು ಅಶೋಕ್ ಪಂಡಿತ್ ತಿಳಿಸಿದ್ದಾರೆ.

ಸತೀಶ್ ಶಾ ಭಾರತೀಯ ಜನಪ್ರಿಯ ನಟ. ಚಲನಚಿತ್ರಗಳು ಮತ್ತು ದೂರದರ್ಶನದಲ್ಲಿ ವಿಶೇಷವಾಗಿ ಹಾಸ್ಯ ಪಾತ್ರಗಳಲ್ಲಿ ಹೆಸರುವಾಸಿಯಾಗಿದ್ದಾರೆ. 1951 ರ ಜೂನ್ 25 ರಂದು ಬಾಂಬೆಯಲ್ಲಿ ಜನಿಸಿದರು. 1978 ರಲ್ಲಿ ಅರವಿಂದ್ ದೇಸಾಯಿ ಕಿ ಅಜೀಬ್ ದಸ್ತಾನ್ ಚಿತ್ರದ ಮೂಲಕ ಶಾ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದರು. ಅವರು 1983 ರ ವಿಡಂಬನಾತ್ಮಕ ಜಾನೆಭಿ ದೋ ಯಾರೋ ದಲ್ಲಿ ಮುನ್ಸಿಪಲ್ ಕಮಿಷನರ್ ಡಿ'ಮೆಲ್ಲೋ ಪಾತ್ರ ನಿರ್ವಹಿಸಿ ಖ್ಯಾತಿ ಗಳಿಸಿದರು.

ಹಮ್ ಸಾಥ್ ಸಾಥ್ ಹೈ (1999), ಕಲ್ ಹೋನಾ ಹೋ (2003), ಮುಜ್ಸೆ ಶಾದಿ ಕರೋಗಿ (2004), ಮತ್ತು ಓಂ ಶಾಂತಿ ಓಂ (2007) ಸೇರಿದಂತೆ 250 ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಟಿಸಿದ್ದಾರೆ. 1984 ರ ಸಿಟ್ಕಾಂ ಯೇ ಜೊ ಹೈ ಜಿಂದಗಿ ಮೂಲಕ ದೂರದರ್ಶನದಲ್ಲಿ ಅವರು ವ್ಯಾಪಕವಾಗಿ ಹೆಸರುವಾಸಿಯಾಗಿದ್ದರು.

ನಂತರ ಅವರು ಫಿಲ್ಮಿ ಚಕ್ಕರ್ (1995) ಮತ್ತು ಸಾರಾಭಾಯ್ ವರ್ಸಸ್ ಸಾರಾಭಾಯ್ (2004) ಸೇರಿದಂತೆ ಹಲವಾರು ಜನಪ್ರಿಯ ಸರಣಿಗಳಲ್ಲಿ ಕಾಣಿಸಿಕೊಂಡರು. ಇಂದ್ರವಧನ್ ಸಾರಾಭಾಯ್ ಪಾತ್ರವು ಇನ್ನೂ ಜನಪ್ರಿಯತೆ ತಂದುಕೊಟ್ಟಿತು.

## ನನ್ನ ಹೇಳಿಕೆಗೆ ನಾನೂ ಈಗಲೂ ಬದ್ಧ: ಯತೀಂದ್ರ

ಮಲ್ಲಮ್ಮ ನುಡಿ ವಾರ್ತೆ

ಮೈಸೂರು:ಅ.25:ತಮ್ಮ ತಂದೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಐದು ವರ್ಷಗಳ ಅವಧಿಯನ್ನು ಪೂರ್ಣಗೊಳಿಸಲಿದ್ದಾರೆ ಎಂದು ಕಾಂಗ್ರೆಸ್ ಎಂಎಲ್‌ಸಿ ಯತೀಂದ್ರ ಸಿದ್ದರಾಮಯ್ಯ ಶನಿವಾರ ಹೇಳಿದ್ದಾರೆ.

ಇಂದು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಯತೀಂದ್ರ, 'ನವೆಂಬರ್ ಕ್ರಾಂತಿ' ಕೇವಲ ಊಹಾಪೋಹ. ನಮ್ಮ ಪಕ್ಷದಲ್ಲಿ ಅಂತಹ ಯಾವುದೇ ಚರ್ಚೆ ಇಲ್ಲ ಎಂದರು.



ನಿಮ್ಮ ತಂದೆ ಐದು ವರ್ಷ ಪೂರ್ಣಗೊಳಿಸುತ್ತಾರೆಯೇ? ಎಂಬ ವರದಿಗಾರರ ಪ್ರಶ್ನೆಗೆ ಉತ್ತರಿಸಿದ ಸಿಎಂ ಪುತ್ರ, ಪ್ರಸ್ತುತ ಪರಿಸ್ಥಿತಿಯಲ್ಲಿ, ಅವರು ಐದು ವರ್ಷಗಳ ಅವಧಿ ಪೂರ್ಣಗೊಳಿಸುತ್ತಾರೆ ಎಂದು ಹೇಳಿದರು.

ಇದೇ ವೇಳೆ ಸಿದ್ದರಾಮಯ್ಯ ನಂತರ ಸಚಿವ ಸತೀಶ್ ಜಾರಕಿಹೊಳಿ ಉತ್ತರಾಧಿಕಾರಿ ಎಂಬ ಅರ್ಥದಲ್ಲಿ ತಾವು ನೀಡಿದ್ದ ಹೇಳಿಕೆಯನ್ನು ಸಮರ್ಥಿಸಿಕೊಂಡ ಯತೀಂದ್ರ, ನನ್ನ ಹೇಳಿಕೆಗೆ ನಾನು ಈಗಲೂ ಬದ್ಧ ಎಂದಿದ್ದಾರೆ.

ನನ್ನ ಹೇಳಿಕೆಯಲ್ಲಿ ತಪ್ಪೇನಿಲ್ಲ. ನನ್ನ ಹೇಳಿಕೆಯನ್ನು ಬೇರೆ ಬೇರೆ ರೀತಿ ಬಿಂಬಿಸುತ್ತಿದ್ದಾರೆ ಎಂದು ಯತೀಂದ್ರ ಹೇಳಿದ್ದಾರೆ. ಇನ್ನು ಪಕ್ಷದಿಂದ ನನಗೆ ಯಾವುದೇ ನೋಟಿಸ್ ಬಂದಿಲ್ಲ ಎಂದಿರುವ ಸಿಎಂ ಪುತ್ರ, ಪಕ್ಷ ನೋಟಿಸ್ ಕೊಟ್ಟರೆ ಅದಕ್ಕೆ ನಾನು ಉತ್ತರ ಕೊಡುತ್ತೇನೆ ಎಂದು ಹೇಳಿದ್ದಾರೆ.

**3ನೇ ಏಕದಿನ: 'ರೋಹಿತ-ಕೋಹ್ಲಿ' ಭರ್ಜರಿ ಕಮ್ ಬ್ಯಾಕ್, ಸಿಡ್ನಿಯಲ್ಲಿ ಭಾರತಕ್ಕೆ 9 ವಿಕೆಟ್ ಭರ್ಜರಿ ಜಯ**

## ಒಂದನೇ ಪುಟದಿಂದ

### ಸಮಾಜಮುಖಿ ಸೇವೆಗೆ ಮೆಚ್ಚುಗೆಗಳ ಹರಿವು

ಅಭಿಯಾನಗಳನ್ನು ನಡೆಸುವ ಮೂಲಕ ಅವರು ಪರಿಸರದ ಬಗ್ಗೆ ಸಾಮಾಜಿಕ ಜವಾಬ್ದಾರಿಯನ್ನು ಸಾರುತ್ತಿದ್ದಾರೆ.

ಜನಸೇವೆಯ ಹಾದಿಯಲ್ಲಿ ತೊಡಗಿರುವ ಗುರಮ್ಮಾ ಸಿದ್ದಾರಡ್ಡಿ ರವರಿಗೆ ಸ್ಥಳೀಯರು, ಸಾಮಾಜಿಕ ಸಂಘಟನೆಗಳು ಹಾಗೂ ಹಿರಿಯರು ಅಭಿನಂದನೆ ಸಲ್ಲಿಸಿದ್ದಾರೆ. ಅವರ ಸೇವೆಯನ್ನು ಕಂಡು ಅನೇಕ ಯುವಕರು ಸಮಾಜಮುಖಿ ಕಾರ್ಯಗಳತ್ತ ಆಕರ್ಷಿತರಾಗುತ್ತಿದ್ದಾರೆ.

ಜನರ ಹಿತದತ್ತ ಸದಾ ಚಿಂತಿಸುವ ಗುರಮ್ಮಾ ಸಿದ್ದಾರಡ್ಡಿ ರವರು, ಸಮಾಜದ ಅಭಿವೃದ್ಧಿಯೇ ನನ್ನ ಧ್ಯೇಯ ಎಂದು ತಿಳಿಸಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಯೋಜನೆಗಳ ಮೂಲಕ ಜನರ ಸೇವೆ ಮುಂದುವರಿಸುವ ನಿಶ್ಚಯ ವ್ಯಕ್ತಪಡಿಸಿದ್ದಾರೆ.

### ವ್ಯಕ್ತಿತ್ವ ರೂಪಿಸಲು ಶಿಕ್ಷಣ ಅಗತ್ಯ:ಸಿಎಂ

ಹೆಣ್ಣುಮಕ್ಕಳಿಗೆ ವಿದ್ಯಾರ್ಥಿವೇತನ ನೀಡಲಾಗುತ್ತಿದೆ. ಅಜೀಂ ಪ್ರೇಮ್‌ಜಿ ಅವರೂ ಇದಕ್ಕೆ ಕೈಜೋಡಿಸುತ್ತಿದ್ದಾರೆ ಎಂದು ತಿಳಿಸಿದರು.

ಇತ್ತೀಚೆಗೆ ಮುಸಲ್ಮಾನ ಸಮುದಾಯದ ಹೆಣ್ಣು ಮಕ್ಕಳು ವಿದ್ಯಾವಂತರಾಗುತ್ತಿರುವುದು ಉತ್ತಮ ಬೆಳವಣಿಗೆ. ಹಿಂದೆ ಶೂದ್ರ ಹೆಣ್ಣುಮಕ್ಕಳಿಗೆ ವಿದ್ಯೆ ಕಲಿಯುವ ಅವಕಾಶ ಇರಲಿಲ್ಲ. ಈಗ ಸಮಾನ ಅವಕಾಶಗಳು ಲಭ್ಯವಾಗಿದೆ. ಅಸಮಾನತೆ ಹೋಗಬೇಕೆನ್ನುವ ಕಾರಣದಿಂದ ಗ್ಯಾರಂಟಿಗಳನ್ನು ಜಾರಿಗೆ ತರಲಾಗಿದೆ. ಸಂವಿಧಾನ ಇದನ್ನೇ ಹೇಳುತ್ತದೆ. ಅದನ್ನು ನಮ್ಮ ಸರ್ಕಾರ ಮಾಡುತ್ತಿದೆ. ಸಂವಿಧಾನ ತಿಳಿದವರಿಂದ ಮಾತ್ರ ಸಮಾಜಮುಖಿ ಕೆಲಸ ಮಾಡಲು ಸಾಧ್ಯ ಎಂದು ಹೇಳಿದರು.

ಮಕ್ಕಳನ್ನು ಯಾವುದೇ ಕಾರಣಕ್ಕೂ ಅವಿದ್ಯಾವಂತರನ್ನಾಗಿಸಬಾರದು. ಶಿಕ್ಷಣ ಕೊಡಿಸಲೇಬೇಕು. ಎಲ್ಲರೂ ವಿದ್ಯಾವಂತರಾದರೆ ಭವ್ಯ ಭಾರತ ಕಟ್ಟಬಹುದು, ಸಮ ಸಮಾಜ ನಿರ್ಮಿಸಬಹುದು. ನಾವೂ - ನೀವೂ ಎಲ್ಲರೂ ಮೊದಲು ಭಾರತೀಯರು. ಆಮೇಲೆ ಹಿಂದೂ, ಮುಸ್ಲಿಂ, ಕ್ರೈಸ್ತರು ಎನಿಸಿಕೊಳ್ಳುತ್ತೇವೆ. ಎಲ್ಲರೂ ಭಾರತೀಯರಾಗಿ ಭಾರತವನ್ನು ಕಟ್ಟೋಣ. ದ್ವೇಷ ಬಿಟ್ಟು ಪರಸ್ಪರ ಪ್ರೀತಿ ಮಾಡೋಣ ಎಂದರು.

### ಮಾನವ ಹಕ್ಕುಗಳ ಉಲ್ಲಂಘನೆ: ಪಾಕ್‌ಗೆ ಭಾರತ ತರಾಟೆ

ಜಮ್ಮು ಮತ್ತು ಕಾಶ್ಮೀರ ಯಾವಾಗಲೂ ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಭಾಗವಾಗಿ ಉಳಿಯುತ್ತದೆ ಮತ್ತು ಇಲ್ಲಿನ ಜನರು ತಮ್ಮ ಮೂಲಭೂತ ಹಕ್ಕುಗಳನ್ನು ಆನಂದಿಸುತ್ತಾರೆ. ಹೀಗಿದ್ದರೂ ಪಾಕಿಸ್ತಾನ ವಿನಾ ಕಾರಣ ಕಾಲು ಕೆರೆದುಕೊಂಡು ಬರುತ್ತಿದೆ, ಇದು ಭವಿಷ್ಯದ ದೃಷ್ಟಿಯಿಂದ ಒಳ್ಳೆಯ ಬೆಳವಣಿಗೆ ಅಲ್ಲ ಎಂದು ತಿಳಿಸಿದ್ದಾರೆ.

### ಅಕ್ರಮ ಗಣಿಗಾರಿಕೆ : ಖೂಬಾಗೆ ದಂಡ

ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಸಂಜೀವಕುಮಾರ್ ತಿಪ್ಪಣ್ಣ ಜವಕರ್ ಎಂಬವರು ಇದರ ವಿರುದ್ಧ ದೂರು ನೀಡಿದ್ದರು.

ದೂರಿನ ಆಧಾರದ ಮೇಲೆ ಗಣಿ ಇಲಾಖೆ ಹಾಗೂ ಕಾಳಗಿ ತಹಶೀಲ್ದಾರ ಜಂಟಿ ಪರಿಶೀಲನೆ ನಡೆಸಿದಾಗ, ಅಕ್ರಮ ಗಣಿಗಾರಿಕೆ ನಡೆದಿದೆ ಅನ್ನೋದು ತಿಳಿದುಬಂದಿದೆ. ಬಳಿಕ ಅಧಿಕಾರಿಗಳು ವರದಿ ಸಲ್ಲಿಸಿದ್ದಾರೆ. ವರದಿ ಬಳಿಕ 25.30 ಕೋಟಿ ರೂ. ದಂಡ ಪಾವತಿಸುವಂತೆ ಮೂರು ಬಾರಿ ಅಧಿಕಾರಿಗಳು ನೋಟೀಸ್ ನೀಡಿದ್ದಾರೆ. ಈ ಬಗ್ಗೆ ಅಧಿಕಾರಿಗಳ ನೋಟಿಸ್ ಪ್ರಶ್ನಿಸಿ ಖೂಬಾ ಕಾನೂನು ಮೊರೆ ಹೋಗಿದ್ದಾರೆ.

### ಭಾರತದ ವಿರುದ್ಧ ಯುದ್ಧದಿಂದ ಪಾಕಿಸ್ತಾನಕ್ಕೆ ಯಾವುದೇ ಪ್ರಯೋಜನವಿಲ್ಲ

ಆದರೆ ಸೌದಿ ಅರೇಬಿಯಾದ ಕೋರಿಕೆಯ ಮೇರೆಗೆ ಅವರನ್ನು ಉಳಿಸಿತು ಎಂದು ಕಿರಿಯಾಕೌ ತಿಳಿಸಿದ್ದಾರೆ. ನಾವು ಇಸ್ರೇಲಿ ವಿಧಾನವನ್ನು ಅಳವಡಿಸಿಕೊಂಡಿದ್ದರೆ, ಅವನನ್ನು ಕೊಲ್ಲುತ್ತಿದ್ದೆವು. ಅವನು ಎಲ್ಲಿ ವಾಸಿಸುತ್ತಿದ್ದಾನೆಂಬ ಬಗ್ಗೆ ನಮಗೆ ತಿಳಿದಿತ್ತು. ಆದರೆ, ಅವನಿಗೆ ಸೌದಿ ಸರ್ಕಾರದ ಬೆಂಬಲವಿತ್ತು. ಸೌದಿಗಳು ನಮ್ಮ ಬಳಿಗೆ ಬಂದು, 'ದಯವಿಟ್ಟು ಅವನನ್ನು ಬಿಟ್ಟುಬಿಡಿ. ನಮಗೆ ಎಕ್ಯೂ ಖಾನ್ ಇಷ್ಟ. ನಾವು ಎಕ್ಯೂ ಖಾನ್ ಜೊತೆ ಕೆಲಸ ಮಾಡುತ್ತಿದ್ದೇವೆ. ಅವನನ್ನು ಬಿಟ್ಟುಬಿಡಿ' ಎಂದು ಕೇಳಿಕೊಂಡಿತ್ತೆಂದು ತಿಳಿಸಿದ್ದಾರೆ.

### ಬಂಗಾಳ ಕೊಲ್ಲಿಯಲ್ಲಿ 'ಮೋಂಥಾ' ಸೈಕ್ಲೋನ್ ಅಬ್ಬರ

ಎಂದು ಇಲಾಖೆ ತಿಳಿಸಿದೆ. ಚಂಡಮಾರುತ ಪರಿಣಾಮವಾಗಿ ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್ ಪ್ರದೇಶದಲ್ಲಿ ಅ.28ರವರೆಗೂ ಮಳೆ ಮುಂದುವರಿಯಲಿದೆ.

ಈ ಚಂಡಮಾರುತಕ್ಕೆ ಅಂತರರಾಷ್ಟ್ರೀಯ ಸಮುದಾಯದ ಶಿಫಾರಸಿನಂತೆ ಥಾಯ್ಲೆಂಡ್‌ನ ಮೊಂಥಾ ಎಂಬ ಹೆಸರು ಇಡಲಾಗಿದೆ. ಅ.27ರಂದು ಚೆನ್ನೈ, ತಿರುವಲ್ಲೂರು ಮತ್ತು ರಾಣಿಪೇಟೆ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಿದೆ. ಈ ಪ್ರದೇಶಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

### ಹೈಕಮಾಂಡ್ ಹೇಳಿದ್ರೆ ಸಚಿವ ಸ್ಥಾನ ಬಿಡಲು ಸಿದ್ಧ:ಬೈರೇಗೌಡ

ಆಗಿತ್ತು. ಹೊರಗಡೆ ಇದ್ದವರಿಗೆ ಅವಕಾಶ ಕೊಡಬೇಕು ಎಂಬ ನಿರ್ಧಾರ ಆಗಿತ್ತು. ಸಂಪುಟಕ್ಕೆ ಅರ್ಹತೆ ಇರುವವರಿಗೆ ಅವಕಾಶ ಸಿಗಬೇಕು. ಆದರೆ, ನಾಯಕತ್ವ ಬದಲಾವಣೆ ಬಗ್ಗೆ ಹೈಕಮಾಂಡ್ ತೀರ್ಮಾನ ಮಾಡುತ್ತದೆ. ಸಚಿವ ಸಂಪುಟ ಪುನರ್ ರಚನೆಗೂ ನಾಯಕತ್ವ ಬದಲಾವಣೆಗೂ ಸಂಬಂಧವಿಲ್ಲ ಎಂದು ಹೇಳಿದರು.

ಬಿಜೆಪಿಯವರಿಗೆ ದ್ರಾಕ್ಷಿ ಗೊಂಚಲು ಹುಳಿ ಅನ್ನುವ ರೀತಿ ಆಗಿದೆ. ರಾಜಕೀಯ ಮಾತನಾಡಿ ಬೇಳೆ ಬೇಯಿಸಿಕೊಳ್ಳುತ್ತಾರೆ. ಬಿಜೆಪಿಯವರಿಗೆ ಅಧಿಕಾರ ಇಲ್ಲ, ನೀರಿನಿಂದ ಹೊರಬಿದ್ದ ಮೀನಿನಂತೆ ಒದ್ದಾಡುತ್ತಿದ್ದಾರೆ. ಅವರು ಇರೋದೆ ಸರ್ಕಾರದ ವಿರುದ್ಧ ಮಾತನಾಡಲು. ಬಿಜೆಪಿಗರಿಗೆ ಅಧಿಕಾರದ ಹಪಾಹಪಿ ಇದೆ. ಅಧಿಕಾರ ಬಿಟ್ರೆ ಬೇರೆ ಏನು ಜ್ಞಾನ ಇಲ್ಲ, ಅಧಿಕಾರ ಇಲ್ಲದೆ ಚಡಿಪಡಿಸುತ್ತಿದ್ದಾರೆ. ನಾವು ಜವಾಬ್ದಾರಿ ಸ್ಥಾನದಲ್ಲಿದ್ದೇವೆ, ಕೆಲಸ ಮಾಡುತ್ತಿದ್ದೇವೆ ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್‌ನ ಒಬ್ಬೊಬ್ಬ ನಾಯಕರು ಒಂದೊಂದು ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಇದು ಪ್ರಜಾಪ್ರಭುತ್ವ, ಯಾರು ಯಾವ ಅಭಿಪ್ರಾಯವನ್ನ ಬೇಕಾದರೂ ವ್ಯಕ್ತಪಡಿಸಬಹುದು. ಒಬ್ಬೊಬ್ಬರದು ಒಂದೊಂದು ಅಭಿಪ್ರಾಯ ಇರುತ್ತದೆ. ಐದು ಬೆರಳು ಸಮನಾಗಿರಲ್ಲ. ಹೈಕಮಾಂಡ್ ಎಲ್ಲವನ್ನೂ ಗಮನಿಸುತ್ತೆ, ಅವರೇ ಎಲ್ಲವನ್ನೂ ತೀರ್ಮಾನ ಮಾಡುತ್ತಾರೆ ಎಂದರು.

ಯತೀಂದ್ರ ಹೇಳಿಕೆ ವಿಚಾರವಾಗಿ ಮಾತನಾಡಿ, ಇಂತಹ ವಿಷಯಗಳ ಬಗ್ಗೆ ನಾನು ಮಾತನಾಡಲ್ಲ. ಸಿಎಂ ಜವಾಬ್ದಾರಿ ಹಾಗೂ ಕೆಲಸ ಕೊಟ್ಟಿದ್ದಾರೆ. ರಾಜಕೀಯ ಅಭಿಪ್ರಾಯ ಮಾತನಾಡಲು ಪಕ್ಷದ ಚೌಕಟ್ಟು ಇದೆ. ಹೈಕಮಾಂಡ್ ಇದೆ, ಅಲ್ಲಿ ಏನು ಹೇಳಬೇಕು ಹೇಳುತ್ತೇನೆ. ಹೈಕಮಾಂಡ್ ಕಾಲಕಾಲಕ್ಕೆ ತೀರ್ಮಾನ ಮಾಡುತ್ತಾರೆ ಎಂದು ಹೇಳಿದರು.

ನಾವು ವೋಟ್ ಚೋರಿ ಅಭಿಯಾನ ಮಾಡುತ್ತಿದ್ದೇವೆ. ಪ್ರಜಾಪ್ರಭುತ್ವದ ಜೀವಾಳವೇ ಚುನಾವಣೆ. ಇದನ್ನ ಹಾಳು ಮಾಡುವ ಪ್ರಯತ್ನ ನಡೆದಿದೆ. ಇಡಿ, ಐಟಿ, ಸಿಬಿಐ ಸಂಸ್ಥೆಗಳು ರಾಜಕೀಯವಾಗಿ ಬಳಕೆಯಾಗುತ್ತಿವೆ. ಈ ಬಗ್ಗೆ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಗಳೇ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸೀಳು ನಾಯಿಗಳ ರೀತಿಯಲ್ಲಿ ಸಂವಿಧಾನದ ಸಂಸ್ಥೆಗಳ ಬಳಕೆಯಾಗಿದೆ. ಚುನಾವಣಾ ಆಯೋಗವೇ ಪಕ್ಷಪಾತವಾಗಿ ಚುನಾವಣೆ ಮಾಡಿದೆ. ಕಳೆದ ಚುನಾವಣೆಯಲ್ಲಿ ಮತಪಟ್ಟಿಯಲ್ಲಿ ವ್ಯತ್ಯಾಸ ಆಗಿದೆ. ನಮ್ಮ ರಾಜ್ಯದ ಎರಡು ಕ್ಷೇತ್ರಗಳಲ್ಲಿ ಬೆಳಕಿಗೆ ಬಂದಿದೆ. ಮಹದೇವಪುರ, ಆಳಂದದಲ್ಲಿ ಮತಗಳವು ಆಗಿದೆ, ಇದು ಕೂಡಲೇ ನಿಲ್ಲಬೇಕು. ಚುನಾವಣಾ ಆಯೋಗ ಸರಿಯಾಗಿ ಕೆಲಸ ಮಾಡಬೇಕು. ಈ ಬಗ್ಗೆ ನಾವು ದೇಶಾದ್ಯಂತ ಸಹಿ ಸಂಗ್ರಹ ಅಭಿಯಾನ ಮಾಡುತ್ತಿದ್ದೇವೆ. ಪ್ರಜಾಪ್ರಭುತ್ವ ಉಳಿಸಬೇಕು ಅಂದ್ರೆ, ಚುನಾವಣೆ ಪಾವಿತ್ರ್ಯತೆ ಕಾಪಾಡಬೇಕು ಎಂದು ತಿಳಿಸಿದರು

# ಹೊಕ್ರಾಣಾ.ಬಿಯಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿಯಿಂದ ಜಾಗೃತಿ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 25 : ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಹೊಕ್ರಾಣಾ.ಬಿ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಅನ್ನಭಾಗ್ಯ ಯೋಜನೆ: ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆ ಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನು ನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸ ಮಾಡಿದೆ. ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ. ಯುವನಿಧಿ: ಈ ಯೋಜನೆ ಪದವೀಧರರು ಮತ್ತು ಡಿಪ್ಲೋಮಾ ಮುಗಿಸಿದ ಯುವಕರಿಗೆ ಯೋಜನೆಯ ಕುರಿತು ಪೂರ್ಣ ಮಾಹಿತಿ ಇಲ್ಲದಿರುವ ಕಾರಣ, ಸಮಿತಿಯು ಕಾಲೇಜುಗಳಲ್ಲಿ ಮತ್ತು ಗ್ರಾಮ ಮಟ್ಟದಲ್ಲಿ ವಿಶೇಷ ಪ್ರಚಾರ ಆಂದೋಲನಗಳನ್ನು ನಡೆಸುತ್ತಿದೆ. ನೋಂದಣಿ ಪ್ರಕ್ರಿಯೆಯಲ್ಲಿ ಸಹಾಯ ಮಾಡುತ್ತಿದೆ. ಮತ್ತು ಗೃಹ ಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು. ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಶಿವಕುಮಾರ

ಕುತ್ತಾಬಬಾದ್, ಬೀದರ ಸಹಕಾರ ಯೂನಿಯನ್ ನಿಯಮಿತ ನಿರ್ದೇಶಕರಾದ ಶ್ರೀನಿವಾಸ ರೆಡ್ಡಿ ಪಾಟೀಲ್ ಮುಖಂಡರಾದ ಶರಣು ಪಾಟೀಲ್, ಅಯೂಬ್ ಶಾಹ್, ಉಮೇಶ್ ಫಲ್ಗೊಂಡ್, ಈಶ್ವರ ಚಟನಳ್ಳಿ, ಪವನ್ ಬಾಪೂರೆ, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ಕೇರಳಕ್ಕೆ ಹೊರಟ ಜಿಲ್ಲೆಯ ಗ್ರಾ.ಪಂ. ಸದಸ್ಯರು




ಮಲ್ಲಮ್ಮ ನುಡಿ ವಾರ್ತೆ

ಬೀದರ್:ಅ.25: ಜಿಲ್ಲೆಯ ಮೂರು ಗ್ರಾಮ ಪಂಚಾಯಿತಿಗಳ ಸದಸ್ಯರು ಅಧ್ಯಯನ ಪ್ರವಾಸಕ್ಕಾಗಿ ಶನಿವಾರ ಕೇರಳಕ್ಕೆ ಹೊರಟರು. ಮರಕಲ್, ಧೂಪತ್‌ಮಹಾಗಾಂವ್ ಹಾಗೂ ಅಂಬೆಸಾಂಗವಿ ಗ್ರಾಮ ಪಂಚಾಯಿತಿಗಳ ಅಧ್ಯಕ್ಷ, ಉಪಾಧ್ಯಕ್ಷ, ಅಭಿವೃದ್ಧಿ ಅಧಿಕಾರಿ ಹಾಗೂ ಸದಸ್ಯರು ನಗರದ ತಾಲ್ಲೂಕು ಪಂಚಾಯಿತಿಯಿಂದ ಬಸ್‌ನಲ್ಲಿ ಪ್ರಯಾಣ ಬೆಳೆಸಿದರು.

ಗ್ರಾಮ ಪಂಚಾಯಿತಿ ಕಲಿಕಾ ಕೇಂದ್ರಗಳನ್ನಾಗಿ ಗುರುತಿಸಲಾದ ಪಂಚಾಯಿತಿಗಳ ಪ್ರತಿನಿಧಿಗಳಿಗೆ ಕೇರಳದಲ್ಲಿ ಅ. 27 ಹಾಗೂ 28 ರಂದು ಕ್ಷೇತ್ರ ಭೇಟಿ ಇದೆ ಎಂದು ಮರಕಲ್ ಪಿಡಿಒ ಉಮೇಶ ಜಾಬಾ ತಿಳಿಸಿದರು.

ಒಟ್ಟು ಜಿಲ್ಲೆಯ ಐದು ಪಂಚಾಯಿತಿಗಳಿಗೆ ಪ್ರವಾಸ ಇದೆ. ಬೀದರನಿಂದ ಮೂರು ಪಂಚಾಯಿತಿಗಳ ಪ್ರತಿನಿಧಿಗಳು ಹೊರಟಿದ್ದು, ಹುಮನಾಬಾದ್‌ನಲ್ಲಿ ರಾಜೇಶ್ವರ ಪಂಚಾಯಿತಿ ಪ್ರತಿನಿಧಿಗಳು ನಮ್ಮೊಂದಿಗೆ ಸೇರಿಕೊಳ್ಳಲಿದ್ದಾರೆ. ಧುಮ್ಮನಸೂರು ಗ್ರಾಮ ಪಂಚಾಯಿತಿ ಪ್ರತಿನಿಧಿಗಳು ಪ್ರತ್ಯೇಕ ವಾಹನದಲ್ಲಿ ಈಗಾಗಲೇ ಪ್ರವಾಸ ಬೆಳೆಸಿದ್ದಾರೆ ಎಂದು ಹೇಳಿದರು. ಬೀದರ್ ತಾಲ್ಲೂಕು ಪಂಚಾಯಿತಿಯ ಸಹಾಯಕ ನಿರ್ದೇಶಕ ಸುದೇಶಕುಮಾರ ಕೊಡ್ಡೆ ಪ್ರವಾಸದ ನೇತೃತ್ವ ವಹಿಸಿದ್ದರು. ಪಿಡಿಒಗಳಾದ ಅನಿತಾ, ಗೀತಾ ಪಾಟೀಲ, ಪದ್ಮಪ್ಪ, ಪ್ರವಾಸ ತಂಡದ ಪ್ರತಿನಿಧಿಗಳು ಇದ್ದರು.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.25: ಬೀದರ ಜಿಲ್ಲೆಯಲ್ಲಿ ಕಾನೂನು ಪದವಿ ಪಡೆದಿರುವ ಹಿಂದುಳಿದ ವರ್ಗಗಳ 10 ಅಭ್ಯರ್ಥಿಗಳಿಗೆ ಸರಕಾರಿ ವಕೀಲರು ಅಥವಾ 20 ವರ್ಷಗಳಿಗಿಂತ ಹೆಚ್ಚಿನ ಅನುಭವವುಳ್ಳ ವಕೀಲರಿಂದ ತರಬೇತಿ ಕೊಡಿಸಲು ಈ ಹಿಂದೆ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಸ್ವೀಕರಿಸಿದ ಅರ್ಜಿಗಳಲ್ಲಿ 07 ಅಭ್ಯರ್ಥಿಗಳನ್ನು ಜಿಲ್ಲಾಧಿಕಾರಿಗಳು ಈಗಾಗಲೇ ಆಯ್ಕೆ ಮಾಡಲಾಗಿರುತ್ತದೆ. ಬಾಕಿ ಉಳಿದ 03 ಅಭ್ಯರ್ಥಿಗಳ ಆಯ್ಕೆಗಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯ ಅವಧಿಯು 4 ವರ್ಷಗಳಿದ್ದು, ತರಬೇತಿ ಅವಧಿಯಲ್ಲಿ ಮಾಸಿಕ 4000 ರೂ. ತರಬೇತಿ ಭತ್ಯೆ ನೀಡಲಾಗುತ್ತದೆ. ಅಭ್ಯರ್ಥಿಗಳು ಹಿಂದುಳಿದ ವರ್ಗಗಳ ಪ್ರವರ್ಗ-1,2ಎ,3ಎ,3ಬಿಗೆ ಸೇರಿದವರಾಗಿರಬೇಕು, ಬೀದರ ಜಿಲ್ಲೆಯ ನಿವಾಸಿಯಾಗಿರಬೇಕು, ಪ್ರವರ್ಗ-1 ರಡಿಯಲ್ಲಿ ಬರುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ಕುಟುಂಬ ವಾರ್ಷಿಕ ಆದಾಯ 3.50 ಲಕ್ಷ ರೂ. ಮತ್ತು ಪ್ರವರ್ಗ-2ಎ, 3ಎ ಮತ್ತು 3ಬಿ ಪ್ರವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ ಕುಟುಂಬ ವಾರ್ಷಿಕ ಆದಾಯ 2.50 ಲಕ್ಷ ಮಿತಿ ಮೀರಿರಬಾರದು. ಅಭ್ಯರ್ಥಿಯು ಬಾರ ಕೌನ್ಸಿಲ್‌ನಲ್ಲಿ ಹೆಸರನ್ನು ನೊಂದಾಯಿಸಿರಬೇಕು. ತರಬೇತಿಗೆ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕಕ್ಕೆ ಹಿಂದು 02 ವರ್ಷದೊಳಗಾಗಿ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕಡೆಯ ದಿನಾಂಕಕ್ಕೆ ಪ್ರವರ್ಗ 2ಎ, 3ಎ, ಮತ್ತು 3ಬಿಯ ಅಭ್ಯರ್ಥಿಯ ವಯಸ್ಸು 38ಕ್ಕೆ ಹಾಗೂ ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳ ವಯಸ್ಸು 40ಕ್ಕೆ ಮಿರಿರಬಾರದು. ಮತ್ತು ಅರ್ಜಿ ಸ್ವೀಕರಿಸಲು ನಿಗಡಿಪಡಿಸಿರುವ ಕಡೆಯ ದಿನಾಂಕಕ್ಕೆ ಅಭ್ಯರ್ಥಿಯು 3 ವರ್ಷಗಳ ಅವಧಿಯೊಳಗೆ ಕಾನೂನು ಪದವಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.

ದಾಖಲಾತಿಗಳು: ಎಸ್.ಎಸ್.ಎಲ್.ಸಿ.ದೃಢೀಕೃತ ಅಂಕಪಟ್ಟಿ, ಕಾನೂನು ಪದವಿ ಪರೀಕ್ಷೆಯ ಎಲ್ಲಾ ವರ್ಷಗಳ ದೃಢೀಕೃತ ಅಂಕಪಟ್ಟಿ, ತಹಸೀಲ್ದಾರರಿಂದ ನೀಡಲ್ಪಟ್ಟ ಜಾತಿ/ಆದಾಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಬಾರ ಕೌನ್ಸಿಲ್‌ನಲ್ಲಿ ನೋಂದಾಯಿಸಿದ ಪ್ರಮಾಣ ಪತ್ರ. ಅರ್ಹ ಅಭ್ಯರ್ಥಿಗಳು ಅರ್ಜಿ ನಮೂನೆಗಳನ್ನು ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ನಾವದಗೇರಿ ಬೀದರ ಇಲ್ಲಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ದಿನಾಂಕ: 05-11-2025 ರಂದು ಸಂಜೆ 05:00 ಗಂಟೆಯೊಳಗೆ ಜಿಲ್ಲಾ ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ನಾವದಗೇರಿ ಬೀದರ ಇಲ್ಲಿಗೆ ಸಲ್ಲಿಸಬಹುದಾಗಿದೆ ಎಂದು ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಮಟ್ಟದ ಹಿಂದುಳಿದ ವರ್ಗಗಳ ಕಾನೂನು ಪದವೀಧರರ ಆಯ್ಕೆ ಸಮಿತಿ ಹಾಗೂ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೀದರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅ.28 ರಂದು ಸಲೀಂ ಅಹ್ಮದ್ ಬೀದರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.25: ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕರಾದ ಸಲೀಂ ಅಹ್ಮದ್ ಅವರು ಅಕ್ಟೋಬರ್.28 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅವರು ಅ.27 ರಂದು ರಾತ್ರಿ 11 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಹೊರಟು ಅ.28 ರಂದು ರಾತ್ರಿ 1 ಗಂಟೆಗೆ ಬೀದರಗೆ ಆಗಮಿಸಿ ಬೀದರನ ಸರ್ಕ್ಯೂಟ್ ಹೌಸ್‌ದಲ್ಲಿ ವಾಸ್ತವ್ಯ ಹೂಡಲಿದ್ದಾರೆ.

ನಂತರ ಬೆಳಿಗ್ಗೆ 7.30 ಕ್ಕೆ ಬೀದರ್ ವಿಮಾನ ನಿಲ್ದಾಣಕ್ಕೆ ಆಗಮಿಸಿ ಬೆಳಿಗ್ಗೆ 8 ಗಂಟೆಗೆ ಎಸ್5-160 ಸ್ಟಾರ್ ಏರ್ ವಿಮಾನದ ಮೂಲಕ ಬೆಂಗಳೂರಿಗೆ ತೆರಳಲಿದ್ದಾರೆಂದು ಸರ್ಕಾರಿ ಮುಖ್ಯ ಸಚೇತಕರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಲ್ಲೂಕುಮಟ್ಟದ ಕ್ರೀಡಾಕೂಟ 29ಕ್ಕೆ

ಬೀದರ್: ಅ.25:ಮೇರಾ ಯುವ ಭಾರತ್, ಎಸ್.ಎಸ್.ಕೆ. ಕಾಲೇಜು ಹಾಗೂ ಭಗತ್‌ಸಿಂಗ್ ಯುವಕ ಸಂಘದ ವತಿಯಿಂದ

ಬಸವಕಲ್ಯಾಣದ ಎಸ್.ಎಸ್.ಕೆ. ಬಸವೇಶ್ವರ ಕಲಾ, ವಿಜ್ಞಾನ, ವಾಣಿಜ್ಯ ಸ್ನಾತಕ ಹಾಗೂ ಸ್ನಾತಕೋತ್ತರ ಕಾಲೇಜಿನಲ್ಲಿ ಅಕ್ಟೋಬರ್ 29 ರಂದು ಬಸವಕಲ್ಯಾಣ ತಾಲ್ಲೂಕುಮಟ್ಟದ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿದೆ. ಕ್ರೀಡಾಕೂಟದಲ್ಲಿ ವೈಯಕ್ತಿಕ ಹಾಗೂ ಗುಂಪು ಸ್ಪರ್ಧೆಗಳು ನಡೆಯಲಿವೆ. ವೈಯಕ್ತಿಕ ಸ್ಪರ್ಧೆಯಲ್ಲಿ ಯುವಕರ ವಿಭಾಗದಲ್ಲಿ ಬ್ಯಾಡ್ಮಿಂಟನ್, ವೇಟ್ ಲಿಫ್ಟಿಂಗ್, ಯುವತಿಯರ ವಿಭಾಗದಲ್ಲಿ 100 ಮೀಟರ್ ಓಟ ಹಾಗೂ ಸ್ಲೋ ಸೈಕ್ಲಿಂಗ್ ಸ್ಪರ್ಧೆಗಳು ನಡೆಯಲಿವೆ.

ಗುಂಪು ಸ್ಪರ್ಧೆಯಲ್ಲಿ ಯುವಕರ ವಿಭಾಗದಲ್ಲಿ ವಾಲಿಬಾಲ್ ಹಾಗೂ ಯುವತಿಯರ ವಿಭಾಗದಲ್ಲಿ ಕಬಡ್ಡಿ ಸ್ಪರ್ಧೆ ಜರುಗಲಿವೆ ಎಂದು ಮೇರಾ ಯುವ ಭಾರತ್‌ನ ಸೋಮನಾಥ ಪೂಜಾರಿ ತಿಳಿಸಿದ್ದಾರೆ. ಸ್ಪರ್ಧೆಗಳಲ್ಲಿ ವಿಜೇತರಾದವರು ಜಿಲ್ಲಾಮಟ್ಟದ ಸ್ಪರ್ಧೆಗೆ ಅರ್ಹರಾಗಲಿದ್ದಾರೆ. ಸ್ಪರ್ಧೆಯಲ್ಲಿ ಭಾಗವಹಿಸ ಬಯಸುವ 15 ರಿಂದ 29 ವರ್ಷಗಳ ಒಳಗಿನ ಆಸಕ್ತರು ಮೊಬೈಲ್ ಸಂಖ್ಯೆ 9004315246 (ಸೋಮನಾಥ ಪೂಜಾರಿ), 9900992524 (ಮಲ್ಲಿಕಾರ್ಜುನ) ಅಥವಾ 9945941350 (ಶಿವಾನಂದ ಬಿರಾದಾರ)ಗೆ ಸಂಪರ್ಕಿಸಿ ಹೆಸರು ನೋಂದಾಯಿಸಬಹುದು ಎಂದು ಹೇಳಿದ್ದಾರೆ.

# ಮಾರುತದಲ್ಲಿ ಶಿವಯ್ಯ ಸ್ವಾಮಿ ನಟನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್:ಅ.25: ಎಸ್.ನಾರಾಯಣ್ ನಿರ್ದೇಶನದ 'ಮಾರುತ' ಚಿತ್ರದ ಪಾತ್ರವೊಂದರಲ್ಲಿ ನಟಿಸುವ ಮೂಲಕ ಜಿಲ್ಲೆಯವರೇ ಆದ ಕೇಂದ್ರ ಸರ್ಕಾರದ ರಾಜ್ಯ ಅಭಿವೃದ್ಧಿ, ಸಮನ್ವಯ ಹಾಗೂ ಮೇಲುಸ್ತುವಾರಿ ಸಮಿತಿಯ ಸದಸ್ಯ ಶಿವಯ್ಯ ಸ್ವಾಮಿ ಗಮನ ಸೆಳೆದಿದ್ದಾರೆ.

ಚಿತ್ರದಲ್ಲಿ ಸಮಾಜಕ್ಕೆ ಉತ್ತಮ ಸಂದೇಶ ನೀಡುವ ಗ್ರಾಮದ ಪ್ರಮುಖರೊಬ್ಬರ ಪಾತ್ರದಲ್ಲಿ ನಟಿಸಿದ್ದಾಗಿ ಶಿವಯ್ಯ ಸ್ವಾಮಿ ತಿಳಿಸಿದ್ದಾರೆ. ಧಾರವಾಡ ಜಿಲ್ಲೆಯ ಅಣ್ಣಿಗೇರಿಯ ದೇಸಾಯಿ ಅವರ 108 ಬಾಗಿಲುಗಳ ಮನೆಯಲ್ಲಿ ಎರಡು ದಿನ ಚಿತ್ರೀಕರಣದಲ್ಲಿ ಪಾಲ್ಗೊಂಡಿದ್ದೇನೆ ಎಂದು ಹೇಳಿದ್ದಾರೆ. ಚಿತ್ರದಲ್ಲಿ ಬೀದರನ ಪ್ರವೀಣ್ ಸ್ವಾಮಿ, ನಾಗರಾಜ ಮಠ, ರೇವಣಸಿದ್ದಯ್ಯ ಮಠಪತಿ ಹಾಗೂ ಕೇದಾರನಾಥ ಅವರು ಶಾಸ್ತ್ರಿಗಳ ಪಾತ್ರ ನಿರ್ವಹಿಸಿದ್ದಾರೆ ಎಂದು ತಿಳಿಸಿದ್ದಾರೆ. ಮೂರು ದಶಕದಿಂದ ಸಾಮಾಜಿಕ ಚಟುವಟಿಕೆಯಲ್ಲಿ ಸಕ್ರಿಯರಾಗಿರುವ ಶಿವಯ್ಯ ಸ್ವಾಮಿ ಈಗ ಸ್ಯಾಂಡಲ್‌ವುಡ್‌ನಲ್ಲಿ ಪಾತ್ರ ನಿರ್ವಹಿಸಿರುವುದು ವಿಶೇಷವಾಗಿದೆ.

ಮಾರುತ ಚಿತ್ರದಲ್ಲಿ ದುನಿಯಾ ವಿಜಯ್, ಶ್ರೇಯಸ್ ಮಂಜು ಪ್ರಮುಖ ಪಾತ್ರದಲ್ಲಿದ್ದಾರೆ. ಕ್ರೇಜಿ ಸ್ಟಾರ್ ರವಿಚಂದ್ರನ್ ವಿಶೇಷ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಬೃಂದಾ ನಾಯಕಿಯಾಗಿದ್ದಾರೆ.

ನಿಶ್ಚಿಕಾ ನಾಯ್ಡು, ರಂಗಾಯಣ ರಘು, ತಾರಾ ಅನುರಾಧ, ಶರತ ಲೋಹಿತಾಶ್ವ, ಪ್ರಮೋದ್ ಶೆಟ್ಟಿ ಮೊದಲಾದವರು ಚಿತ್ರದಲ್ಲಿದ್ದಾರೆ. ಪಿ.ಕೆ.ಎಚ್. ದಾಸ್ ಛಾಯಾಚಿತ್ರಗ್ರಹಣ, ಶಿವಪ್ರಸಾದ್ ಯಾದವ್ ಸಂಕಲನವಿದೆ. ಚಿತ್ರಕ್ಕೆ ಕೆ. ಮಂಜು ಹಾಗೂ ರಮೇಶ್ ಯಾದವ್ ಬಂಡವಾಳ ಹೂಡಿದ್ದಾರೆ.

# ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 25 : ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಈ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ವಿಭಾಗದಲ್ಲಿ ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನವನ್ನು ಆಯೋಜಿಸಲಾಗಿದೆ ಎಂದು ಗುರುಮಠಕಲ್ ತಹಸೀಲ್ದಾರರು ಹಾಗೂ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರ ಸಹಾಯಕ ಮತದಾರರ ನೋಂದಣಾಧಿಕಾರಿ ಶಾಂತಗೌಡ ಬಿರಾದರ ಅವರು ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗವು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಈ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳನ್ನು, ಆಯುಕ್ತರು ಮಹಾನಗರ ಪಾಲಿಕೆ ಕಲಬುರಗಿ, ಹಾಗೂ ಬಳ್ಳಾರಿ, ಕಲಬುರಗಿ ವಿಭಾಗದ ಆಯಾ ಉಪವಿಭಾಗಕ್ಕೆ ಸಂಬಂಧಪಟ್ಟ ಎಲ್ಲಾ ಸಹಾಯಕ ಆಯುಕ್ತರು, ವಿಭಾಗದ ಎಲ್ಲಾ ಸಂಬಂಧಪಟ್ಟ ತಾಲೂಕಿನ ತಹಸೀಲ್ದಾರರನ್ನು ಸಹಾಯಕ ಮತದಾರರ ನೊಂದಣಾಧಿಕಾರಿಯನ್ನಾಗಿ ನೇಮಿಸಿರುತ್ತದೆ. ಅರ್ಹತಾ 2025ರ ನವೆಂಬರ್ 1ಕ್ಕೆ ಅನ್ವಯಿಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ನೂತನವಾಗಿ ಸಿದ್ದಪಡಿಸುವ ಕಾರ್ಯವು ಈಗಾಗಲೇ ಪ್ರಾರಂಭವಾಗಿದ್ದು ಕೊನೆಯ ದಿನ 2025ರ ನವೆಂಬರ್ 6 ಆಗಿರುತ್ತದೆ. ಪ್ರಸ್ತುತ ನೋಂದಣೀ ಕಾರ್ಯವನ್ನು ತೀರ್ವಗತಿಯಲ್ಲಿ ಕೈಗೊಳ್ಳಲು ದಿನ 2025ರ ಅಕ್ಟೋಬರ್ 27 ಹಾಗೂ 30 ರಂದು ಮತ್ತು ನವೆಂಬರ್ 3 ರಂದು ಜಿಲ್ಲೆಯ ಎಲ್ಲಾ ತಾಲೂಕಿನ ತಹಸೀಲ್ ಕಛೇರಿಯಲ್ಲಿ ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ ವನ್ನು ಆಯೋಜಿಸಿದ್ದು, ಈ ಅಭಿಯಾನಕ್ಕೆ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ತಾಲೂಕುವಾರು ನೇಮಕ ಮಾಡಲಾಗಿರುತ್ತದೆ. ನೋಂದಣಿಗೆ ಸಂಬಂಧಿಸಿದಂತೆ ಆಯಾ ತಾಲೂಕಿನ ತಹಸೀಲ್ ಕಛೇರಿಗೆ ಭೇಟಿ ನೀಡಬೇಕು.

ವೇಳಾಪಟ್ಟಿ ವಿವರ : 2025ರ ನವೆಂಬರ್ 6ರ ಗುರುವಾರ ರಂದು ಅರ್ಜಿ ನಮೂನೆ-19ರಲ್ಲಿ ಅರ್ಜಿಯನ್ನು ಸ್ವೀಕರಿಸಲು ಕೊನೆಯ ದಿನವಾಗಿದೆ. 2025ರ ನವೆಂಬರ್ 25ರ ಮಂಗಳವಾರ ರಂದು ಕರಡು ಮತದಾರರ ಪಟ್ಟಿ ಪ್ರಕಟ. 2025ರ ನವೆಂಬರ್ 25 ರಿಂದ 2025ರ ಡಿಸೆಂಬರ್ 10ರ ಬುಧವಾರ ರಂದು ಹಕ್ಕು ಮತ್ತು ಆಕ್ಷೇಪಣೆಗಳಿಗಾಗಿ ನಿಗದಿಪಡಿಸಿದೆ. 2025ರ ಡಿಸೆಂಬರ್ 30ರ ಮಂಗಳವಾರ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆ.

ಹೆಚ್ಚಿನ ಮಾಹಿತಿಗಾಗಿ ಗುರುಮಿಠಕಲ್ ತಾಲೂಕಿಗೆ ಯಾದಗಿರಿ ತೋಟಗಾರಿಕೆ ಇಲಾಖೆ ಉಪ ನಿರ್ದೇಶಕರು ರಾಘವೇಂದ್ರ, ಮೊ.ನಂ.9886752866 ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಜಿ ಸೈನಿಕ ಸಂಘದ ಸುವರ್ಣ ಮಹೋತ್ಸವ ಆಚರಣೆ: ಕರಂಜಿ




ಬೀದರ್. ಅ. 25 : ಬೀದರ್ ಇಂದು(26/10/2025) ಸಾಯಂಕಾಲ 4ಗಂಟೆಗೆ ಡಾ.ಚನ್ನಬಸವಪಟ್ಟದ್ದೇವರ ರಂಗಮಂದಿರದಲ್ಲಿ ಮಾಜಿ ಸೈನಿಕರ ಸಂಘದ ಸುವರ್ಣ ಮಹೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಗೌರವಾಧ್ಯಕ್ಷ ಅಶೋಕಕುಮಾರ ಕರಂಜಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶನಿವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಸುವರ್ಣ ಮಹೋತ್ಸವ ಆಚರಣೆಯನ್ನು ಬಹಳ ಅದ್ದೂರಿಯಿಂದ ಆಚರಿಸಲಾಗುತ್ತದೆ. ಬೀದರ್, ಸಂಘವನ್ನು 50 ವಸಂತ ಪೂರೈಸಿದ ಸಂದರ್ಭದಲ್ಲಿ ಜಿಲ್ಲಾ ಮಾಜಿ ಸೈನಿಕ ಸಂಘದ ಅಧಿಕಾರಿಗಳು ಹಾಗೂ ಮಾಜಿ ಸೈನಿಕರು. ಮತ್ತು ಅವರ ಕುಟುಂಬದ ಸದಸ್ಯರಿಗೆ ಈ ಕಾರ್ಯಕ್ರಮದಲ್ಲಿ ಈ ಭೂ ಸೈನ್ಯ, ಜಲ ಸೈನ್ಯ ಮತ್ತು ವಾಯು ಸೈನ್ಯ ಸೇರಿದಂತೆ ಜಿಲ್ಲೆಯ ಎಲ್ಲಾ ಸದಸ್ಯರು ಈ ಸುವರ್ಣ ಮಹೋತ್ಸವದ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಮನವಿ ಮಾಡಿದರು. 1975ರಲ್ಲಿ ಮಾಜಿ ಸೈನಿಕರ ಸಂಘ ಸ್ಥಾಪಿಸಲಾಯಿತು. ಜಿಲ್ಲೆಯ ಮಾಜಿ ಸೈನಿಕರ ಸಂಘದ ಸಂಸ್ಥಾಪಕರಾದ ವೆಂಕಟರಾವ್ ತೆಲಂಗಾ, ಸ್ವ ಗುರಪ್ಪ ಬಿರಾದಾರ ಚಿದ್ರಿ, ಸ್ವ ಚೆನ್ನಬಸವ ಚೌಬಾರಾ, ಸ್ವ ರಾಮುಲು ಹಾಗೂ ಸ್ವ ಸಿದ್ದಪ್ಪ ಅಣದುರ ಅವರ ನೇತೃತ್ವದಲ್ಲಿ ಸಂಘ ಪ್ರಾರಂಭಿಸಲಾಯಿತು. ನಂತರ ಜಿಲ್ಲಾ ಸಂಘದ ಅಧ್ಯಕ್ಷರಾಗಿ ಮುಂದುವರೆದ ಕೆ.ಕೆ ಶಿವರಾಜ, ತಾನು, ಸತ್ಯಂದರ್ ಸಿಂಗ್ ಪ್ರಸ್ತುತ ಪಾಂಡಪ್ಪ ಮೇತ್ರೆ ಸೇರಿದಂತೆ ಹಲವರು ಈ ಸಂಘಕ್ಕೆ ಬಹಳ ದೊಡ್ಡ ಮಟ್ಟದಲ್ಲಿ ಬೆಳೆಯಲು ಕಾರಣಿಕರ್ತರಾಗಿದ್ದಾರೆ. ಅವರೆಲ್ಲರ ನೇತೃತ್ವದಲ್ಲಿ ಸಂಘವು ಒಳ್ಳೆಯ ರೀತಿಯಿಂದ ಕೆಲಸ ಮಾಡುತ್ತಾ ಬಂದಿದೆ. ಸಂಘವು 1982 ರಲ್ಲಿ ಸರ್ಕಾರದಿಂದ ಒಂದು ನಿವೇಶನ ನೀಡಲಾಗಿತ್ತು. ಅಂದಿನ ಅಧ್ಯಕ್ಷರ ಪ್ರಯತ್ನದಿಂದ 2007-08 ರಲ್ಲಿ ಬೀದರ್ ಜಿಲ್ಲೆಯ ಎಲ್ಲಾ ಮಾಜಿ ಸೈನಿಕರ ಕರ ನೂರು ಪ್ರತಿಶತ ವಿನಾಯತಿ ನೀಡಲಾಗಿತ್ತು. ಜಿಲ್ಲೆಯ ಮಾಜಿ ಸೈನಿಕರ ಪ್ರಯತ್ನದಿಂದ ಒಂದು ತಗಡಿನ ಶೇಶ್ ನಿಂದ ಪ್ರಾರಂಭವಾಗಿದ್ದ ಸಂಘವು ಪ್ರಸ್ತುತ ಒಂದು ಭವ್ಯವಾದ ಕಟ್ಟಡದಲ್ಲಿ ನಮ್ಮ ಸಂಘದ ಕಚೇರಿ ಕಾರ್ಯನಿರ್ವಹಿಸುತ್ತಿದೆ. ಇದರ ಉಪಯೋಗ ಕೂಡ ಎಲ್ಲರು ಪಡೆದುಕೊಂಡಿದ್ದಾರೆ. ತದನಂತರ ಸಂಘದ ಸತತ ಪ್ರಯತ್ನದಿಂದ ದೆಹಲಿಯಲ್ಲಿ ಸತತವಾಗಿ ಐದು ತಿಂಗಳುಗಳಿಂದ ಎಸ್ ನಿರ್ದೇಶಕರ ಕಚೇರಿಗೆ ಸಂಪರ್ಕಿಸಿದಾಗ ಬೀದರ್ ಜಿಲ್ಲೆಗೆ ಇಅಊಖ ಆಸ್ಪತ್ರೆ ಒದಗಿ ಬಂದಿದೆ. ಬರಬೇಕಾದರೆ ಅದಕ್ಕೆ ಕಾರಣಿಕರ್ತರಾದ ಅಂದಿನ ಜಿಲ್ಲಾ ಮಾಜಿ ಸೈನಿಕ್ ಸಂಘದ ಜಿಲ್ಲಾ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಎಂದು ಹೇಳಬಹುದು. ಸದ್ಯದಲ್ಲಿ ಜಿಲ್ಲೆಯ ಎಲ್ಲಾ ಮಾಜಿ ಸೈನಿಕರಿಗೂ ಹಾಗೂ ಅವರ ಕುಟುಂಬಸ್ಥರಿಗೂ ಇಅಊಖ ಆಸ್ಪತ್ರೆಯ ಇಲ್ಲಿನ ಏರ್ ಫೋರ್ಸ್ ಆವರಣದಲ್ಲಿ ಸ್ಥಾಪನೆ ಮಾಡಲಾಯಿತು. ಎಲ್ಲಾ ಮಾಜಿ ಸೈನಿಕರು ಇಅಊಖ ಆಸ್ಪತ್ರೆಯಲ್ಲಿ

## ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ:

# ಹೆಸರು ನೊಂದಣಿಗೆ ಅರ್ಜಿ ಸಲ್ಲಿಸಲು ನವೆಂಬರ್ 6 ಕೊನೆ ದಿನ-ಜಹೀರಾ ನಸೀಮ್

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ,ಅ.25-ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಹಿನ್ನೆಲೆಯಲ್ಲಿ ಅರ್ಹತಾ ದಿನಾಂಕ 01.11.2025ಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆದಿದ್ದು,ಅರ್ಹ ಮತದಾರರು ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ನವೆಂಬರ್ 6 ಕೊನೆಯ ದಿನವಾಗಿದೆ ಎಂದು ಕ್ಷೇತ್ರದ ಚುನಾವಣಾಧಿಕಾರಿಯಾಗಿರುವ ಪ್ರಾದೇಶಿಕ ಆಯುಕ್ತೆ ಜಹೀರಾ ನಸೀಮ್ ತಿಳಿಸಿದ್ದಾರೆ.

ಮತದಾರರ ಪರಿಷ್ಕರಣೆ ಭಾಗವಾಗಿ ಕರಡು ಮತದಾರರ ಪಟ್ಟಿಯನ್ನು ನವೆಂಬರ್ 25 ರಂದು ಪ್ರಕಟಿಸಿ ಡಿಸೆಂಬರ್ 10 ರೊಳಗೆ ಆಕ್ಷೇಪಣೆ ಅಹ್ವಾನಿಸಲಾಗುತ್ತದೆ. ಅಂತಿಮ ಮತದಾರರ ಪಟ್ಟಿಯನ್ನು 2025ರ ಡಿಸೆಂಬರ್ 30 ರಂದು ಪ್ರಕಟಿಸಲಾಗುತ್ತದೆ ಎಂದು ಮತದಾರರ ಪರಿಷ್ಕರಣೆ ಕಾರ್ಯದ ಬಗ್ಗೆ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕ್ಷೇತ್ರಕ್ಕೆ ಪ್ರಾದೇಶಿಕ ಆಯುಕ್ತರು ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ಕಲಬುರಗಿ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳು, ಕಲಬುರಗಿ ಮತ್ತು ಬಳ್ಳಾರಿ ಮಹಾನಗರ ಪಾಲಿಕೆ ಆಯುಕ್ತರು, ವಿಭಾಗದ ಎಲ್ಲಾ ಸಹಾಯಕ ಆಯುಕ್ತರು, ತಹಶೀಲ್ದಾರರು ಸಹಾಯಕ ಮತದಾರರ ನೊಂದಣಾಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದು ಈ ಕಚೇರಿಗಳಿಗೆ ಕಾಲಮಿತಿಯಲ್ಲಿ ಅರ್ಜಿ, ಆಕ್ಷೇಪಣೆ ಸಲ್ಲಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ಈ ಹಿಂದೆ ಮತದಾರರ ಪಟ್ಟಿಯಲ್ಲಿ ಹೆಸರಿದ್ದರು ಸಹ ಇದೀಗ ಪುನ: ನಮೂನೆ-19ರಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಂಡು ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕೆಂದು ಮತದಾರರ ನೋಂದಣಾಧಿಕಾರಿ ಜಹೀರಾ ನಸೀಮ ಅವರು ಮನವಿ ಮಾಡಿದ್ದಾರೆ. ಹೆಸರು ಸೇರಿಸಲು ಅರ್ಹತೆ ಏನು? ಭಾರತದ ಪ್ರಜೆಯಾಗಿರುವ ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ನವೆಂಬರ್ 2025 ಕ್ಕೆ ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ಧಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹೀಗಾಗಿ ಅರ್ಜಿಯೊಂದಿಗೆ ಅಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ಬಿಳಿ ಬಣ್ಣದ ಹಿನ್ನೆಲೆ ಹೊಂದಿದ 2 ಪಾಸ್ ಪೋರ್ಟ್ ಅಳತೆಯ ಭಾವಚಿತ್ರ ಹಾಗೂ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ-2ರಲ್ಲಿ ಸಂಬಳ ಬಟವಾಡೆ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ ಲಗತ್ತಿಸಬೇಕು. ಮತದಾರ ಪಟ್ಟಿಗೆ ಹೆಸರು ಸೇರಿಸಲು ಬಯಸುವ ವ್ಯಕ್ತಿ ಕಾರ್ಯನಿರ್ವಹಿಸುವ ಸ್ಥಳ ಬದಲಾಗಿ ಸಾಮಾನ್ಯ ನಿವಾಸಿಯಾಗಿ ವಾಸಿಸುತ್ತಿರುವ ಸ್ಥಳೀಯ ಕ್ಷೇತ್ರದಲ್ಲಿ ಹೆಸರು ನೊಂದಾಯಿಸಬಹುದಾಗಿದೆ.

ಬಲ್ಕ್ ಅರ್ಜಿ ಸ್ವೀಕರಿಸಲ್ಲ: ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ ಅರ್ಜಿಗಳನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸುವುದಿಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಸಿಬ್ಬಂದಿಗಳ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಗಳಿಗೆ ಸಲ್ಲಿಸಬಹುದು. ಬಲ್ಕ್ (ಗುಚ್ಚದ) ರೂಪದಲ್ಲಿ ಅರ್ಜಿ ಸ್ವೀಕರಿಸಲ್ಲ. ಕುಟಂಬದ ಎಲ್ಲಾ ಸದಸ್ಯರ ಅರ್ಜಿಗಳನ್ನು ಕುಟುಂಬ ಯಾರಾದರು ಒಬ್ಬ ಸದಸ್ಯರು ಸಲ್ಲಿಸಬಹುದಾಗಿದೆ. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದಲ್ಲಿ ಪ್ರಜಾಪ್ರಾತಿನಿಧ್ಯ ಅಧಿನಿಯಮ-1950ರ 31 ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಒಳಪಡಿಸಲಾಗುವುದು ಎಂದು ಚುನಾವಣಾಧಿಕಾರಿಗಳು ತಿಳಿಸಿದರು.

### ಅಕ್ಟೋಬರ್ 27 ಮತ್ತು 30 ಹಾಗೂ ನವೆಂಬರ್ 3 ರಂದು

## ಜಿಲ್ಲೆಯಾದ್ಯಂತ ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ -ಬಿ.ಫೌಜಿಯಾ ತರನ್ನುಮ್

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ,ಅ.25-ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಈಗಾಗಲೇ ಆರಂಭವಾಗಿದ್ದು, ಇದೇ ಅಕ್ಟೋಬರ್ 27 ಮತ್ತು 30 ಹಾಗೂ ನವೆಂಬರ್ 3ರಂದು ಕಲಬುರಗಿ ಜಿಲ್ಲೆಯಾದ್ಯಂತ ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಈಶಾನ್ಯ ಶಿಕ್ಷಕರ ಕ್ಷೇತ್ರದ ಎಲ್ಲಾ ಮತದಾರರರು ಈ ಅಭಿಯಾನವನ್ನು ಯಶಸ್ವಿಗೊಳಿಸಬೇಕೆಂದು ಕ್ಷೇತ್ರದ ಸಹಾಯಕ ಮತದಾರರ ನೊಂದಣಾಧಿಕಾರಿಯಾಗಿರುವ ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌ-ಜಿಯಾ ತರನ್ನುಮ್ ತಿಳಿಸಿದ್ದಾರೆ.

01.11.2025ಕ್ಕೆ ಅರ್ಹತಾ ದಿನಾಂಕಕ್ಕೆ ಅನ್ವಯಿಸುವಂತೆ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಕ್ಷೇತ್ರದಾದ್ಯಂತ ನಡೆದಿದ್ದು, ಅರ್ಹ ಮತದಾರರು ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ನವೆಂಬರ್ 6 ಕೊನೆಯ ದಿನವಾಗಿರುತ್ತದೆ. ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು ಎಂಬ ಉದ್ದೇಶದಿಂದ ಈ ಮತದಾರರ ವಿಶೇಷ ನೊಂದಣಿ ಆಯೋಜಿಸಿದ್ದು, ಶಿಕ್ಷಕ ಮತದಾರರು ಇದರ ಲಾಭ ಪಡೆಯುವಂತೆ ಅವರು ಮನವಿ ಮಾಡಿದ್ದಾರೆ.

ಯಾವುದೇ ಒಂದು ಚುನಾವಣೆಯು ಪಾರದರ್ಶಕವಾಗಿ, ನ್ಯಾಯಸಮ್ಮತವಾಗಿ, ಯಾವುದೇ ಅಹಿತಕರ ಘಟನೆಗೆ ಆಸ್ಪದ ನೀಡದೆ ಶಾಂತಿಯುತವಾಗಿ ನಡೆಯಬೇಕಾದಲ್ಲಿ ದೋಷರಹಿತ ಮತದಾರರ ಪಟ್ಟಿ ತಯಾರಿಸುವುದು ಅತ್ಯಗತ್ಯವಾಗಿರುತ್ತದೆ. ಈ ರೀತಿ ಮತದಾರರ ಪಟ್ಟಿ ಸಿದ್ದಪಡಿಸಬೇಕಾದಲ್ಲಿ ಅರ್ಹ ಮತದಾರರು ನೊಂದಾಯಿಸುವುದು ಅವಶ್ಯಕವಾಗಿರುತ್ತದೆ. ಸುಭದ್ರ ಮತ್ತು ಪ್ರಜಾಪ್ರಭುತ್ವ ವ್ಯವಸ್ಥೆ ಬಲಪಡಿಸುವ ನಿಟ್ಟಿನಲ್ಲಿ ಜಿಲ್ಲಾಯಾದ್ಯಂತ ವಾಸವಿರುವ ಎಲ್ಲಾ ಅರ್ಹ ಮತದಾರರು ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರು ಸೇರಿಸಿಕೊಳ್ಳಬೇಕೆಂದು ಡಿ.ಸಿ. ಬಿ.ಫೌ-ಜಿಯಾ ತರನ್ನುಮ್ ಕೋರಿದ್ದಾರೆ.

## ಮಲ್ಲಿಕಾರ್ಜುನ ಮದಾನಿ ಅವರಿಗೆ ಅಭಿನಂದನಾ ಸಮಾರಂಭ



ಕಲಬುರಗಿ: ಕೇಂದ್ರ ಬಸ್ ನಿಲ್ದಾಣದ ಹಿಂದುಗಡೆ ಇರುವ ಶಕ್ತಿ ನಗರ ಹನುಮಾನ ಮಂದಿರದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಬ್ಯಾಕಲಾಗ ಹುದ್ದೆಗಳ ಯಶಸ್ವಿಗೆ ಕಾರಣೀಭೂತರು ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರಾಗಿ ಸೇವೆ ಸಲ್ಲಿಸಿ, ಸೇವಾ ವಯೋನಿವೃತ್ತಿ ಹೊಂದಿರುವ ಮಲ್ಲಿಕಾರ್ಜುನ್ ಮದಾನಿ ರವರ ಧರ್ಮಪತ್ನಿ ಶಶಿಕಲಾ ಅವರಿಗೆ ಬಂಧು-ಮಿತ್ರರು ಹಾಗೂ ಅಭಿಮಾನಿ ಬಳಗದವರಿಂದ ಅಭಿನಂದನಾ ಸಮಾರಂಭ ಜರುಗಿತು.

ಈ ಸಂದರ್ಭದಲ್ಲಿ ಪೂಜ್ಯ ಭಂತೆ ನಾಗರತ್ನ, ಶಾಸಕರಾದ ಅಲ್ಲಮಪ್ರಭು ಪಾಟೀಲ, ಎಮ್. ವಾಯ್ ಪಾಟೀಲ, ಬಸವರಾಜ ಮತ್ತಿಮಡು, ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ, ನಾಗಮೂರ್ತಿ ಶೀಲವಂತ, ದೇವಣ್ಣ ಕಟ್ಟಿ, ಡಾ. ಪ್ರಶಾಂತ ಕಾಂಬಳೆ ಮಹೇಶ ಕಡೆಕರ, ಸುರೇಶ ಗೌರೆ, ಸತೀಶ ಗಡಕರ್, ಚಂದ್ರಶೇಖರ ಗುಪ್ತಾ, ಸದಾನಂದ ಹುಗ್ಗಿಕರ್, ಬಸಣ್ಣ ಸಿಂಗೆ, ಯಶ್ವಂತ್ ಶಿಂದೆ, ಶರಣಬಸಪ್ಪ ಫಂಟಿ, ಅಮೃತ ಮಾಹೂರಕರ್, ಪ್ರಕಾಶಕುಮಾರ ಶರ್ಮಾ, ಡಾ. ಹನುಮಂತರಾವ ದೊಡ್ಡಮನಿ, ಡಾ. ಚಂದ್ರಶೇಖರ ದೊಡ್ಡಮನಿ, ಅಶೋಕ ತಳಕೇರಿ, ಡಾ. ಮಾರುತಿ ಬೇಂದ್ರೆ, ಶಶಿಕಾಂತ ಹೊಳಕರ್, ಯಶ್ವಂತ ಸಿಂಧೆ, ಜಗನ್ನಾಥ ತೇಲಕರ್, ಎಸ್.ಪಿ ನಂದಗಿರಿ, ಗೋರಕನಾಥ ಸಜ್ಜನ್, ಸತೀಶ ಸಜ್ಜನ, ಬಸಣ್ಣ ಸಿಂಗೆ, ಪ್ರವೀಣನಾಗ ದೋಳೆ, ಲಕ್ಷ್ಮಣ ಕನಕಟಕರ್, ವೈಜನಾಥ ಬಾವಿಕಟ್ಟಿ, ಶಂಕರ ಕುಮಸಿ, ಪರಮೇಶ್ವರ ಧನ್ನಿ, ಬಸವರಾಜ ಬಿರಾದಾರ ಸೇರಿದಂತೆ ಇತರರು ಇದ್ದರು.




ಕಲಬುರಗಿ: ನಗರದ ವಿದ್ಯಾನಗರ ಪ್ರಿಯದರ್ಶಿನಿ ಕನ್ಯಾ ಪ್ರೌಢ ಶಾಲೆಯಲ್ಲಿ ಹಳೆ ವಿದ್ಯಾರ್ಥಿಗಳ ಸಂಘದಿಂದ ಗುರುವಂದನ ಕಾರ್ಯಕ್ರಮವನ್ನು ಉಷಾ ಪಟವರಿ ಅವರು ಉದ್ಘಾಟಿಸಿದರು. ಬುದ್ಧವಂದನೆ ಮುದ್ದು ಮಕ್ಕಳಿಂದ ಮಾಡಿಸಲಾಯಿತು. ಸರಸ್ವತಿ ಭಾವಚಿತ್ರಕೆ ಹಿರಿಯ ಶಿಕ್ಷಕರಿಂದ ಪೂಜೆ ಮಾಡಲಾಯಿತು. ಮುಖ್ಯ ಅತಿಥಿಗಳಾದ ಪದ್ಮಾ ಬಿ ಶ್ರೀನಿವಾಸ್, ಅತಿಥಿ ಶಾಂತಪ್ಪ ಕಟ್ಟಿಮನಿ, ಹಿರಿಯ ಶಿಕ್ಷಕರಾದ ಗಿರಿಜಾ ನಿಡಗುಂದಿ, ಕೋಮಲಾ, ಶಶಿಕಲಾ ಪಾಟೀಲ್, ಅಣ್ಣಪ್ಪ ಸುಂದರಕರ್, ಸಿಂಧೂಮತಿ ಬೋಸ್ಲೆ, ಮುಖ್ಯಪಾಧ್ಯಾಕ ಚಂದ್ರಶೇಖರ ಪೋಳಪಲ್ಲಿ ಹಾಗೂ ಶಿಕ್ಷಕವೃಂದವರು ಉಪಸ್ಥಿತರಿದ್ದರು. ಕಾರ್ಯಕ್ರಮದ ಉಸ್ತುವಾರಿ ಸುಪ್ರಿಯಾ ರಮೇಶ್ ರಾಠೋಡ್ ಮತ್ತು ಅಶ್ವಿನಿ ಚವ್ಹಾಣ ಅವರು ವಹಿಸಿಕೊಂಡಿದರು. ಎಲ್ಲ ಹಳೆಯ ವಿದ್ಯಾರ್ಥಿಗಳು ತಮ್ಮ ತಮ್ಮ ಉದ್ಯೋಗದ ಕುರಿತು ಹೇಳಿದರು. (ಮಲ್ಲಮ್ಮ ನುಡಿ ಚಿತ್ರ)



ಕಲಬುರಗಿ: ರಾಜಾಪೂರ ಸರ್ವೋದಯ ಕಾಲನಿ ಮತ್ತು ಗುಲುಸ್ತಾನಿ-ಇ-ಶಾಹಿ ಕಾಲೋನಿಯಲ್ಲಿ ಕೆ.ಕೆ.ಆರ್.ಡಿ.ಬಿ ಅನುದಾನದಲ್ಲಿ ರೂ. 70.00ಲಕ್ಷಗಳ ವೆಚ್ಚದಲ್ಲಿ ನಿರ್ಮಿಸಲಿರುವ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕರಾದ ಅಲ್ಲಮಪ್ರಭು ಪಾಟೀಲ್ ಅವರು ಶನಿವಾರ ಗುದ್ದಲಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾಜಿ ಮೇಯರ್ ರವಿಂದ್ರನಾಥ ಹೋನ್ನಳ್ಳಿ, ಸಾಯಬಣ್ಣ ಹೋಳಕರ್, ವಿಠಲ್ ಗೋಳಾ, ರಾಹುಲ ಹೋನ್ನಳ್ಳಿ, ಕುಮಾರ ಯಾಧವ, ವಿಕ್ರಮ ರಾಠೋಡ, ಸಂಘಪಾಲ ಕಾಂಬಳೆ, ಆನಂದ ರಾಠೋಡ, ದೇವಿಂದ್ರ ನಡುವಿನಮನಿ, ಎಇಇ ಸೌರಬ, ಎಇ ಅಫಸರ್ ಬಾಬಾ ಸೇರಿದಂತೆ ಹಿರಿಯ ಮುಖಂಡರು ಇದ್ದರು. (ಮಲ್ಲಮ್ಮ ನುಡಿ ಚಿತ್ರ)

### ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥ ಸಂಚಲನ28 ಕ್ಕೆ

## ಶಾಂತಿಸಭೆ ನಡೆಸಿ ಅಂತಿಮವರದಿ ಸಲ್ಲಿಸಲು ಹೈಕೋರ್ಟು ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.25: ರಾಷ್ಟ್ರೀಯ ಸ್ವಯಂಸೇವಕ ಸಂಘಟನೆ (ಆರ್‌ಎಸ್‌ಎಸ್) ನವೆಂಬರ್ 2 ರಂದು ಚಿತ್ತಾಪುರದಲ್ಲಿ ನಡೆಸಲು ಉದ್ದೇಶಿಸಿರುವ ಪಥ ಸಂಚಲನ ಸಂಬಂಧ ಅ.28 ರಂದು ಎಲ್ಲ ಸಂಘಟನೆಗಳ ಜೊತೆಗೆ ಶಾಂತಿ ಸಭೆ ನಡೆಸಿ ಅಂತಿಮ ವರದಿ ಸಲ್ಲಿಸಲು ಜಿಲ್ಲಾಡಳಿತಕ್ಕೆ ಕಲಬುರಗಿ ಹೈಕೋರ್ಟು ಪೀಠ ಮಹತ್ವದ ಸೂಚನೆ ನೀಡಿದೆ. ಮುಂದಿನ ವಿಚಾರಣೆಯನ್ನು ಅ,30 ಕ್ಕೆ ಮುಂದೂಡಿದೆ

ನಿಮ್ಮ ಆಡಳಿತ ಸಾಮಥ್ಯ ಸಾಬೀತಿಗೆ ಇದು ಸಕಾಲ. ಎಲ್ಲರಿಗೂ ಸಮಾಧಾನಕರವಾಗುವಂತೆ ಸಮಸ್ಯೆ ಬಗೆಹರಿಸುವಂತೆ ಸಮಸಯೆ ಬಗೆಹರಿಸಿ ಎಂದು ಕೋರ್ಟು ಸರಕಾರಕ್ಕೆ ಕಿವಿಮಾತು ಹೇಳಿದೆ .

ಆರ್‌ಎಸ್‌ಎಸ್ ನ.2ರಂದು ಪಥಸಂಚಲನ ನಡೆಸಲು ಅನುಮತಿ ಕೋರಿ ಅರ್ಜಿ ಸಲ್ಲಿಸಿದರೆ, ಮತ್ತೊಂದೆಡೆ ಹಲವು ಸಂಘಟನೆಗಳು ಅಂದೇ ನಮಗೂ ಅವಕಾಶ ಕೊಡಿ ಎಂದು ಅರ್ಜಿ ಹಾಕಿದ್ದವು. ಈ ಮಧ್ಯೆ ಎಲ್ಲಾ ಅರ್ಜಿಗಳ ವಿಚಾರಣೆ ಶುಕ್ರವಾರ ಕಲಬುರಗಿಯ ಹೈಕೋರ್ಟ್ ನ್ಯಾಯಮೂರ್ತಿ ಎಂ.ಜಿ.ಎಸ್.ಕಮಲ್ ಅವರ ಏಕ ಸದಸ್ಯ ಪೀಠದಲ್ಲಿ ನಡೆಯಿತು.

ಜಿಲ್ಲಾಡಳಿತದ ಪರವಾಗಿ ಎಜಿ ಶಶಿಕಿರಣ್ ವಾದ ಮಂಡಿಸಿ ಸದ್ಯ ಪಥಸಂಚಲನಕ್ಕೆ ಅನುಮತಿ ಬೇಡ ಕಾನೂನು ಸುವ್ಯವಸ್ಥೆ ಸಮಸ್ಯೆಯಾಗುತ್ತದೆ. ಹೀಗಾಗಿ ಇನ್ನಷ್ಟು ಕಾಲಾವಕಾಶ ಕೊಡಬೇಕು ಅಂತ ವಾದ ಮಂಡಿಸಿದ್ದರು. ಈ ವೇಳೆ ಆರ್‌ಎಸ್‌ಎಸ್ ಪರ ಹಿರಿಯ ವಕೀಲ್ ಅರುಣ್ ಶ್ಯಾಮ್ ವಾದ ಮಂಡಿಸಿ, ಈಗಾಗಲೇ ನ್ಯಾಯಾಲಯ ಸೂಚಿಸಿದಂತೆ ನವೆಂಬರ್ 2ರಂದು ಅನುಮತಿಗೆ ನಾವು ಕಾಯುತ್ತಿದ್ದೇವೆ. ಆದರೆ ದಿನ ಕಳೆದಂತೆ ಉದ್ದೇಶ ಪೂರ್ವಕವಾಗಿ ಅರ್ಜಿಗಳು ಸಲ್ಲಿಕೆಯಾಗಿ ಕಾಲಹರಣ ಮಾಡಲಾಗುತ್ತಿದೆ. ಕಾನೂನು ಸುವ್ಯವಸ್ಥೆ ಸಮಸ್ಯೆಯಿದ್ದರೆ ಕೇಂದ್ರದಿಂದ ಹೆಚ್ಚಿನ ಭದ್ರತೆ ತರಿಸಿಕೊಳ್ಳಲಿ ಅಂತ ವಾದ ಮಂಡಿಸಿದರು.

ವಾದ ಪ್ರತಿವಾದ ಆಲಿಸಿದ ಕೋರ್ಟ್ ಅಕ್ಟೋಬರ್ 28ಕ್ಕೆ ಎಲ್ಲಾ ಸಂಘಟನೆಗಳ ಜೊತೆ ಶಾಂತಿ ಸಭೆ ನಡೆಸಿ ಅಂತಿಮ ವರದಿ ಸಲ್ಲಿಸಲು ಜಿಲ್ಲಾಡಳಿತಕ್ಕೆ ಸೂಚನೆ ನೀಡಿತು. ಅಲ್ಲದೆ, ಅಕ್ಟೋಬರ್ 30ರಂದು ಮಧ್ಯಾಹ್ನ 2.30ಕ್ಕೆ ಮುಂದಿನ ವಿಚಾರಣೆಯನ್ನು ಮುಂದೂಡಿದ್ದಾರೆ.

## ಮರಿಯಮ್ಮದೇವಿ, ಸೇವಾಲಾಲ ಮಹಾರಾಜರ ನೂತನ ದೇವಸ್ಥಾನ, ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ:ಅ.25: ಶಹಾಬಾದ ರಸ್ತೆಯ ಶ್ರೀ ಸೇವಾಲಾಲ ನಗರ, ನೃಪತುಂಗ ಕಾಲೋನಿ ಹತ್ತಿರ ಶ್ರೀ ಮರಿಯಮ್ಮ ದೇವಿ ಮತ್ತು ಶ್ರೀ ಸೇವಾಲಾಲ ಮಹಾರಾಜರ ದೇವಸ್ಥಾನದ ಶ್ರೀ ಮರಿಯಮ್ಮದೇವಿ ಮತ್ತು ಶ್ರೀ ಸೇವಾಲಾಲ ಮಹಾರಾಜರ ನೂತನ ದೇವಸ್ಥಾನ, ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಕಾರ್ಯಕ್ರಮ ಹಾಗೂ ಧಾರ್ಮಿಕ ಕಾರ್ಯಕ್ರಮವನ್ನು ಮಠಾಧಿಶರು, ಗಣ್ಯರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಸುಕ್ಷೇತ್ರ ಮುಗಳನಾಗಾವಿಯ ಪರಮ ಪೂಜ್ಯ ಶ್ರೀ ಷ. ಬ್ರ ಅಭಿನವ ಸಿದ್ದಲಿಂಗ ಶಿವಾಚಾರ್ಯರು, ಪರಮ ಪೂಜ್ಯ ಶ್ರೀ ಪರ್ವತಲಿಂಗ ಪರಮೇಶ್ವರ ಮಹಾರಾಜರು, ಪರಮ ಪೂಜ್ಯ ಶ್ರೀ ಜೇಮಸಿಂಗ್ ಮಹಾರಾಜರು,

ಪರಮ ಪೂಜ್ಯ ಶ್ರೀ ಬಳಿರಾಮ ಮಹಾರಾಜರು, ಪರಮ ಪೂಜ್ಯ ಶ್ರೀ ದತ್ತ ದಿಗಂಬರ ಶರಣ ಶಂಕರಲಿಂಗ ಮಹಾರಾಜರು, ಪರಮ ಪೂಜ್ಯ ಶ್ರೀ ಮುರಾಹಲ ಮಹಾರಾಜರು, ಪರಮ ಪೂಜ್ಯ ಮಾತೋಶ್ರೀ ಲತಾದೇವಿ, ಪರಮ ಪೂಜ್ಯ ಶ್ರೀ ಸೋಮನಾಥ ಮಹಾರಾಜರು, ಪರಮ ಪೂಜ್ಯ ಮಾತೋಶ್ರೀ ಕಲಾವತಿದೇವಿ, ಪರಮ ಪೂಜ್ಯ ಶ್ರೀ ಅನೀಲ ಮಹಾರಾಜರು,

ಶಾಸಕರಾದ ಬಸವರಾಜ ಮತ್ತಿಮೂಡ, ಅಲ್ಲಮ ಪ್ರಭು ಪಾಟೀಲ, ಮಾಜಿ ಸಚಿವ ರೇವುನಾಯಕ ಬೆಳಮಗಿ, ಮಾಜಿ ಸಂಸದರಾದ ಉಮೇಶ ಜಾಧವ, ಹರಿಬಾ ರಾಠೋಡ, ಕೆನಬ್ರಿಡ್ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ನವಶಾದ್ ಎನ್. ಇರಾನಿ, ಮಾಜಿ ಸಚಿವ ಬಾಬುರಾವ ಚವ್ಹಾಣ, ಶ್ರೀ ಸೇವಾಲಾಲ ದೇವಸ್ಥಾನ ಟ್ರಸ್ಟ್‌ನ ಅಧ್ಯಕ್ಷ ಸುಭಾಷ ಹೆಚ್ ಚವ್ಹಾಣ ಹಾಗೂ ಉಪಾಧ್ಯಕ್ಷ ರಾಜು ಎಮ್. ಚವ್ಹಾಣ (ಆರ್‌ಎಮ್‌ಸಿ) ಸೇರಿದಂತೆ ಶ್ರೀ ಸೇವಾಲಾಲ ದೇವಸ್ಥಾನ ಟ್ರಸ್ಟ್‌ನ ಸದಸ್ಯರು, ರಾಜಕೀಯ ಮುಖಂಡರು, ಬಡಾವಣೆಯ ಮುಖಂಡರು, ಮಹಿಳೆಯರು, ಯುವಕರು ಇದ್ದರು.

## ಉಡಮನಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ತಾಲೂಕಿನ ಉಡಮನಳ್ಳಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಾಗಿ ವೀರಪ್ಪ ಗುಂಡಪ್ಪ ದಂಡಿನ ಉಪಾಧ್ಯಕ್ಷರಾಗಿ ಜಗನಾಥ ಭೀಮಶಾ ಫಲ್ಲಾ ಅವಿರೋಧವಾಗಿ ಆಯ್ಕೆಯಾದರು. ಶನಿವಾರ ಸಂಘದ ಕಾರ್ಯಾಲಯದಲ್ಲಿ ಜರುಗಿದ. ಅಧ್ಯಕ್ಷರ ಹಾಗೂ ಉಪಾಧ್ಯಕ್ಷರ ಸ್ಥಾನಕ್ಕೆ ಒಬ್ಬರೆ ನಾಮಪತ್ರ ಸಲ್ಲಿಸಿದರಿಂದ ಅವಿರೋಧವಾಗಿ ಘೋಷಣೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಅರುಣಕುಮಾರ್ ಜಿ. ತಿಳಿಸಿದ್ದಾರೆ. ನಂತರ ಸಂಘದ ಕಾರ್ಯದರ್ಶಿ ಕಾಶಿನಾಥ ಭಮಶೆಟ್ಟಿ ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಹಾಗೂ ಸರ್ವ ಸದಸ್ಯರನ್ನು ಸನ್ಮಾನಿಸಿದರು. ನೂತನ ಅಧ್ಯಕ್ಷ ವೀರಪ್ಪ ದಂಡಿನ ಮಾತನಾಡಿ, ರೈತರ ಏಳಿಗೆಗಾಗಿ ಏನು ಮಾಡಬೇಕು ಎಂಬುದನ್ನು ಯೋಜನೆ ಹಾಕಿಕೊಂಡು ಕಾರ್ಯರೂಪಕ್ಕೆ ತರಲಾಗುತ್ತದೆ. ಅಲ್ಲದೆ ರೈತರ ಉತ್ತೇಜನಕ್ಕೆ ಪ್ರಯತ್ನ ಮಾಡುತ್ತೇನೆ, ಸರ್ಕಾರದಿಂದ ಬರುವ ಸೌಲಭ್ಯಗಳನ್ನು ರೈತರಿಗೆ ಮುಟ್ಟಿಸುವ ಕಾರ್ಯ ಪ್ರಾಮಾಣಿಕವಾಗಿ ಮಾಡುತ್ತೇನೆ ಎಂದು ತಿಳಿಸಿದರು ಈ ಸಂದರ್ಭದಲ್ಲಿ ಜಿಲ್ಲಾ ಸಹಕಾರ ಸಂಘಗಳ ಇಲಾಖೆಯ ಸಿಬ್ಬಂದಿ ಶಿವಾನಂದ ಹಡಪದ, ನಿರ್ದೇಶಕರಾದ ರಿಯಾಜೋದ್ದಿನ ಮೋಜನ್, ರಮೇಶ ಉಡಬಾಳ, ಶ್ರೀಮಂತ ಮೇಕಲೇ, ರಘುನಾಥ ನೆಲವಾಳ, ಸೋಮನಾಥ ಭಮಶೆಟ್ಟಿ, ಫಾಳೆಪ್ಪ ಬೋರಾಳ, ನಾಗಮ್ಮ ದಂಡಿನ, ತಳಸೇಮ್ಮಾ ಯಾಲೋಗೈ, ಸಿಬ್ಬಂದಿಗಳಾದ ರೇವಣಸಿದ್ದಪ್ಪ ಚಿಂತಪಳ್ಳಿ, ಗುಂಡಪ್ಪ ದಂಡಿನ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸ್ವ:ಲಕ್ಷ್ಮೀಬಾಯಿ ಗರುಡಕರ್ ನಿಧನ

ಮಲ್ಲಮ್ಮ ನುಡಿ ವಾರ್ತೆ



ಹುಮನಾಬಾದ:ತಾಲ್ಲೂಕಿನ ಮಾಣಿಕನಗರ ಗ್ರಾಮದ ನಿವಾಸಿ ಸ್ವ:ಲಕ್ಷ್ಮೀಬಾಯಿ ಗಂ/ ಶಾಮರಾವ್ ಗರುಡಕರ್ (75) ಆನಾರೋಗ್ಯದಿಂದ ಬಳಲುತ್ತಿದ್ದ ಇವರು ಶನಿವಾರ ಬೆಳಿಗ್ಗೆ 11:30 ಗಂಟೆಗೆ ನಿಧನರಾಗಿದ್ದಾರೆ. ಎರಡು ಹೆಣ್ಣುಮಕ್ಕಳು ಎರಡು ಗಂಡು ಮಕ್ಕಳು, ಹಾಗೂ ಮೊಮ್ಮಕ್ಕಳು ಅಪಾರ ಬಂಧುಬಳಗವನ್ನು ಅವರು ಅಗಲಿದ್ದಾರೆ. ಅಂತಯಕ್ರಿಯೇಯು ಇಂದು 12:30 ಗಂಟೆಗೆ ಮಾಣಿಕನಗರದ ರುದ್ರಭೂಮಿಯಲ್ಲಿ ನೆರವೇರಿಸಲಾಗುವುದು ಎಂದು ಅವರ ಕುಟುಂಬದ ಸದಸ್ಯರು ತಿಳಿಸಿದ್ದಾರೆ. ಸಂತಾಪ: ಸಚಿವ ಈಶ್ವರ ಖಂಡ್ರೆ, ಸಂಸದ್ ಸಾಗರ್ ಖಂಡ್ರೆ, ಮಾಜಿ ಸಚಿವ ರಾಜಶೇಖರ ಬಿ.ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಭೀಮರಾವ ಪಾಟೀಲ, ಡಾ.ಚಂದ್ರಶೇಖರ ಪಾಟೀಲ, ಅಭಿಷೇಕ ಪಾಟೀಲ, ಡಿಸಿಸಿ ಬ್ಯಾಂಕಿನ ಮಾಜಿ ಅಧ್ಯಕ್ಷರಾದ ಉಮಕಾಂತ ನಾಗಮಾರಪಳ್ಳಿ, ಸೂರ್ಯಕಾಂತ ನಾಗಮಾರಪಳ್ಳಿ, ಮಾಜಿ ಜಿಲ್ಲಾ ಪಂಚಾಯತ್ ಉಪಾಧ್ಯಕ್ಷ ಲಕ್ಷ್ಮಣರಾವ ಬುಳ್ಳಾ, ಮಲ್ಲಿಕಾರ್ಜುನ ಮಾಶೆಟ್ಟಿ, ದತ್ತಕುಮಾರ ಚಿದ್ರಿ, ಕರಿಬಸಪ್ಪ ಖಂಡಗೊಂಡ, ಪಾಂಡುರಂಗ ಖಂಡಗೊಂಡ, ರಮೇಶ ಖಂಡಗೊಂಡ, ನಿಸರ್ ಪಟೇಲ್, ಖಾಸಿಮ್ ಪಟೇಲ್ ಮೋಳಕೇರಾ, ಧೋಳಪ್ಪ ವಳಖಿಂಡಿ, ಹಾಗೂ ಸಮಸ್ತ ವಾಘ್ಮಾರೆ ಪರಿವಾರ ಹಾಗೂ ಮಾಣಿಕನಗರ ಗ್ರಾಮದ ನಿವಾಸಿಗಳು ಇವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

## ಸಚಿವ ಸ್ಥಾನ ತ್ಯಾಗಕ್ಕೆ ಸಿದ್ಧ: ಸಚಿವ ಕೃಷ್ಣ ಭೈರೇಗೌಡ ಅಚ್ಚರಿ ಹೇಳಿಕೆ!

ಮಲ್ಲಮ್ಮ ನುಡಿ ವಾರ್ತೆ



ಬೆಂಗಳೂರು: ರಾಜ್ಯ ಕಾಂಗ್ರೆಸ್ ನಲ್ಲಿ ನವೆಂಬರ್ ನಲ್ಲಿ ಕ್ರಾಂತಿಯಾಗುತ್ತದೆ, ಅಧಿಕಾರ ಹಂಚಿಕೆಯಾಗುತ್ತದೆ, ಸಂಪುಟ ಪುನಾರಚನೆಯಾಗಲಿದೆ ಇತ್ಯಾದಿ ವಿಚಾರಗಳು ತೀವ್ರ ಚರ್ಚೆಯಲ್ಲಿರುವಾಗ ಕಂದಾಯ ಸಚಿವ ಕೃಷ್ಣ ಭೈರೇಗೌಡ ಸ್ಫೋಟಕ ಹೇಳಿಕೆ ನೀಡಿದ್ದಾರೆ.

ಇಂದು ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸಚಿವ ಸ್ಥಾನ ತ್ಯಾಗಕ್ಕೆ ಸಿದ್ಧ ಎಂದು ಹೇಳಿದ್ದಾರೆ. ಪಕ್ಷ ನನಗೆ ಎಲ್ಲವನ್ನೂ ನೀಡಿದೆ. ಅರ್ಹತೆಗೂ ಮೀರಿ ಅವಕಾಶಗಳನ್ನು ಪಕ್ಷ ನೀಡಿದೆ. ನನ್ನನ್ನು ಗುರುತಿಸಿ ಸಾಕಷ್ಟು ಅವಕಾಶಗಳನ್ನು ಕೊಟ್ಟಿರುವುದಕ್ಕೆ ಆಭಾರಿಯಾಗಿದ್ದೇನೆ. ಸಚಿವ ಸ್ಥಾನದ ತ್ಯಾಗಕ್ಕೆ ಸಿದ್ದ ಎಂದಿದ್ದಾರೆ.

ಕೆಲವು ದಿನಗಳ ಹಿಂದಷ್ಟೇ ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತ ಸಚಿವರಿಗೆ ಔತಣ-ಕೂಟ ಏರ್ಪಡಿಸಿದ್ದರು. ಸಂಪುಟ ಪುನಾರಚನೆ ಸಂಬಂಧ ಚರ್ಚೆಗಾಗಿಯೇ ಈ ಔತಣಕೂಟ ಏರ್ಪಟ್ಟಿತ್ತು ಎಂಬ ಚರ್ಚೆ ರಾಜಕೀಯ ವಲಯದಲ್ಲಿ ಕೇಳಿ ಬಂದಿತ್ತು. ಆದರೆ, ಈ ಚರ್ಚೆಯನ್ನು ಮುಖ್ಯಮಂತ್ರಿಗಳು ಹಾಗೂ ಇತರ ಕಾಂಗ್ರೆಸ್ ನಾಯಕರು ನಿರಾಕರಿಸಿದ್ದರು. ಈ ಬಾರಿ 26 ಲಕ್ಷ ಭಕ್ತರು ಹಾಸನಾಂಬ ದೇವಿ ದರ್ಶನ ಪಡೆದಿದ್ದಾರೆ ಎಂದು ಹಾಸನ ಜಿಲ್ಲೆ ಉಸ್ತುವಾರಿ ಸಚಿವರೂ ಕೂಡ ಆಗಿರುವ ಕೃಷ್ಣ ಭೈರೇಗೌಡ ಹೇಳಿದರು. ಹಾಸನಾಂಬ ದೇವಿ ಅಂದರೆ ಹಸನ್ಮುಖಿ, ಪ್ರಸನ್ನತೆಯ ಸಂಕೇತ. ದೇವಿಯ ದರ್ಶನ ಪಡೆದ ಭಕ್ತರು ಸಂತೋಷದಿಂದ ಹೋಗಿದ್ದಾರೆ. ದರ್ಶನ ಪಡೆದ 26 ಲಕ್ಷ ಭಕ್ತರ ಪೈಕಿ ಶೇ 60ರಷ್ಟು ಮಹಿಳೆಯರು ಎಂದು ತಿಳಿಸಿದರು.

## ಕಾಂಗ್ರೆಸ್ ಸರ್ಕಾರದ ನಿರ್ಲಕ್ಷ್ಯ, ಬೇವಾವಾಬ್ದಾರಿತನ, ಅಸಾಮರ್ಥ್ಯಕ್ಕೆ ಇನ್ನೆಷ್ಟು ಅಮಾಯಕ ಜೀವಗಳು ಬಲಿಯಾಗಬೇಕು?

ಮಲ್ಲಮ್ಮ ನುಡಿ ವಾರ್ತೆ



ಬೆಂಗಳೂರು: ಕಾಂಗ್ರೆಸ್ ಸರ್ಕಾರದ ನಿರ್ಲಕ್ಷ್ಯ, ಬೇವಾವಾಬ್ದಾರಿತನ, ಅಸಾಮರ್ಥ್ಯಕ್ಕೆ ಇನ್ನೆಷ್ಟು ಅಮಾಯಕ ಜೀವಗಳು ಬಲಿಯಾಗಬೇಕು ಎಂದು ರಾಜ್ಯ ಬಿಜೆಪಿ ಶನಿವಾರ ಕಿಡಿಕಾರಿದೆ.

ರಸ್ತೆ ಗುಂಡಿಗೆ ನಗರದಲ್ಲಿ ಮಹಿಳೆಯೊಬ್ಬರು ಬಲಿಯಾಗಿರುವ ಹಿನ್ನೆಲೆಯಲ್ಲಿ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು, ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ವ್ಯತ್ಯುಕೂಪಗಳಾಗಿರುವ ಬೆಂಗಳೂರಿನ ರಸ್ತೆ ಗುಂಡಿಗಳಿಗೆ ಮತ್ತೊಂದು ಜೀವ ಬಲಿಯಾಗಿದೆ. ರಸ್ತೆಗುಂಡಿ ತಪ್ಪಿಸಲು ಹೋಗಿ ದ್ವಿಚಕ್ರ ವಾಹನದಿಂದ ಕೆಳಗೆ ಬಿದ್ದು ಲಾರಿ ಚಕ್ರಕ್ಕೆ ಸಿಲುಕಿ ಮಹಿಳೆಯೊಬ್ಬರು ಸಾವನ್ನಪ್ಪಿದ ಹೃದಯವಿದ್ರಾವಕ ಘಟನೆ ಇಂದು ಬೆಳಿಗ್ಗೆ ಮಾದನಾಯಕನಹಳ್ಳಿ ಹುಸ್ಕೂರು ಎಪಿಎಂಸಿ ಬಳಿ ನಡೆದಿದೆ. ನಿಮ್ಮ ಸರ್ಕಾರದ ನಿರ್ಲಕ್ಷ್ಯ, ಬೇವಾವಾಬ್ದಾರಿತನ, ಅಸಾಮರ್ಥ್ಯಕ್ಕೆ ಇನ್ನೆಷ್ಟು ಅಮಾಯಕ ಜೀವಗಳು ಬಲಿಯಾಗಬೇಕು ಸ್ವಾಮಿ? ಎಂದು ಸರ್ಕಾರಕ್ಕೆ ಪ್ರಶ್ನಿಸಿದ್ದಾರೆ.

ಸಿಟಿ ರೌಂಡ್ಸ್ ಹೆಸರಿನಲ್ಲಿ ಟಿ-ಶರ್ಟು, ಕೂಲಿಂಗ್ ಗ್ಲಾಸು ಹಾಕಿಕೊಂಡು ಲಾಲ್ ಬಾಗ್, ಕಬ್ಬನ್ ಪಾರ್ಕುಗಳಲ್ಲಿ ಪೋಟೋಶೂಟ್, ರೀಲ್ಸ್ ಮಾಡಿಬಿಟ್ಟರೆ ಬೆಂಗಳೂರಿನ ರಸ್ತೆಗುಂಡಿ ಸಮಸ್ಯೆ ಸರಿಹೋಗುತ್ತಾ ಡಿ.ಕೆ.ಶಿವಕುಮಾರ್ ಅವರೇ? ಬ್ರ್ಯಾಂಡ್ ಬೆಂಗಳೂರು ಮಾಡುತ್ತೇನೆ ಎಂದು ಬೆಂಗಳೂರನ್ನು ಹಾಳು ಮಾಡಿಬಿಟ್ಟರಲ್ಲ ಸ್ವಾಮಿ. ನಾಚಿಕೆಯಾಗಬೇಕು ನಿಮ್ಮ ಕಾಂಗ್ರೆಸ್ ಸರ್ಕಾರಕ್ಕೆ ಎಂದು ಕಿಡಿಕಾರಿದ್ದಾರೆ.

# ಜಾನುವಾರು ಪೋಷಣೆ: ರೈತರ ಆದಾಯ ಹೆಚ್ಚಳ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.25: ಪ್ರತಿಯೊಬ್ಬ ರೈತ ಕನಿಷ್ಟ ಒಂದೆರಡು ಜಾನುವಾರಗಳ ಸಾಕಾಣಿಕೆಯನ್ನು ಮಾಡಲೇಬೇಕು ಇದರಿಂದ ರೈತನ ಆದಾಯ ಹೆಚ್ಚಳವಾಗುತ್ತದೆ ಮತ್ತು ಕುಟುಂಬದ ಎಲ್ಲರು ಆರೋಗ್ಯಯುತವಾಗಿರುತ್ತಾರೆ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ.ನರಸಪ್ಪ ಹೇಳಿದರು.

ತಾಲೂಕಿನ ರಾಚಪ್ಪಗೌಡಗಾಂವ ಗ್ರಾಮದಲ್ಲಿ ಸೂರ್ಯ ಫೌಂಡೇಶನ್, ಅಂತರಾಷ್ಟ್ರೀಯ ಪ್ರಾಕೃತಿಕ ಚಿಕಿತ್ಸಾ ಸಂಸ್ಥೆ ಹಾಗೂ ಪಶುಪಾಲನ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಮತ್ತು ಎ.ಟಿ.ಎನ್ ಬಯೋಫಾರ್ಮ್ ಪುಣೆ ಇವರ ನೇತೃತ್ವದಲ್ಲಿ ಶನಿವಾರ ಹಮ್ಮಿಕೊಂಡ ಉಚಿತ ಪಶು ಚಿಕಿತ್ಸಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಳ್ಳಿಗಳಲ್ಲಿ ರೈತರು ಇನ್ನು ಹಳೆಯ ಪದ್ದತಿಯಲ್ಲಿ ಪಶುಸಂಗೋಪನೆ ಮಾಡುತಿದ್ದು ಬದಲಾಗಿ ವೈಜ್ಞಾನಿಕ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು ಆಗ ಅವುಗಳ ಆರೋಗ್ಯ ಚೆನ್ನಾಗಿರುತ್ತದೆ ಮತ್ತು ಭೂಮಿಯ ಫಲವತ್ತತೆಗೆ ಜಾನುವಾರುಗಳು ಅತೀ ಮುಖ್ಯವಾಗಿವೆ ರೈತರ ಹಿತದೃಷ್ಟಿಯಿಂದ ಸರಕಾರವು ನಮ್ಮ ಇಲಾಖೆ ಮೂಲಕ ಅನೇಕ ಯೋಜನೆಗಳನ್ನು ಜಾರಿಗೊಳಿಸಿದ್ದು ಅದರ ಲಾಭ ಪಡೆದುಕೊಳ್ಳಬೇಕು ಈ ನಿಟ್ಟಿನಲ್ಲಿ ಇಂತಹ ಉಚಿತ ಚಿಕಿತ್ಸಾ ಶಿಬಿರಗಳು ಜಾನುವಾರುಗಳ ಆರೋಗ್ಯ ವೃದ್ದಿಸುವಲ್ಲಿ ಬಹಳಷ್ಟು ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ ಬೀದರ್ ಬಸವಗಿರಿ ಲಿಂಗಾಯತ ಮಾಹಾಮಠದ ಪ್ರಭುದೇವ ಸ್ವಾಮೀಜಿ ಮಾತನಾಡಿ ರೈತರಿಗೆ ನಿಜವಾದ ಸ್ನೇಹಿತರೆಂದರೆ ಜಾನುವಾರುಗಳು ಯಾರು ಶ್ರದ್ಧೆಯಿಂದ ಈ ಮೂಕ ಪ್ರಾಣಿಗಳ ಸೇವೆ ಮಾಡುತ್ತಾರೊ ಅಂತವರಿಗೆ ಆ ಪ್ರಾಣಿಗಳು ಎಂದಿಗು ಮೋಸ ಮಾಡುವುದಿಲ್ಲ ಎಂದರು.

ಡಾ.ಸಂಗಮೇಶ, ಎಟಿಎನ್ ಬಯೋಫಾರ್ಮ್ ವ್ಯವಸ್ಥಾಪಕ ನಿರ್ದೇಶಕ ತಾನಾಜಿ, ಪ್ರಗತಿಪರ ರೈತ ಅಭಿಮನ್ಯು ನಿರಗುಡಿ, ಐ.ಎನ್.ಓ ಹಾಗೂ ಸೂರ್ಯ ಫೌಂಡೇಶನ್ ರಾಜ್ಯ ಸಂಚಾಲಕ ಗುರುನಾಥ ರಾಜಗೀರಾ, ಐ.ಎನ್.ಓ ಜಿಲ್ಲಾದ್ಯಕ್ಷ ಗೋರಖನಾಥ ಕುಂಬಾರ ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿ ಮಾಜಿ ಅದ್ಯಕ್ಷ ಪದ್ಮಾಕರ ಪಾಟೀಲ್, ಬಾಬುರಾವ ಕಾರಬಾರಿ, ಪಶು ವೈದ್ಯಾಧಿಕಾರಿಗಳಾದ ಡಾ.ಕಾಮರಾಯ, ಡಾ.ಅಮರ ಧ್ರುವೆ, ಡಾ.ನಿತೇಶ್ ತೋಪಾರೆ, ಡಾ.ಸರ್ವಜ್ಞ ಗೋಂಗಡೆ, ಪ್ರಮುಖರಾದ ದಿಗಂಬರಾವ ಮಾನಕಾರಿ, ಜನಾರ್ದನ ಬಿರಾದಾರ, ರಂಗರಾವ ಬಿರಾದರ, ರವಿ ಕುಂಬಾರ, ರಣಜಿತ್ ಪಾಟೀಲ್, ನಾಗನಾಥ ಬಿರಾದಾರ, ದಯಾನಂದ ಪಾಟೀಲ್, ಉಮೇಶ ಬಿರಾದಾರ, ರಾಮಚಂದ್ರ ಖೇಳಗೆ, ಭೀಮರಾವ ಪಾಟೀಲ್, ಮಲ್ಲಿಕಾರ್ಜುನ ಪಾಟೀಲ್, ಪಂಡಿತ ಕೋಳೆಕರ್, ರಾಜಕುಮಾರ ಪಾಟೀಲ್, ಜೀತು ಪವಾರ ಸೇರಿದಂತೆ ಹಲವರು ಇದ್ದರು.

# ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ"ಕ್ಕೆ ಸೂಚನೆ


ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 25 : ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಈ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ವಿಭಾಗದಲ್ಲಿ "ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ" ವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ತಹಸೀಲ್ದಾರರು ಹಾಗೂ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರ ಸಹಾಯಕ ಮತದಾರರ ನೋಂದಣಾಧಿಕಾರಿ ಸುರೇಶ ಅಂಕಲಗಿ ಅವರು ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗವು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಈ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳನ್ನು, ಆಯುಕ್ತರು ಮಹಾನಗರ ಪಾಲಿಕೆ ಕಲಬುರಗಿ, ಹಾಗೂ ಬಳ್ಳಾರಿ, ಕಲಬುರಗಿ ವಿಭಾಗದ ಆಯಾ ಉಪ ವಿಭಾಗಕ್ಕೆ ಸಂಬಂಧಪಟ್ಟ ಎಲ್ಲಾ ಸಹಾಯಕ ಆಯುಕ್ತರು, ವಿಭಾಗದ ಎಲ್ಲಾ ಸಂಬಂಧಪಟ್ಟ ತಾಲೂಕಿನ ತಹಸೀಲ್ದಾರರನ್ನುಸಹಾಯಕ ಮತದಾರರ ನೊಂದಣಾಧಿಕಾರಿಯನ್ನಾಗಿ ನೇಮಿಸಿರುತ್ತದೆ. ಅರ್ಹತಾ 2025ರ ನವೆಂಬರ್ 1ಕ್ಕೆ ಅನ್ವಯಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ನೂತನವಾಗಿ ಸಿದ್ದಪಡಿಸುವ ಕಾರ್ಯವು ಈಗಾಗಲೇ ಪ್ರಾರಂಭವಾಗಿದ್ದು ಕೊನೆಯ ದಿನ 2025ರ ನವೆಂಬರ್ 6 ಆಗಿರುತ್ತದೆ. ಪ್ರಸ್ತುತ ನೋಂದಣೀ ಕಾರ್ಯವನ್ನು ತೀವ್ರಗತಿಯಲ್ಲಿ ಕೈಗೊಳ್ಳಲು ದಿನ 2025ರ ಅಕ್ಟೋಬರ್ 27 ಹಾಗೂ 30 ರಂದು ಮತ್ತು ನವೆಂಬರ್ 3 ರಂದು ಜಿಲ್ಲೆಯ ಎಲ್ಲಾ ತಾಲೂಕಿನ ತಹಸೀಲ್ ಕಛೇರಿಯಲ್ಲಿ "ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ" ವನ್ನು ಆಯೋಜಿಸಿದ್ದು, ಈ ಅಭಿಯಾನಕ್ಕೆ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ತಾಲೂಕುವಾರು ನೇಮಕ ಮಾಡಲಾಗಿರುತ್ತದೆ. ನೋಂದಣಿಗೆ ಸಂಬಂಧಿಸಿದಂತೆ ಆಯಾ ತಾಲೂಕಿನ ತಹಸೀಲ್ ಕಛೇರಿಗೆ ಭೇಟಿ ನೀಡಬೇಕು.

ವೇಳಾಪಟ್ಟಿ ವಿವರ : 2025ರ ನವೆಂಬರ್ 6ರ ಗುರುವಾರ ರಂದು ಅರ್ಜಿ ನಮೂನೆ –19ರಲ್ಲಿ ಅರ್ಜಿಯನ್ನು ಸ್ವೀಕರಿಸಲು ಕೊನೆಯ ದಿನವಾಗಿದೆ. 2025ರ ನವೆಂಬರ್ 25ರ ಮಂಗಳವಾರ ರಂದು ಕರಡು ಮತದಾರರ ಪಟ್ಟಿ ಪ್ರಕಟ. 2025ರ ನವೆಂಬರ್ 25 ರಿಂದ 2025ರ ಡಿಸೆಂಬರ್ 10ರ ಬುಧವಾರ ರಂದು ಹಕ್ಕು ಮತ್ತು ಆಕ್ಷೇಪಣೆಗಳಿಗಾಗಿ ನಿಗದಿಪಡಿಸಿದೆ. 2025ರ ಡಿಸೆಂಬರ್ 30ರ ಮಂಗಳವಾರ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆ.

# ಡಿ.ಕೆ.ಸಿದ್ರಾಮ ಜನ ಸೇವೆಗೆ ಅವಿರತ ಶ್ರಮ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.25: ಕ್ಷೇತ್ರದ ಜನರ ಸೇವೆಗಾಗಿ ಕಳೆದ ಎರಡ್ಮೂರು ದಶಕಗಳಿಂದ ಡಿ.ಕೆ.ಸಿದ್ರಾಮ ಅವರು ಅವಿರತವಾಗಿ ದುಡಿಯುತ್ತಿದ್ದಾರೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ 57ನೇ ವಸಂತಕ್ಕೆ ಪಾದಾರ್ಪಣೆ ಮಾಡಿದ ಚನ್ನಬಸವ ಪಟ್ಟದ್ದೇವರು ಬ್ಯಾಂಕ್‌ನ ಅಧ್ಯಕ್ಷ ಡಿ.ಕೆ.ಸಿದ್ರಾಮ ಅವರನ್ನು ಆಶೀರ್ವದಿಸಿ ಅವರು ಮಾತನಾಡಿದರು.

ರಾಜಕೀಯ ಮತ್ತು ಸಹಕಾರ ಕ್ಷೇತ್ರದಲ್ಲಿ ಡಿ.ಕೆ.ಸಿದ್ರಾಮ ಅವರು ಉತ್ತಮವಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಜಿಲ್ಲಾ ಪಂಚಾಯತಿ ಸದಸ್ಯರಾಗಿ, ಸಕ್ಕರೆ ಕಾರ್ಖಾನೆ ಅಧ್ಯಕ್ಷರಾಗಿ ರೈತರ, ಬಡಜನರ ಏಳಿಗೆಗೆ ಶ್ರಮಿಸಿದ್ದಾರೆ. ಮುಂದೆಯೂ ಅವರ ಸೇವೆ ಹೀಗೆ ಮುಂದುವರೆಯಲಿ ಎಂದು ಹಾರೈಸಿದರು.ಸನ್ಮಾನ ಸ್ವೀಕರಿಸಿ ಚನ್ನಬಸವ ಪಟ್ಟದ್ದೇವರ ಬ್ಯಾಂಕ್‌ನ ಅಧ್ಯಕ್ಷ ಡಿ.ಕೆ.ಸಿದ್ರಾಮ ಮಾತನಾಡಿದರು. ಮಹಾಲಿಂಗ ಸ್ವಾಮೀಜಿ ಸಮ್ಮುಖ ವಹಿಸಿದ್ದರು. ಈ ಸಂದರ್ಭದಲ್ಲಿ ಚನ್ನಬಸವ ಪಟ್ಟದ್ದೇವರು ಬ್ಯಾಂಕ್‌ನ ನಿರ್ದೇಶಕ ಅನಿಲ ಹಾಲಕುಡೆ, ವ್ಯವಸ್ಥಾಪಕ ಗಣಪತಿ ಬಾವುಗೆ, ಪ್ರಮುಖರಾದ ಶರಣದ ದುರ್ಗಾಳೆ, ಜೈರಾಜ ಕೊಳ್ಳಾ, ಸಂಗಮೇಶ ಭೂರೆ, ಕೈಲಾಸ ಪಾಟೀಲ್, ಕನಕ ಮಲ್ಲೇಶಿ, ಬಿಬಿಶೇನ್ ಬಿರಾದಾರ್, ನವನಾಥ ಪಾಟೀಲ್, ವಿನೋದ ಕಾರಾಮುಂಗೆ, ಭಗವಾನ ಪಾಟೀಲ್, ಮಾರುತಿ ಬಿರಾದಾರ್, ಮಲ್ಲಪ್ಪ ದೇಶಮುಖ, ಸಂಗಮೇಶ ಟೆಂಕಾಳೆ, ಸಂದೀಪ ಪರಸಣ್ಣೆ ಸೇರಿದಂತೆ ಹಲವರು ಇದ್ದರು.

> ಕ್ಷೇತ್ರದ ಜನರ ಸೇವೆಗೆ ಬದುಕು ಮುಡಿಪಾಗಿಟಿದ್ದೇನೆ. ಸಹಕಾರ ಮತ್ತು ರಾಜಕೀಯ ಕ್ಷೇತ್ರದಲ್ಲಿದ್ದು ಕೈಲಾದಷ್ಟು ಬಡಜನರ, ರೈತರ ಸೇವೆ ಮಾಡಿದ್ದೇನೆ. ಮುಂದೆಯು ಅಧಿಕಾರ ಇರಲಿ, ಬಿಡಲಿ ಜನರ ಸೇವೆಯಲ್ಲಿರುತ್ತೇನೆ.
>
> **ಡಿ.ಕೆ.ಸಿದ್ರಾಮ ಅಧ್ಯಕ್ಷರು ಚನ್ನಬಸವ ಪಟ್ಟದ್ದೇವರು ಬ್ಯಾಂಕ್ ಭಾಲ್ಕಿ**

**ವಿಶೇಷ ಪೂಜೆ :**

ಪಟ್ಟಣದ ಭಾಲ್ಕೇಶ್ವರ ಮಂದಿರದಲ್ಲಿ ಡಿ.ಕೆ.ಸಿದ್ರಾಮ ಅಭಿಮಾನಿ ಬಳಗದ ವತಿಯಿಂದ ವಿಶೇಷ ಪೂಜೆ ಏರ್ಪಡಿಸಲಾಗಿತ್ತು. ಡಿ.ಕೆ.ಸಿದ್ರಾಮ ಅವರು ವಿಶೇಷ ಪೂಜೆ ಸಲ್ಲಿಸಿದರು. ನಂತರ ಅಭಿಮಾನಿಗಳು ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿ ಜನ್ಮದಿನ ಆಚರಿಸಿದರು.

**ಶಾಸಕ ಸಲಗರ ಭೇಟಿ :**

ಬಸವಕಲ್ಯಾಣ ಶಾಸಕ ಶರಣು ಸಲಗರ್ ಸೇರಿದಂತೆ ವಿವಿಧ ಪಕ್ಷದ ಮುಖಂಡರು, ಪ್ರಮುಖರು, ಅಭಿಮಾನಿಗಳು ಡಿ.ಕೆ.ಸಿದ್ರಾಮ ಅವರ ನಿವಾಸಕ್ಕೆ ಭೇಟಿ ನೀಡಿ ಡಿ.ಕೆ.ಸಿದ್ರಾಮ ಅವರನ್ನು ಸನ್ಮಾನಿಸಿ, ಕೇಕ್ ಕತ್ತರಿಸಿ ಜನ್ಮದಿನದ ಶುಭ ಕೋರಿದರು.

# ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 25 : ಜಿಲ್ಲೆಯ ಎಲ್ಲಾ ತಾಲೂಕಿನ ತಹಸೀಲ್ ಕಛೇರಿಯಲ್ಲಿ "ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ"ವನ್ನು ಆಯೋಜಿಸಲಾಗಿದೆ ಎಂದು ಯಾದಗಿರಿ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರ ಹಾಗೂ ಜಿಲ್ಲಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿ, ಸಹಾಯಕ ಚುನಾವಣಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗವು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯನ್ನಾಗಿ ಹಾಗೂ ಈ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳನ್ನು, ಆಯುಕ್ತರು ಮಹಾನಗರ ಪಾಲಿಕೆ ಕಲಬುರಗಿ ಹಾಗೂ ಬಳ್ಳಾರಿ, ಕಲಬುರಗಿ ವಿಭಾಗದ ಆಯಾ ಉಪ ವಿಭಾಗಕ್ಕೆ ಸಂಬಂಧಪಟ್ಟ ಎಲ್ಲಾ ಸಹಾಯಕ ಆಯುಕ್ತರು, ವಿಭಾಗದ ಎಲ್ಲಾ ಸಂಬಂಧಪಟ್ಟ ತಾಲೂಕಿನ ತಹಸೀಲ್ದಾರರನ್ನು ಸಹಾಯಕ ಮತದಾರರನೊಂದಣಾಧಿಕಾರಿಯನ್ನಾಗಿ ನೇಮಿಸಿರುತ್ತದೆ. ಅರ್ಹತಾ 2025ರ ನವೆಂಬರ್ 1ಕ್ಕೆ ಅನ್ವಯಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ನೂತನವಾಗಿ ಸಿದ್ದಪಡಿಸುವ ಕಾರ್ಯವು ಈಗಾಗಲೇ ಪ್ರಾರಂಭವಾಗಿದ್ದು ಕೊನೆಯ ದಿನಾಂಕ 2025ರ ನವೆಂಬರ್ 6 ಆಗಿರುತ್ತದೆ.

ಪ್ರಸ್ತುತ ನೋಂದಣಿ ಕಾರ್ಯವನ್ನು ತೀವ್ರಗತಿಯಲ್ಲಿ ಕೈಗೊಳ್ಳಲು 2025ರ ಅಕ್ಟೋಬರ್ 27 ಹಾಗೂ ಅಕ್ಟೋಬರ್ 30 ಮತ್ತು 2025ರ ನವೆಂಬರ್ 3 ರಂದು ಜಿಲ್ಲೆಯ ಎಲ್ಲಾ ತಾಲೂಕಿನ ತಹಸೀಲ್ ಕಛೇರಿಯಲ್ಲಿ "ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ"ವನ್ನು ಆಯೋಜಿಸಿದ್ದು, ಈ ಅಭಿಯಾನಕ್ಕೆ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ತಾಲೂಕುವಾರು ನೇಮಕ ಮಾಡಲಾಗಿರುತ್ತದೆ. ನೋಂದಣಿಗೆ ಸಂಬಂಧಿಸಿದಂತೆ ಆಯಾ ತಾಲೂಕಿನ ತಹಸೀಲ್ ಕಛೇರಿಗೆ ಭೇಟಿ ನೀಡಬೇಕು.

ವೇಳಾಪಟ್ಟಿ ವಿವರ : 2025ರ ನವೆಂಬರ್ 6ರ ಗುರುವಾರ ರಂದು ಅರ್ಜಿ ನಮೂನೆ –19ರಲ್ಲಿ ಅರ್ಜಿಯನ್ನು ಸ್ವೀಕರಿಸಲು ಕೊನೆಯ ದಿನವಾಗಿದೆ. 2025ರ ನವೆಂಬರ್ 25ರ ಮಂಗಳವಾರ ರಂದು ಕರಡು ಮತದಾರರ ಪಟ್ಟಿ ಪ್ರಕಟ. 2025ರ ನವೆಂಬರ್ 25 ರಿಂದ 2025ರ ಡಿಸೆಂಬರ್ 10ರ ಬುಧವಾರ ರಂದು ಹಕ್ಕು ಮತ್ತು ಆಕ್ಷೇಪಣೆಗಳಿಗಾಗಿ ನಿಗದಿಪಡಿಸಿದೆ. 2025ರ ಡಿಸೆಂಬರ್ 30ರ ಮಂಗಳವಾರ ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆ.

ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ತಾಲೂಕಿನ ಯಾದಗಿರಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಶ್ರೀಮತಿ ನಿರ್ಮಾಲ ಮೊ.ನಂ.9902533883. ಶಹಾಪುರ ತಾಲೂಕಿನ ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳು ವೆಂಕಟೇಶ ಚಟ್ನಳ್ಳಿ ಮೊ.ನಂ.8095753644. ಸುರಪುರ ತಾಲೂಕಿನಲ್ಲಿ ಯಾದಗಿರಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿ ಶ್ರೀಮತಿ ಭಾಗ್ಯಶ್ರೀ ಮೊ.ನಂ.9108104776.ಗುರುಮಿಠಕಲ್ ತಾಲೂಕಿನ ಯಾದಗಿರಿ ತೋಟಗಾರಿಕೆ ಇಲಾಖೆ ಉಪ ನಿರ್ದೇಶಕರು ರಾಘವೇಂದ್ರ ಮೊ.ನಂ.9886752866. ವಡಗೇರಾ ತಾಲೂಕಿನ ಯಾದಗಿರಿ ಡಾ.ಬಿ.ಆರ್.ಅಂಬೇಡ್ಕರ ನಿಗಮ ಜಿಲ್ಲಾ ವ್ಯವಸ್ಥಾಪಕರು ಸರೋಜಾ ಮೊ.ಸಂ.9845333398. ಹುಣಸಗಿ ತಾಲೂಕಿನ ಯಾದಗಿರಿ ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕರು ಶರಣಬಸವ ಮೊ.ನಂ.9886775415ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಕಾಸ ಸಮಿತಿ ಯಿಂದ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ೩೦ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್: ಅ.25:ಬಸವನಗರ ವಿಕಾಸ ಸಮಿತಿ, ಕಿತ್ತೂರು ರಾಣಿ ಚನ್ನಮ್ಮ ಬಡಾವಣೆ, ವಿದ್ಯಾನಗರ ವಿಕಾಸ ಸಮಿತಿ, ಬಸವ ಸಮಿತಿ ಹಾಗೂ ಗುಮ್ಮೆ ಕಾಲೊನಿ ವತಿಯಿಂದ ನಗರದ ಕಿತ್ತೂರು ರಾಣಿ ಚನ್ನಮ್ಮ ವೃತ್ತದಲ್ಲಿ ಅ. 30 ರಂದು ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಆಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 10ಕ್ಕೆ ನಡೆಯುವ ಕಾರ್ಯಕ್ರಮವನ್ನು ಕಲಬುರಗಿಯ ಸಾಹಿತಿ ಡಾ. ಕಾವ್ಯಶ್ರೀ ಮಹಾಗಾಂವಕರ್ ಉದ್ಘಾಟಿಸುವರು. ಬಸವನಗರ ಮಹಿಳಾ ಮಂಡಳ ಅಧ್ಯಕ್ಷೆ ರತ್ನಾ ಪಾಟೀಲ ಅಧ್ಯಕ್ಷತೆ ವಹಿಸುವರು.

ನಗರಸಭೆ ಸದಸ್ಯರಾದ ಪ್ರೀತಿ ರಾಜೇಶ್, ಸಂತೋಷಿ ಅರುಣಕುಮಾರ, ದಿಗಂಬರ ಮಡಿವಾಳ, ಹಾರೂರಗೇರಿ ಬಸವ ಸಮಿತಿಯ ಅಧ್ಯಕ್ಷ ಬಸವರಾಜ ಪಾಟೀಲ, ಗುಮ್ಮೆ ಕಾಲೊನಿ ಅಧ್ಯಕ್ಷ ರಾಜಶೇಖರ ಮಂಗಲಗಿ, ವಿದ್ಯಾನಗರ ಕಾಲೊನಿಯ ಬಸವಣಪ್ಪ ನೇಳಗೆ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.ಕಾವ್ಯಶ್ರೀ ಮಹಾಗಾಂವಕರ್ (ಸಾಹಿತ್ಯ ಕ್ಷೇತ್ರ) ಹಾಗೂ ಮಹಾದೇವಿ ಬಿರಾದಾರ (ಮಹಿಳಾ ಕ್ಷೇತ್ರ) ಅವರಿಗೆ ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಇದಕ್ಕೂ ಮುನ್ನ ಬಸವನಗರದ ಬಸವೇಶ್ವರ ದೇವಸ್ಥಾನದಿಂದ ಬಿ.ವಿ.ಬಿ. ಕಾಲೇಜು ರಸ್ತೆಯಲ್ಲಿನ ಕಿತ್ತೂರು ರಾಣಿ ಚನ್ನಮ್ಮ ವೃತ್ತದ ವರೆಗೆ ಚನ್ನಮ್ಮ ಅವರ ಭಾವಚಿತ್ರದ ಭವ್ಯ ಮೆರವಣಿಗೆ ನಡೆಯಲಿದೆ. ಸಾಹಿತಿ ಜಯಶ್ರೀ ಸುಕಾಲೆ ಹಾಗೂ ಮಹಿಳಾ ಪ್ರಮುಖರಾದ ಕಲಾವತಿ ಶಿವರಾಜ ಪಾಟೀಲ ಮೆರವಣಿಗೆಗೆ ಚಾಲನೆ ನೀಡುವರು ಎಂದು ಕಿತ್ತೂರು ರಾಣಿ ಚನ್ನಮ್ಮ ಜಯಂತಿ ಆಚರಣೆ ಸಮಿತಿಯ ಸಂಚಾಲಕ ರೇವಣಸಿದ್ದಪ್ಪ ಜಲಾದೆ ಹಾಗೂ ಅಧ್ಯಕ್ಷ ರಾಜಶೇಖರ ಪಾಟೀಲ ತಿಳಿಸಿದ್ದಾರೆ.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ : ನೊಂದಣಾಧಿಕಾರಿಗಳ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಅ 25 : ಭಾರತ ಚುನಾವಣಾ ಆಯೋಗವು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರನೋಂದಣಾಧಿಕಾರಿಯನ್ನಾಗಿ ಹಾಗೂ ಈ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳನ್ನು, ಮಹಾನಗರ ಪಾಲಿಕೆ ಆಯುಕ್ತರು, ಹಾಗೂ ಬಳ್ಳಾರಿ, ಕಲಬುರಗಿ ವಿಭಾಗದ ಆಯಾ ಉಪ ವಿಭಾಗಕ್ಕೆ ಸಂಬಂಧಪಟ್ಟ ಎಲ್ಲಾ ಸಹಾಯಕ ಆಯುಕ್ತರು, ವಿಭಾಗದ ಎಲ್ಲಾ ಸಂಬಂಧಪಟ್ಟ ತಾಲೂಕಿನ ತಹಸೀಲ್ದಾರರನ್ನು ಸಹಾಯಕ ಮತದಾರರನೊಂದಣಾಧಿಕಾರಿಯನ್ನಾಗಿ ನೇಮಿಸಲಾಗಿದ್ದು, ಅರ್ಹತಾ ದಿನಾಂಕ 01.11.2025 ಕ್ಕೆ ಅನ್ವಯಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ನೂತನವಾಗಿ ಸಿದ್ಧಪಡಿಸುವ ಕಾರ್ಯವು ಈಗಾಗಲೇ ಪ್ರಾರಂಭವಾಗಿದೆ ಎಂದು ಜಿಲ್ಲೆಯ ಜಿಲ್ಲಾಧಿಕಾರಿಗಳು ಹಾಗೂ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಮತದಾರರನೋಂದಣಾಧಿಕಾರಿಗಳಾದ ಹರ್ಷಲ್ ಭೋಯರ್ ಅವರು ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗವು ದಿನಾಂಕ12.09.2025ರ ಪತ್ರದನ್ವಯ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ಹೊಸದಾಗಿ ಸಿದ್ಧಪಡಿಸಲಾಗುತ್ತಿರುವುದರಿಂದ ಈ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕಾಗಿರುತ್ತದೆಂದು ನಿರ್ದೇಶನ ನೀಡಿರುತ್ತಾರೆ. ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಸಿದ್ಧಪಡಿಸಿಕೊಳ್ಳಲು ಅರ್ಜಿ ನಮೂನೆ 19 ರಲ್ಲಿ ಅರ್ಜಿಯನ್ನು 2025ರ ನವಂಬರ್ 06 (ಗುರುವಾರ) ರಂದು ಸ್ವೀಕರಿಸುವ ಕೊನೆಯ ದಿನವಾಗಿದೆ.

ಕರಡು ಮತದಾರರ ಪಟ್ಟಿಯನ್ನು 2025ರ ನವೆಂಬರ್ 25 (ಮಂಗಳವಾರ) ದಂದು ಪ್ರಕಟ. ಹಕ್ಕು ಮತ್ತು ಆಕ್ಷೇಪಣೆಗಳನ್ನು 2025ರ ನವಂಬರ್ 25 (ಮಂಗಳವಾರ) ದಿಂದ ಡಿಸೆಂಬರ್ 10ರ ವರೆಗೆ ಅವಧಿ ನೀಡಲಾಗಿದೆ. ಅಂತಿಮ ಮತದಾರರ ಪಟ್ಟಿಯನ್ನು ಡಿಸೆಂಬರ್ 30ರಂದು ಪ್ರಕಟಣೆ ಮಾಡಲಾಗುತ್ತದೆ.

ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ನೊಂದಾಯಿಸಲು ಭಾರತದ ಪ್ರಜೆಯಾಗಿರುವ, ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ನವೆಂಬರ್ 2025 ಕ್ಕೆ ಮೊದಲ 6 ವಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ಧಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟುಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಹಾಗೆ ನಿರ್ಧಿಷ್ಟಪಡಿಸಿದ ಶೈಕ್ಷಣಿಕ ಸಂಸ್ಥೆಗಳ ಪಟ್ಟಿಯು ಮೊದಲನೇ ಅನುಸೂಚಿಯಲ್ಲಿ ತಿಳಿಸಲಾದ ಅಧಿಕಾರಿಗಳ ಬಳಿ ಇರುತ್ತದೆ.

ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ (ಬುಲ್ಕ್) ಅರ್ಜಿಗಳನ್ನು ಮತದಾರರನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರನೋಂದಣಾಧಿಕಾರಿಗಳಿಗೆ ಕಳುಹಿಸಬಹುದು. ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬ ಯಾವುದಾದರೂ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಂಧಿಸದಂತೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ, ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳಬೇಕು. ಅರ್ಜಿದಾರರು ನಮೂನೆ–19ರ ಅರ್ಜಿಯೊಂದಿಗೆ ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ಹಾಗೂ ಬಿಳಿ ಬಣ್ಣದ ಹಿನ್ನೆಲೆ ಹೊಂದಿದ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳನ್ನು ಸಲ್ಲಿಸಬೇಕು. ಅರ್ಜಿದಾರರು ನಮೂನೆ–19 ರೊಂದಿಗೆ ಲಗತ್ತಿಸಿದ ಆಧಾರ್ ಕಾರ್ಡ್ನ ಗೌಪ್ಯತೆಯನ್ನು ಕಾಪಾಡುವ ದೃಷ್ಠಿಕೋನದಿಂದ ಆಧಾರ್ ಸಂ–ಖ್ಯೆಯ ಪ್ರಥಮ 8 ಸಂಖ್ಯೆಯನ್ನು ಮಾಸ್ಕ್ ಮಾಡಲು ಹಾಗೂ ಅರ್ಜಿದಾರರ ಖಾಸಗಿತ್ವದ ದಾಖಲೆ ಹಾಗೂ ಮೊಬೈಲ್ ಸಂಖ್ಯೆಯನ್ನು ಯಾರಿಗೂ ನೀಡಬಾರದೆಂದು ಕಡ್ಡಾಯವಾಗಿ ಸೂಚಿಸಲಾಗಿರುತ್ತದೆ. ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950ರ 31ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದೆಂಬುದನ್ನು ಗಮನಿಸತಕ್ಕದ್ದು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19ನ್ನು ಭರ್ತಿ ಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1ನೇ ನವೋಂಬರ್ 2025ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಟ 3 ವರ್ಷ ಭೋದನಾ ವೃತಿಯಲ್ಲಿ ನಿರತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ –2ರಲ್ಲಿ ಸಂಬಳ ಬಟವಾಡೆ ಅಧಿಕಾರಿಯಿಂದ ಡ್ರಾಯಿಂಗ್ ಅಧಿಕಾರಿ ಪ್ರಮಾಣ ಪತ್ರ ಸಲ್ಲಿಸಬೇಕು. ಆಯೋಗವು 2021ರ ಅಕ್ಟೋಬರ್ 25 ರಂದು ನೀಡಿದ ಮಾರ್ಗಸೂಚಿಗನುಗುಣವಾಗಿ ಅರ್ಹ ಮತದಾರರು ಅವರು ಕಾರ್ಯನಿರ್ವಹಿಸುತ್ತಿರುವ ಸ್ಥಳದಲ್ಲಿ ನೋಂದಾಯಿಸಕೂಡದೆಂದು ತಿಳಿಸುತ್ತಾ, ಅವರು ಸಾಮಾನ್ಯ ನಿವಾಸಿಯಾಗಿ ವಾಸಿಸುತ್ತಿರುವ ಸ್ಥಳೀಯ ಕ್ಷೇತ್ರದಲ್ಲಿ ಅವರ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಲು ತಿಳಿಸಿದೆ. ಈ ಕ್ಷೇತ್ರ ವ್ಯಾಪ್ತಿಯ ಹೊರಗಡೆ ಸೆಕೆಂಡರಿ ಶಿಕ್ಷಣ ಸಂಸ್ಥೆಗಳಿಗಿಂತಲೂ ಕಡಿಮೆ ಇಲ್ಲದ ಶಿಕ್ಷಣ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿ ಮತದಾರನಾಗಲು ಆಯೋಗದ ಮಾರ್ಗಸೂಚಿಗಳನ್ನು ಪೂರೈಸಿ ಅವರು ಈ ಚುನಾವಣಾ ಕ್ಷೇತ್ರ ವ್ಯಾಪ್ತಿಯ ಸಾಮಾನ್ಯ ನಿವಾಸಿಯಾಗಿ ಇದಕ್ಕೆ ಪೂರಕವಾಗಿರುವಂತಹ ದಾಖಲೆಗಳನ್ನು ಅರ್ಜಿಯೊಂದಿಗೆ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿದಾರರು ಮತದಾರರ ಪಟ್ಟಿಯಲ್ಲಿ ನೋಂದಣಿಗಾಗಿ ಅರ್ಹರಿರುತ್ತಾರೆ.

ಆಯೋಗವು ಮುಂಬರುವ ದಿನಗಳಲ್ಲಿ ಸದರಿ ನಮೂನೆ 19 ರ ಅರ್ಜಿಗಳನ್ನು ಇಖಿಖಿ ನಲ್ಲಿ ಅಳವಡಿಸಲು ಉದ್ದೇಶಿಸಲಾಗಿದೆ. ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತದ ಮತದಾರರ ಪಟ್ಟಿ ಸಿದ್ದಪಡಿಸಿಕೊಳ್ಳುವ ಕುರಿತು ಹಾಗೂ ಚುನಾವಣಾ ಪೂರ್ವ ತಯಾರಿ ಮಾಡಿಕೊಳ್ಳುವಂತೆ' ಈಗಾಗಲೇ ವಿಭಾಗದ ಎಲ್ಲಾ ತಹಸೀಲ್ದಾರರಿಗೆ ಮತ್ತು ಸಂಬಂಧಪಟ್ಟವರಿಗೆ ಈ ಕಾರ್ಯಾಲಯದಿಂದ ನಿರ್ದೇಶನ ನೀಡಲಾಗಿದೆ. ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೊಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೊಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ನಗರಸಭೆ ಹಾಗೂ ತಹಸೀಲ್ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗೆ ಸಲ್ಲಿಸತಕ್ಕದ್ದು. ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಂಡು, ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕೆಂದು ಈ ಮೂಲಕ ಎಲ್ಲಾ ಅರ್ಹ ಮತದಾರರಲ್ಲಿ ವಿನಂತಿಸಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಧ್ಯಾತ್ಮ ಸಾಧನೆಯಿಂದ ಸುಖ ಶಾಂತಿ ಪ್ರಾಪ್ತಿ : ರಂಭಾಪುರಿ ಜಗದ್ಗುರುಗಳು



ಮಲ್ಲಮ್ಮ ನುಡಿ ವಾರ್ತೆ

ರಾಣೆಬೆನ್ನೂರು–ಅ25:ಮಾನವ ಜೀವನ ಅಮೂಲ್ಯ. ಮನುಷ್ಯ ಜೀವನದಲ್ಲಿ ಧರ್ಮ ಅರ್ಥ ಕಾಮ ಮತ್ತು ಮೋಕ್ಷವನ್ನು ಸಂಪಾದಿಸಿಕೊಂಡು ಬಾಳಬೇಕೆಂದು ಶಾಸ್ತ್ರ ನಿರೂಪಿಸುತ್ತದೆ. ಆಧ್ಯಾತ್ಮ ಅರಿವು ಮತ್ತು ಸಾಧನೆಯಿಂದ ಬದುಕಿನಲ್ಲಿ ಶಾಂತಿ ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.


ಅವರು ಶುಕ್ರವಾರ ತಾಲೂಕಿನ ಹೊನ್ನತ್ತಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಶ್ರೀ ಹೊನ್ನನಾಗದೇವತಾ ಹಾಗೂ ಶ್ರೀ ಹೇಮಾವತಿ ದೇವಸ್ಥಾನ ಉದ್ಘಾಟನೆ ಹಾಗೂ ಪ್ರಾಣ ಪ್ರತಿಷ್ಠಾಪನಾ ಅಂಗವಾಗಿ ಜರುಗಿದ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಈಶ ನಿರ್ಮಿತವಾದ ಈ ಪ್ರಪಂಚದಲ್ಲಿ ಅದ್ಭುತ ಶಕ್ತಿಯಿದೆ. ಧರ್ಮದ ಆದರ್ಶ ಮೌಲ್ಯಗಳನ್ನು ಅರಿತು ಆಚರಿಸಿ ಬಾಳುವಲ್ಲಿ ಜೀವನದ ಶ್ರೇಯಸ್ಸಿದೆ. ದೇವರು ಧರ್ಮದಲ್ಲಿ ಶ್ರದ್ಧೆ ನಂಬಿಕೆ ಯಾವತ್ತೂ ನಾಶಗೊಳ್ಳಬಾರದು. ಈ ಭೂಮಿ ಹೊತ್ತ ಆದಿಶೇಷನ ಶಕ್ತಿ ಅಪಾರ. ಸರ್ಪದೋಷ ನಿವಾರಣೆಗಾಗಿ ಎಲ್ಲೆಲ್ಲೋ ಹೋಗುವ ಜನರಿಗಾಗಿ ಇಂದು ಈ ಗ್ರಾಮದಲ್ಲಿಯೇ ಹೊನ್ನನಾಗದೇವತೆ ನೆಲೆಗೊಂಡಿರುವುದು ತಮ್ಮ ಶ್ರದ್ಧೆಗೆ ಸಾಕ್ಷಿಯಾಗಿದೆ. ದೇವನೊಬ್ಬ ನಾಮ ಹಲವು ಇದನ್ನರಿತು ಧರ್ಮ ದೈವದ ಶಕ್ತಿ ಒಂದೇ ಇದೆ ಹೊರತು ಬೇರೆ ಬೇರೆಯಿಲ್ಲ. ಭಜಿಸುವ ಪೂಜಿಸುವ ಸ್ಮರಿಸುವ ನಿಷ್ಠೆಯಿದ್ದರೆ ಬಾಳು ಉಜ್ವಲಗೊಳ್ಳುವುದು. ಶ್ರೀ ಜಗದ್ಗುರು ರೇಣುಕಾಚಾರ್ಯರ ಆದರ್ಶ ಮೌಲ್ಯಗಳನ್ನು ಅರಿತು ಬಾಳಬೇಕೆಂದರು.

ಸಮಾರಂಭ ಉದ್ಘಾಟಿಸಿ ಮಾತನಾಡಿದ ನೆಗಳೂರು ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಅಶಾಂತಿಯಿಂದ ತತ್ತರಿಸುತ್ತಿರುವ ಈ ಜೀವ ಜಗತ್ತಿಗೆ ಶಾಂತಿ ಬೇಕಾಗಿದೆ. ಶಾಂತಿಯ ಮೂಲ ಧರ್ಮ ಪರಿಪಾಲನೆಯಲ್ಲಿದೆ. ಹೊನ್ನನಾಗದೇವತಾ –ಹೇಮಾವತಿ ಶಕ್ತಿ ಅಪಾರವಾಗಿದೆ. ನಮ್ಮ ನಂಬಿಗೆ ವಿಶ್ವಾಸಕ್ಕೆ ತಕ್ಕಂತೆ ಫಲಗಳನ್ನು ಪಡೆಯಲು ಸಾಧ್ಯವಾಗುವುದೆಂದರು.

ಶಾಸಕ ಪ್ರಕಾಶ ಕೋಳಿವಾಡ ಮಾತನಾಡಿ ಬಹುದಿನಗಳ ಸಂಕಲ್ಪ ಇವತ್ತು ಪೂರ್ಣಗೊಂಡಿರುವುದು ಸಂತೋಷದ ಸಂಗತಿ. ಶಿವಶಕ್ತಿಯಿಂದ ಈ ಜಗತ್ತು ತುಂಬಿದೆ. ಜಗನ್ಮಾತೆ ಹೊನ್ನನಾಗದೇವತಾ–ಹೇಮಾವತಿ ನೆಲೆಗೊಂಡಿರುವುದು ನಮ್ಮೆಲ್ಲರ ಸೌಭಾಗ್ಯವೆಂದರು. ದೇವಸ್ಥಾನದ ಮುಖ್ಯಸ್ಥ ಶಿವಣ್ಣ ಲಮಾಣಿ ಸ್ವಾಗತಿಸಿ ಪ್ರಾಸ್ತಾವಿಕ ನುಡಿ ನುಡಿದರು. ಶಿಕ್ಷಕಿ ಕಸ್ತೂರಮ್ಮ ಪಾಟೀಲ ನಿರೂಪಿಸಿದರು. ವೈದಿಕ ಕಾರ್ಯಕ್ರಮಗಳನ್ನು ತೆಲಗುಂದದ ಗುರುಶಾಸ್ತ್ರಿ ಬಳಗದವರು ನೆರವೇರಿಸಿದರು.

# ಬದಲಾಯ್ತು ಕರ್ನಾಟಕ ಪೊಲೀಸ್ ಪೇದೆಗಳ ಟೋಪಿ: ಅ. 28ರಂದು ಪಿ–ಕ್ಯಾಪ್ ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಅಕ್ಟೋಬರ್ 28 ರಿಂದ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲಾ ಕಾನ್‌ಸ್ಟೆಬಲ್‌ಗಳು ಮತ್ತು ಹೆಡ್ ಕಾನ್‌ಸ್ಟೆಬಲ್‌ಗಳು ನೇವಿ ಬ್ಲೂ ಪೀಕ್ ಕ್ಯಾಪ್‌ಗಳನ್ನು (ಪಿ–ಸಿಎಪಿ) ಧರಿಸುತ್ತಾರೆ, ಏಕೆಂದರೆ ಪ್ರಸ್ತುತ ಬಳಸುತ್ತಿರುವ ಸ್ಲೌಚ್ ಟೋಪಿಗಳನ್ನು ಬದಲಾಯಿಸಲಾಗುತ್ತಿದೆ.

ಪೊಲೀಸ್ ಸಿಬ್ಬಂದಿಗೆ ಅಕ್ಟೋಬರ್ 28 ರಂದು ಪಿ–ಕ್ಯಾಪ್ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಸಿಬ್ಬಂದಿಗೆ ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸಿಎಂ ಸಿದ್ದರಾಮಯ್ಯ ಮತ್ತು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಅವರು ಪಿ–ಕ್ಯಾಪ್ ಘೋಷಣೆ ಹಾಗೂ ವಿತರಣಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಡಿಜಿ ಮತ್ತು ಐಜಿಪಿ ಎಂಎ ಸಲೀಂ ಗುರುವಾರ ಈ ಸಂಬಂಧ ಸುತ್ತೋಲೆ ಹೊರಡಿಸಿದ್ದು, ಎಲ್ಲಾ ಪೊಲೀಸ್ ಕಮಿಷನರೇಟ್‌ಗಳು ಮತ್ತು ಜಿಲ್ಲೆಗಳು ಈ ಕಾರ್ಯಕ್ರಮಕ್ಕೆ ಹಾಜರಾಗಲು ತಲಾ ಒಬ್ಬ ಪೊಲೀಸ್ ಕಾನ್‌ಸ್ಟೆಬಲ್ (ಪಿಸಿ) ಅಥವಾ ಹೆಡ್ ಕಾನ್‌ಸ್ಟೆಬಲ್ (ಎಚ್‌ಸಿ) ಅವರನ್ನು ನಾಮನಿರ್ದೇಶನ ಮಾಡುವಂತೆ ಸೂಚಿಸಿದ್ದಾರೆ. ಆಗಸ್ಟ್ 6 ರಂದು ಸರ್ಕಾರವು ರಾಜ್ಯದಲ್ಲಿ ಪ್ರಸ್ತುತ ಬಳಸುತ್ತಿರುವ ಸ್ಲೌಚ್ ಟೋಪಿಗಳನ್ನು ನೇವಿ ಬ್ಲೂ ಪೀಕ್ ಕ್ಯಾಪ್‌ಗಳೊಂದಿಗೆ ಬದಲಾಯಿಸುವ ಆದೇಶಗಳನ್ನು ಹೊರಡಿಸಿತ್ತು.ಇತ್ತೀಚೆಗೆ ನಡೆದ ಹಿರಿಯ ಪೊಲೀಸ್ ಅಧಿಕಾರಿಗಳ ವಾರ್ಷಿಕ ಸಮ್ಮೇಳನದಲ್ಲಿ, ರಾಜ್ಯ ಪೊಲೀಸರು ಕಾನ್‌ಸ್ಟೆಬಲ್‌ಗಳಿಗೆ ಹಸಿರು ಬೆರೆಟ್‌ಗಳನ್ನು ಪ್ರಸ್ತಾಪಿಸಿದ್ದರು. ಆದಾಗ್ಯೂ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಸಿರು ಬೆರೆಟ್‌ಗಳು ಗೃಹರಕ್ಷಕರು ಮತ್ತು ಸ್ಕೌಟ್ಸ್ ಮತ್ತು ಗೈಡ್ಸ್ ಸದಸ್ಯರು ಧರಿಸುವ ಬಟ್ಟೆಗಳನ್ನು ಹೋಲುತ್ತವೆ, ಹೀಗಾಗಿ ನೀಲಿ ಪೀಕ್ ಕ್ಯಾಪ್‌ಗಳನ್ನು ಆಯ್ಕೆ ಮಾಡಲು ಸೂಚಿಸಿದರು.

ಹೊಸ ವಿನ್ಯಾಸವನ್ನು ತೆಲಂಗಾಣ ಪೊಲೀಸ್ ಕ್ಯಾಪ್ ಮಾದರಿಯಲ್ಲಿ ರೂಪಿಸಲಾಗಿದೆ, ಮಹಾರಾಷ್ಟ್ರ, ದೆಹಲಿ, ಗೋವಾ ಮತ್ತು ತಮಿಳುನಾಡು ಸೇರಿದಂತೆ ಹಲವಾರು ರಾಜ್ಯಗಳ ಕ್ಯಾಪ್ ಶೈಲಿಗಳನ್ನು ಪರಿಶೀಲಿಸಿದ ನಂತರ ಈ ಡಿಸೈನ್ ಆಯ್ಕೆ ಮಾಡಲಾಗಿದೆ. ಸ್ಲೌಚ್ ಟೋಪಿ ಬ್ರಿಟಿಷ್ ಯುಗದಿಂದಲೂ ಕಾನ್‌ಸ್ಟಾಬ್ಯುಲರಿ ಸಮವಸ್ತ್ರದ ಭಾಗವಾಗಿದೆ, ಆದರೆ ಅನೇಕ ಅಧಿಕಾರಿಗಳು ಅದನ್ನು ಹಳೆಯದು ಮತ್ತು ಅನಾನುಕೂಲವೆಂದು ಹೇಳಿದ್ದರು. ಸ್ಲೌಚ್ ಟೋಪಿಗಳನ್ನು ಪೀಕ್ ಕ್ಯಾಪ್‌ಗಳೊಂದಿಗೆ ಬದಲಾಯಿಸುವುದು ದೀರ್ಘಕಾಲದ ಪ್ರಸ್ತಾಪವಾಗಿತ್ತು.

# ಮಹರ್ಷಿ ವಾಲ್ಮೀಕಿ ಅವರ ತತ್ವ ಆದರ್ಶಗಳು ಜೀವನದಲ್ಲಿ ಅಳವಡಿಸಿಕೊಳಬೇಕು:ಬೆಲ್ದಾಳೆ





**ಸುಮಾರು 25 ವರ್ಷಗಳಿಂದ ನೆನಗುದಿಗೆ ಬಿದ್ದಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣಕ್ಕೆ ಶನಿವಾರ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ 10 ಲಕ್ಷ ರೂಪಾಯಿ ಅನುದಾನ ನೀಡಿ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು.**

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಮಹರ್ಷಿ ವಾಲ್ಮೀಕಿ ಅವರ ತತ್ವ ಆದರ್ಶಗಳನ್ನು ಪ್ರತಿಯೊಬ್ಬರ ಜೀವನದಲ್ಲಿ ಅಳವಡಿಸಿಕೊಲಬೇಕೆಂದು ಎಂದು ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದರು. ತಾಲೂಕಿನ ಮುತ್ತಂಗಿ ಗ್ರಾಮದಲ್ಲಿ ಶನಿವಾರ ವಾಲ್ಮೀಕಿ ಸಮಾಜದ ವತಿಯಿಂದ ಆಯೋಜಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಹರ್ಷಿ ವಾಲ್ಮೀಕಿ ಅವರು ಬರೆದ ರಾಮಾಯಣದಿಂದ ಹೊಸ ಯುಗಕ್ಕೆ ನಾಂದಿ ಹಾಡಿತು.

ಜಗತ್ತಿನ ಶ್ರೇಷ್ಠ ಗ್ರಂಥಗಳಲ್ಲಿ ರಾಮಾಯಣ ಕೂಡ ಒಂದಾಗಿದೆ. ಮಹಾತ್ಮರನ್ನು ನಾವೆಲ್ಲರೂ ಯಾವುದೇ ಒಂದು ಜಾತಿ ಅಥವಾ ಸಮುದಾಯಕ್ಕೆ ಸಿಮೀತಗೊಳಿಸಬಾರದು ಅವರು ಇಡೀ ಸಮಾಜಕ್ಕೆ ಕೊಡುಗೆ ನೀಡಿದ್ದಾರೆ ಎಂದರು.

ಕ್ಷೇತ್ರದ ನಿರ್ಣಾ, ಮದರಗಿ, ಉಡಬಾಳ ಸೇರಿದಂತೆ ಮುತ್ತಂಗಿ ಗ್ರಾಮಕ್ಕೂ ಕೂಡ ವಾಲ್ಮೀಕಿ ಸಮುದಾಯ ಭವನ ನಿರ್ಮಾಣಕ್ಕೆ 10ಲಕ್ಷ ರೂಪಾಯಿ ನೀಡಿದ್ದೇನೆ ಎಂದರು. ಹಳ್ಳಿಖೇಡ್ ವಾಡಿ ಗ್ರಾಮದ ವಾಲ್ಮೀಕಿ ಆಶ್ರಮದ ಶ್ರೀಗಳಾದ ದತ್ತಾತ್ರಿ ಗುರೂಜಿ ಮಾತನಾಡಿ, ಇಂದು ನಮ್ಮ ಭಾರತ ದೇಶದ ಆಚಾರ–ವಿಚಾರ, ಸಂಸ್ಕೃತಿ–ಸಂಸ್ಕಾರ ಅರಿಯಲು ಉತ್ಸುಕರಾಗಿದ್ದರೆ ಅಂದರೆ ಅದಕ್ಕೆ ಕಾರಣೀಭೂತರು ವಾಲ್ಮೀಕಿಯವರು. ಆದರೆ ನಾವು ನಮ್ಮ ಸಂಸ್ಕೃತಿಯನ್ನೆ ಮರೆತು ನಮ್ಮತನವನ್ನು ಬಿಟ್ಟು ಪಾಶ್ಚಿಮಾತ್ಯ ಸಂಸ್ಕೃತಿಗೆ ಮಾರುಹೋಗಿದ್ದು ದುರ್ದೈವದ ಸಂಗತಿ. 24ಸಾವಿರ ಶ್ಲೋಕ, 7 ಕಾಂಡ ಒಳಗೊಂಡ ರಾಮಾಯಣದ ಮೂಲಕ ವಾಲ್ಮೀಕಿ ಅವರು ವಿಶ್ವಕ್ಕೆ ವಸುದೈವ ಕುಟುಂಬಕ್ಕಂ ಪರಿಕಲ್ಪನೆ ನೀಡಿದ್ದವರಾಗಿದ್ದಾರೆ. ಇಂತಹ ವಾಲ್ಮೀಕಿ ಸಮಾಜ ಇಂದು ನಾಯಕತ್ವ, ರಾಜಕೀಯ, ಒಗ್ಗಟಿನ ಕೊರತೆ ಅನುಭವಿಸುತ್ತಿದೆ ಎಂದರು.

ಹುಡಗಿ ಅಂಬಿಗರ ಚೌಡಯ್ಯ ಮಠದ ಶ್ರೀ ರಾಜಶೇಖರ ಗುರೂಜಿ ಮಾತನಾಡಿ, ವಾಲ್ಮೀಕಿ ಅವರ ರಾಮಾಯಣ ಮಹಾಕಾವ್ಯ ದೇಶದ ಸಾಹಿತ್ಯಕ್ಕೆ ಅತ್ಯುನ್ನತ ದೊಡ್ಡ ಕೊಡುಗೆ–ಯಾಗಿದೆ. ರಾಜ ನೀತಿ, ರಾಜ ಧರ್ಮ, ಮಾನವೀಯ ಮೌಲ್ಯ, ಸಂಸ್ಕಾರ, ಸಂಸ್ಕೃತಿ ಹಾಗೂ ಮಾನವರೆಲ್ಲರು ಒಂದೇ ಎಂಬ ಸಂದೇಶ ನೀಡಿದ ವಾಲ್ಮೀಕಿಯವರ ತತ್ವದಂತೆ ಅಕ್ಷರ ಮತ್ತು ಸಂಸ್ಕಾರ ಕಲಿಯಬೇಕು. ಶಿಷ್ಯರನ್ನು ರಕ್ಷಿಸುವ ದುಷ್ಟರನ್ನು ಶಿಕ್ಷಿಸುವ ಕೆಲಸ ಮಾಡಬೇಕಿದೆ ಎಂದು ಅವರು ಅಭಿಪ್ರಾಯಪಟ್ಟರು. ನಿಂಗೊಳ ಆಶ್ರಮದ ಪೂಜ್ಯ ಶ್ರೀ ಶಾಂತಿ ಬಾಬಾ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಗ್ರಾಮ ಪಂಚಾಯತ್ ಅಧ್ಯಕ್ಷೆ ನಾಗಮ್ಮ ತಾಳಮಡಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸುರೇಶ್ ಕಾಡವಾದ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಉಪಾಧ್ಯಕ್ಷ ಪರಶುರಾಮ ಚವ್ಹಾಣ, ಮಲ್ಲಿಕಾರ್ಜುನ ಪೊಲೀಸ್ ಪಾಟೀಲ್, ಷಣ್ಮುಖಪ್ಪ ವಾಲೇಕರ್, ಗುರುನಾಥ ರಾಜಗಿರೆ, ಅರುಣಕುಮಾರ್ ಬಾವಗಿ, ಮಾರುತಿ ಮಾಸ್ಟರ್, ಶರಣಪ್ಪ ಖಾಶೆಂಪುರ್, ನಾರಾಯಣರಾವ ಭಂಗಿ, ಭಾಗ್ಯಶ್ರೀ ಚಿಮ್ಮಕೋಡ್, ದಿಲೀಪ ಪಸರ್ಗಿ, ರಾಚಪ್ಪ ಸಾದಾ, ಯುವ ಅಧ್ಯಕ್ಷ ಶೇಶಿಕಾಂತ ದಾಸ್, ಸೂರ್ಯಕಾಂತ ನಿರ್ಣಾ, ವಾಲ್ಮೀಕಿ ಸಮಾಜದ ಅಧ್ಯಕ್ಷ ಸುಭಾಷ ಬಾಳೆಪನೋರ್, ಉಪಾಧ್ಯಕ್ಷ ಸಂಜೂಕುಮಾರ್ ದಾಸ್ ಶ್ರೀಕಾಂತರೆಡ್ಡಿ ಪುಟ್ಟ, ಶಂಕರರಾವ ದಾಸ್, ಷಣ್ಮುಖಪ್ಪ ಬರನಾಪುರ್, ಶರಣಪ್ಪ ಏಖೇಳ್ಳಿ, ಸಿದ್ದು ಬುರನಾಪುರ್, ನವೀನ್ ಬಾಳೆಪನೂರ್, ಶ್ರೀನಿವಾಸ ಯಾದವ್, ವೀರೇಶ್ ಮಾಡಗುಳ, ಸುರೇಶ್ ಕಾಡವಾದ, ನಾರಾಯಣರಾವ ದಾಸ್, ಕಾಶಿನಾಥ್ ಸೋಲಾಪುರ್ ಸೇರಿದಂತೆ ಹಿರಿಯರು, ಯುವಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಸತೀಷ ದಾಸ್ ನಿರೂಪಿಸಿದರು. ಕಾರ್ತಿಕ ಬುರನಾಪುರ್ ಕೊನೆಯಲ್ಲಿ ವಂದಿಸಿದರು.

## ದುಂಡಾಣು ಎಲೆ ಅಂಗಮಾರಿ ರೋಗ ನಿರ್ವಹಣೆಗೆ ಅಗತ್ಯ ಕ್ರಮಕೈಗೊಳ್ಳಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 24– ಜಿಲ್ಲೆಯಲ್ಲಿ ಇತ್ತೀಚೆಗೆ ಸುರಿಯುತ್ತಿರುವ ಮಳೆಯಿಂದ ಸಿಂಧನೂರು ತಾಲ್ಲೂಕಿನ ಕೆಲವೊಂದು ಗ್ರಾಮಗಳಲ್ಲಿ ಭತ್ತದ ಬೆಳೆಯಲ್ಲಿ ದುಂಡಾಣು ಎಲೆ ಅಂಗಮಾರಿ ರೋಗ ಕಂಡುಬಂದಿದ್ದು, ರಾಯಚೂರಿನ ಕೃಷಿ ವಿಶ್ವ ವಿದ್ಯಾಲಯದ ವಿಜ್ಞಾನಿಗಳು ತಿಳಿಸಿರುವಂತೆ ಹೆಚ್ಚಿನ ಮಳೆ/ತೇವಾಂಶವು ದುಂಡಾಣು ಎಲೆ ಅಂಗಮಾರಿ ರೋಗವು ಉಲ್ಬಣಗೊಳ್ಳಲು ಅನುಕೂಲಕರವಾದ ವಾತಾವರಣವಾಗಿದ್ದು, ರೋಗದ ನಿರ್ವಹಣಾಕ್ರಮಗಳನ್ನು ಕೈಗೊಳ್ಳುವಂತೆ ಕೋರಲಾಗಿದೆ.

ದುಂಡಾಣು ಎಲೆ ಅಂಗಮಾರಿ ರೋಗ ನಿರೋದಕ ತಳಿಗಳಾದ ಆರ್.ಪಿ.ಬಯೋ 226 (ಸುಧಾರಿತ ಸೋನಾ ಮಸೂರಿ) ಮತ್ತು ಡಿ.ಆರ್. ಆರ್ ದಾನ್ 53 ಬೆಳೆಯುವುದು. ಬಿತ್ತನೆ ಬೀಜವನ್ನು ಸ್ಟೆಪ್ಟೋಸೈಕ್ಲಿನ 0.1 ಗ್ರಾಂ. ಮತ್ತು 0.5 ಗ್ರಾಂ. ತಾಮ್ರದ ಆಕ್ಸಿಕ್ಲೋರೈಡ್ 50 ಡಬ್ಲೂಪಿ ಪ್ರತಿ ಲೀಟರ್ ನೀರಿನಲ್ಲಿ ಕರಗಿಸಿ ತಯಾರಿಸಿದ ದ್ರಾವಣದಲ್ಲಿ ಇಪ್ಪತ್ತು ನಿಮಿಷಗಳ ಕಾಲ ನೆನಸಿ ಬಿತ್ತಬೇಕು. ಕಣಿವೆಗಳಲ್ಲಿ ಬೆಳೆದ ಕಳೆಗಳನ್ನು ತೆಗೆದು ಬದುಗಳನ್ನು ಸ್ವಚ್ಛವಾಗಿಡಬೇಕು. ಹೊಲದಲ್ಲಿ ರೋಗದ ಲಕ್ಷಣ ಕಂಡ ತಕ್ಷಣ ಸ್ಟೆಪ್ಟೋಸೈಕ್ಲಿನ 0.1 ಗ್ರಾಂ. ಮತ್ತು 0.5 ಗ್ರಾಂ. ತಾಮ್ರದ ಆಕ್ಸಿಕ್ಲೋ–ರೈಡ್ 50 ಡಬ್ಲೂಪಿ ಪ್ರತಿ ಲೀಟರ್ ನೀರಿನಲ್ಲಿ ಕರಗಿಸಿ ಸಿಂಪಡಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ಕೃಷಿ ವಿಸ್ತರಣಾ ಘಟಕ ಅಥವಾ ಕೃಷಿ ವಿಜ್ಞಾನ ಕೇಂದ್ರವನ್ನು ಸಂಪರ್ಕಿಸುವಂತೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ಯೂಟಿ ಪಾರ್ಲರ್ ನಿರ್ವಹಣೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 24: ಇಲ್ಲಿನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗತರಬೇತಿ ಸಂಸ್ಥೆ (ಆರ್‌ಸೇಟಿ) ಇವರ ವತಿಯಿಂದ ಗ್ರಾಮೀಣ ನಿರುದ್ಯೋಗಿ ಮಹಿಳೆಯರಿಗಾಗಿ ಬ್ಯೂಟಿ ಪಾರ್ಲರ್ ನಿರ್ವಹಣೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು 35ದಿನಗಳ ಕಾಲ ಇರುತ್ತದೆ. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ. ಆಸಕ್ತರು 8ನೇ ತರಗತಿ ವ್ಯಾಸಂಗ ಮಾಡಿರುವ 18 ರಿಂದ 45 ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳು ಆಧಾರ್ ಕಾರ್ಡ್ ಜೆರಾಕ್ಸ್, ಗ್ರಾಮೀಣ ಪಡಿತರ ಚೀಟಿ (ಬಿಪಿಎಲ್, ಪಿಎಚ್‌ಎಚ್, ಎನ್‌ಪಿಎಚ್‌ಎಚ್ ಮತ್ತು ಆಯ್‌ವೈ) ಜೆರಾಕ್ಸ್ , 4 ಫೋಟೋಗಳು, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಪ್ಯಾನ್ ಕಾರ್ಡ್ ಜೆರಾಕ್ಸೊಂದಿಗೆ ಅಕ್ಟೋಬರ್ 27ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗತರಬೇತಿ ಸಂಸ್ಥೆ (ಆರ್‌ಸೇಟಿ) ಆಶಾಪೂರು ರಸ್ತೆ, ರಾಯಚೂರು. ಅಥವಾ ಮೊಬೈಲ್ ಸಂಖ್ಯೆ:8217382735,9742470999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗ್ರಾಮೀಣ ಸ್ವಯಂ ಉದ್ಯೋಗತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೆಹಲಿ: ವಾಯು ಮಾಲಿನ್ಯ ಪ್ರಮಾಣ ಇಳಿಕೆ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ, ಅ.25 : ಒಟ್ಟಾರೆ ವಾಯು ಗುಣಮಟ್ಟ ಸೂಚ್ಯಂಕ (ಎಕ್ಯೂಐ) ಇಂದು ಬೆಳಿಗ್ಗೆ ದೆಹಲಿಯಲ್ಲಿ ಮತ್ತಷ್ಟು ಸುಧಾರಿಸಿದೆ. ಆದರೆ ರಾಷ್ಟ್ರೀಯ ರಾಜಧಾನಿ ಪ್ರದೇಶದಲ್ಲಿ (ಎನ್ ಸಿಆರ್) ಗಾಳಿಯ ವೇಗದ ಹೆಚ್ಚಳದಿಂದಾಗಿ 'ಕಳಪೆ' ವಿಭಾಗದಲ್ಲಿ ಉಳಿದಿದೆ. ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಕಾರ, ಎಕ್ಯೂಐ ಶನಿವಾರ ಬೆಳಗ್ಗೆ 6 ಗಂಟೆಗೆ 257 ರಲ್ಲಿ ದಾಖಲಾಗಿದೆ. 0 ಮತ್ತು 51 ರ ನಡುವಿನ ಎಕ್ಯೂಐ ಅನ್ನು 'ಉತ್ತಮ', 51 ಮತ್ತು 100 'ತೃಪ್ತಿಕರ', 101 ಮತ್ತು 200 ಅನ್ನು 'ಮಧ್ಯಮ', 201 ಮತ್ತು 300 'ಕಳಪೆ', 301 ಮತ್ತು 400 'ಅತ್ಯಂತ ಕಳಪೆ' ಮತ್ತು 401 ಮತ್ತು 500 ನಡುವಿನ ಎಕ್ಯೂಐ ಅನ್ನು 'ತೀವ್ರ ಎಂದು ವರ್ಗೀಕರಿಸಲಾಗಿದೆ. ಕೇಂದ್ರದ ಏರ್ ಕ್ವಾಲಿಟಿ ಅರ್ಲಿ ವಾರ್ನಿಂಗ್ ಸಿಸ್ಟಮ್ (ಇಡಬ್ಲ್ಯೂಎಸ್) ಪ್ರಕಾರ, ಮುಂದಿನ ಆರು ದಿನಗಳಲ್ಲಿ ದೆಹಲಿಯ ಒಟ್ಟಾರೆ ಎಕ್ಯೂಐ 'ಕಳಪೆ' ಮತ್ತು 'ಅತ್ಯಂತ ಕಳಪೆ' ನಡುವೆ ಏರಿಳಿತಗೊಳ್ಳುವ ನಿರೀಕ್ಷೆಯಿದೆ. ದೆಹಲಿಯಲ್ಲಿ ಪ್ರದೇಶವಾರು ಎಕ್ಯೂಐ ಎಷ್ಟು? ಆದಾಗ್ಯೂ, ಎಕ್ಯೂಐ 'ತೀವ್ರ ವಿಭಾಗದಲ್ಲಿ ಉಳಿದಿದೆ ಮತ್ತು ಆನಂದ್ ವಿಹಾರ್ ನಲ್ಲಿ 411 ಎಂದು ದಾಖಲಾಗಿದೆ ಎಂದು ಸಿಪಿಸಿಬಿಯ ಸಮೀರ್ ಅಪ್ಲಿಕೇಶನ್ ನಲ್ಲಿ ಲಭ್ಯವಿರುವ ಡೇಟಾ ತೋರಿಸಿದೆ. ಬವಾನಾ (318), ಚಾಂದಿನಿ ಚೌಕ್ (309), ಜಹಾಂಗೀರ್ ಪುರಿ (302), ಪಂಜಾಬಿ ಬಾಗ್ (301), ಶಾದಿಪುರ (328), ವಿವೇಕ್ ವಿಹಾರ್ (302) ಮತ್ತು ವಜೀರ್ಪುರ (323) ನಂತಹ ಪ್ರದೇಶಗಳಲ್ಲಿ ಇದು 'ಅತ್ಯಂತ ಕಳಪೆ' ವರ್ಗದಲ್ಲಿ ಉಳಿದಿದೆ. ದೆಹಲಿಯ ನೆರೆಹೊರೆಯ ಪ್ರದೇಶಗಳಲ್ಲಿ ಎಕ್ಯೂಐ ಎಷ್ಟು? ನೋಯ್ಡಾ, ಗ್ರೇಟರ್ ನೋಯ್ಡಾ, ಗಾಜಿಯಾಬಾದ್ ಮತ್ತು ಗುರುಗ್ರಾಮ್ ನಲ್ಲಿ, ಎಕ್ಯೂಐ ಕ್ರಮವಾಗಿ 274, 259, 283 ಮತ್ತು 223 ಎಂದು ದಾಖಲಾಗಿದೆ. ಫರಿದಾಬಾದ್ ನಲ್ಲಿ, ಎಕ್ಯೂಐ 'ಮಧ್ಯಮ' ವಿಭಾಗದಲ್ಲಿ 198 ರಷ್ಟಿದೆ ಎಂದು ಸಮೀರ್ ಅಪ್ಲಿಕೇಶನ್ ನ ಅಂಕಿಅಂಶಗಳು ತೋರಿಸಿವೆ.

## ಮಕ್ಕಳಿಗೆ ತಪ್ಪದೆ ಪೋಲಿಯೋ ಲಸಿಕೆ ಹಾಕಿಸಲು ಸಲಹೆ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 25–ಮಕ್ಕಳ ಪಾಲಕರು ಜಾಗೃತರಾಗಿ ತಮ್ಮ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ತಾಲೂಕುಮಟ್ಟದ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್ ಅವರು ಹೇಳಿದರು.

ನಗರದ ತಾಯ ಮತ್ತು ಮಕ್ಕಳ ಸರ್ಕಾರಿ ಆಸ್ಪತ್ರೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರೋಟರಿ, ಕೃಷ್ಣ–ತುಂಗಾ ರಾಯಚೂರು, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಇವರ ಸಯುಂಕ್ತಾಶ್ರಯದಲ್ಲಿ ಅಕ್ಟೋಬರ್ 24ರ ಶುಕ್ರವಾರ ನಡೆದ ವಿಶ್ವ ಪೋಲಿಯೋ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸರಕಾರವು ಪೋಲಿಯೋ ನಿರ್ಮೂಲನೆಗೆ ಪಣತೊಟ್ಟ ದಿನದಿಂದಲೇ ಸಮಾಜಮುಖಿ ಸಂಸ್ಥೆ ರೋಟರಿ ಕ್ಲಬ್ ವಿಶ್ವ ಮಟ್ಟದಲ್ಲಿ ವ್ಯಾಪಕ ಪ್ರಚಾರ, ಸ್ವಯಂ ಸೇವಕರ ಸೇವೆ ಒದಗಿಸುವ ನಿರ್ಧಾರದಿಂದ ಪೋಲಿಯೋ ಮುಕ್ತ ಭಾರತದ ಕೊಡುಗೆಯಲ್ಲಿ ರೋಟರಿ ಕ್ಲಬ್ ಪಾತ್ರ ಮಹತ್ವಪೂರ್ಣವಾಗಿದೆ.

ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಗುಣಮಟ್ಟದ ಆರೋಗ್ಯ ಸೇವೆ ದೊರೆಯುವಂತೆ ರಾಜ್ಯ ಸರ್ಕಾರವು ಆರೋಗ್ಯ ಕ್ಷೇತ್ರದತ್ತ ಹೆಚ್ಚು ಒತ್ತು ನೀಡಿದೆ. ಯಾವುದೇ ಆಸ್ಪತ್ರೆಗಳಲ್ಲಿ ವೈದ್ಯರ ಮತ್ತು ಸಿಬ್ಬಂದಿಯ ಕೊರತೆ–ಯಾಗದಂತೆ ನೋಡಿಕೊಳ್ಳಲಾಗುತ್ತಿದೆ. ವಿಶೇಷವಾಗಿ ತಾಯಿ ಮಕ್ಕಳ ಆರೋಗ್ಯದತ್ತ ನಾವು ಹೆಚ್ಚಿನ ಗಮನ ಕೊಡಬೇಕಿದೆ ಎಂದು ಅವರು ವೈದ್ಯರಿಗೆ ಸಲಹೆ ಮಾಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ಪೋಲಿಯೋ ವೈರಸ್ ದೇಹವನ್ನು ಪ್ರವೇಶಿಸಿ ಕೈಕಾಲುಗಳ ಬಲಹೀನತೆಗೆ ಕಾರಣವಾಗುವ ಪೋಲಿಯೋ ರೋಗವನ್ನು ಸಂಪೂರ್ಣವಾಗಿ ತಡೆಯಲು ಮಗುವಿಗೆ 5 ವರ್ಷ ತುಂಬುವುದರೊಳಗೆ 7 ಬಾರಿ ಪೋಲಿಯೋ ಲಸಿಕೆ ತಪ್ಪದೆ ಹಾಕಿಸಬೇಕೆಂದು ಮನವಿ ಮಾಡಿದರು.

1955ರಲ್ಲಿ ವಿಜ್ಞಾನಿ ಡಾ.ಜೋನಾಸ್ ಸಾಲ್ಕ್ ಅವರು ಅಭಿವೃದ್ಧಿಪಡಿಸಿದ ಪೋಲಿಯೋ ಲಸಿಕೆಯನ್ನು 1995 ಡಿಸೆಂಬರ್‌ನಲ್ಲಿ ಭಾರತ ಸರಕಾರವು 05 ವರ್ಷದೊಳಗಿನ ಮಕ್ಕಳಿಗೆ ಬಾಯಿ ಮೂಲಕ ಎರಡು ಹನಿ ಪೋಲಿಯೋ ದ್ರಾವಣ ಹಾಕುವ ಪಲ್ಸ್ ಪೋಲಿಯೋ ಅಭಿಯಾನ ಆರಂಭಿಸಿದ ತರುವಾಯ 2011ರ ಜನವರಿಯಲ್ಲಿ ದೇಶದಲ್ಲಿ ಕೊನೆಯ ಪೋಲಿಯೋ ಪ್ರಕರಣದ ನಂತರ ಇಂದು ಕೋಟ್ಯಾಂತರ ಮಕ್ಕಳ ಬದುಕಿನಲ್ಲಿ ಅಂಗವೈಕಲ್ಯತೆಯನ್ನು ದೂರಮಾಡಿದ ಆಶಾಕೀರಣವಾಗಿದೆ. ಈ ದಿಶೆಯಲ್ಲಿ ಜಾಗತಿಕವಾಗಿ ಶೂನ್ಯ ಪೋಲಿಯೋ ಪ್ರಕರಣವಾಗಿಸಲು ಪಾಲಕರು ತಪ್ಪದೆ ಪೋಲಿಯೋ ಲಸಿಕೆ ಹಾಕಿಸಲು ಅವರು ವಿನಂತಿಸಿದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್. ಎನ್ ಅವರು ಪ್ರಾಸ್ತಾವಿಕ ಮಾತನಾಡಿ, ಪೋಲಿಯೋ ರೋಗವನ್ನು ಪರಿಣಾಮಕಾರಿ ತಡೆಗೆ ಲಸಿಕೆಯನ್ನು ಬಾಯಿ ಮೂಲಕವಲ್ಲದೆ ಚುಚ್ಚುಮದ್ದು ರೂಪದಲ್ಲಿ ಸಹ ನೀಡಲಾಗುತ್ತಿದೆ. ಇದರೊಂದಿಗೆ 12 ಮಾರಕ ರೋಗಗಳು ಬಾರದಂತೆ ನೋಡಿಕೊಳ್ಳಲು ಮಗುವಿಗೆ ಒಂದು ವರ್ಷದೊಳಗೆ ಪೂರ್ಣ ಲಸಿಕೆ ಹಾಗೂ ಎರಡು ವರ್ಷದೊಳಗೆ ಬೂಸ್ಟರ್ ಡೋಸ್ ರೂಪದಲ್ಲಿ ನೀಡುವ ಲಸಿಕೆ ತಪ್ಪದೆ ಹಾಕಲು ಜಿಲ್ಲೆಯಾದ್ಯಂತ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ನಿರಂತರವಾಗಿ ಲಸಿಕೆ ಹಾಕಲಾಗುತ್ತಿದ್ದು, ಪಾಲಕರು ಈ ಬಗ್ಗೆ ಗಮನ ಹರಿಸಬೇಕು ಎಂದು ಸಲಹೆ ಮಾಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್ ಕೆ, ಆಡಳಿತ ವೈದ್ಯಾಧಿಕಾರಿ ಡಾ.ಪ್ರಜ್ವಲ್ ಕುಮಾರ್, ತಜ್ಞವೈದ್ಯರಾದ ಡಾ.ಅನುಷ್ಕಾ ಅಕುಲಾ, ಡಾ.ಇಮ್ರಾನ್ ಪರ್ವೇಜ್, ರೋಟರಿ ಸಂಸ್ಥೆಯ ಕಾರ್ಯದರ್ಶಿ ಅಂಬ್ರೇಶ್ ರೆಡ್ಡಿ, ಸಂಪತ್‌ಕುಮಾರ್, ಶಿವಕುಮಾರ್, ಮಂಜುನಾಥ್, ಡಿಹೆಚ್‌ಇಓ ಈಶ್ವರ ಹೆಚ್.ದಾಸಪ್ಪನವರ, ಡಿವೈಹೆಚ್‌ಇಓ ಬಸಯ್ಯ, ಹಿರಿಯ ಶುಶ್ರೂಷಣಾಧಿಕಾರಿ ಸೆಲೋಮಿ, ಬಿಹೆಚ್‌ಇಓ ಸರೋಜಾ ಕೆ, ಎಫ್‌ವಿಐ ಕೋಪ್ರೇಶ್ ಸೇರಿದಂತೆ ಇತರರು ಇದ್ದರು.

## ಸಿಲಿಂಡರ್ ಸ್ಫೋಟ ವೃದ್ಧೆ ಸಾವು, ಕಟ್ಟಡ ನೆಲಸಮ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಅ.25–ಭೀಕರ ಸಿಲಿಂಡರ್ ಸ್ಫೋಟಕ್ಕೆ ಬೃಹತ್ ಕಟ್ಟಡವೇ ನೆಲಸಮಗೊಂಡು, ವೃದ್ಧೆ ಸಾವನ್ನಪ್ಪಿ ನಾಲ್ವರು ಗಾಯಗೊಂಡಿರುವ ದಾರುಣ ಕೆ.ಆರ್ ಪುರಂನ ತ್ರಿವೇಣಿ ನಗರದಲ್ಲಿ ಇಂದು ಬೆಳಿಗ್ಗೆ ನಡೆದಿದೆ.

ತ್ರಿವೇಣಿ ನಗರದ ಶೇಖರ್ ಅವರ ಮನೆಯಲ್ಲಿ ಬೆಳಗ್ಗೆ 7 ಗಂಟೆ ಸುಮಾರಿಗೆ ಅಡುಗೆ ಅನಿಲ ಸಿಲಿಂಡರ್ ಹೊತ್ತಿಸಲು ಹೋದಾಗ ದಿಢೀರ್ ಸ್ಫೋಟ ನಡೆದಿದ್ದು, ಸ್ಫೋಟದ ತೀವ್ರತೆಗೆ ಭಾರೀ ಕಟ್ಟಡವೇ ನೆಲಸಮವಾಗಿ ಅಕ್ಕಪಕ್ಕದ ಮನೆಗಳ ಕಿಟಕಿಗಳು ಹಾನಿಯಾಗಿದೆ.

ಸ್ಫೋಟದಲ್ಲಿ ಸಿಲುಕಿ ವೃದ್ಧೆ ಅಕ್ಕಯಮ್ಮ(80) ಮೃತಪಟ್ಟರೆ, ಮಾಲೀಕ ಶೇಖರ್ ಮನೆಯಲ್ಲಿದ್ದ, ಕಿರಣ್ ಕುಮಾರ್, ಕಾಂಚನಾ ಹಾಗೂ ಪಕ್ಕದ ಮನೆಯ ಚಂದನಾ ಗಂಭೀರ ಗಾಯಗೊಂಡಿದ್ದಾರೆ.

ಗಾಯಗೊಂಡಿರುವ ನಾಲ್ವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಲ್ಲಿ ಚಂದನಾ ಸ್ಥಿತಿ ಚಿಂತಾಜನಕವಾಗಿದೆ. ಸುದ್ದಿ ತಿಳಿದ ತಕ್ಷಣವೇ ಘಟನಾ ಸ್ಥಳಕ್ಕೆ ಕೆ.ಆರ್ ಪುರಂ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ ಪರಿಹಾರ ಕಾರ್ಯ ಕೈಗೊಂಡಿದ್ದಾರೆ.

ಬಾಂಬ್ ನಿಷ್ಕ್ರಿಯ ದಳ ಹಾಗೂ ಶ್ವಾನದಳದ ಅಧಿಕಾರಿಗಳಿಂದಲೂ ಸ್ಥಳಪರಿಶೀಲನೆ ನಡೆಸಲಾಗಿದೆ. ಸ್ಥಳಕ್ಕೆ ಭೇಟಿ ನೀಡಿರುವ ವೈಟ್ ಫೀಲ್ಡ್ ಡಿಸಿಪಿ ಪರಶುರಾಮ್ ಅವರು ಪರಿಶೀಲನೆ ನಡೆಸಿ ಮಾಹಿತಿ ಪಡೆದಿದ್ದು, ಸ್ಫೋಟಕ್ಕೆ ಕಾರಣ ತಿಳಿಯಲು ತನಿಖೆಯನ್ನು ತೀವ್ರಗೊಳಿಸಲು ಸೂಚನೆ ನೀಡಿದ್ದಾರೆ.

## ರಾಯಚೂರಿನಲ್ಲಿ ಅಕ್ಟೋಬರ್ 27 ರಂದು ವಿಶೇಷ ಮಿಂಚಿನ ನೋಂದಣಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 25– ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ–2026ರ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಕುರಿತ ವಿಶೇಷ ಮಿಂಚಿನ ನೋಂದಣಿ ಅಭಿಯಾನವು ಅಕ್ಟೋಬರ್ 27ರಂದು ರಾಯಚೂರು ಜಿಲ್ಲೆಯ ವಿವಿಧೆಡೆ ನಡೆಯಲಿದೆ.

ರಾಯಚೂರಿನ ಕೃಷಿ ವಿಶ್ವವಿದ್ಯಾಲಯ, ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಿಮ್ಸ್, ಡೆಂಟಲ್ ಕಾಲೇಜು, ಪ್ಯಾರಾ ಮೆಡಿಕಲ್ ಕಾಲೇಜು, ಪಾಲಿಟೆಕ್ನಿಕ್, ನವೋದಯ ಎಂಜಿನಿಯರಿಂಗ್ ಕಾಲೇಜು, ನವೋದಯ ವೈದ್ಯಕೀಯ ಕಾಲೇಜು, ಶಾಲಾ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಜಿಲ್ಲೆ ಎಲ್ಲ ತಹಸೀಲ್ದಾರ ಕಚೇರಿಗಳಲ್ಲಿ, ತಾಲೂಕು ಪಂಚಾಯತ್ ಕಚೇರಿಗಳಲ್ಲಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿಗಳಲ್ಲಿ ಅಕ್ಟೋಬರ್ 27ರಂದು ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರು ನೋಂದಣಿಗಾಗಿ ವಿಶೇಷ ಮಿಂಚಿನ ನೋಂದಣಿ ಅಭಿಯಾನ ನಡೆಯಲಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರಾದ ಈಶ್ವರ್ ಕಾಂದೂ ಅವರು ತಿಳಿಸಿದ್ದಾರೆ.

## ಸಹಕಾರ ರತ್ನ ಪ್ರಶಸ್ತಿಗೆ ಅಜಿ ಸಲ್ಲಿಸಲು ಅಕ್ಟೋಬರ್ 28 ಕೊನೆಯ ದಿನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 25– ಸರ್ಕಾರವು ಶ್ರೇಷ್ಠ ಸಹಕಾರಿಗಳನ್ನು ಗುರುತಿಸಿ ಸಹಕಾರ ರತ್ನ ಪ್ರಶಸ್ತಿ ನೀಡುವ ಸಲುವಾಗಿ 2025ನೇ ಸಾಲಿನ ಪ್ರಶಸ್ತಿಗೆ ಆಯ್ಕೆ ಮಾಡಲು ಅರ್ಹ ಸಹಕಾರಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಹಕಾರ ಕ್ಷೇತ್ರದಲ್ಲಿ ಕನಿಷ್ಠ 10 ವರ್ಷಗಳ ನಿಷ್ಕಳಂಕ ಸೇವೆ ಸಲ್ಲಿಸಿರುವ ಜಿಲ್ಲೆಯ ನಿವಾಸಿಗಳು ತಮ್ಮ ವೈಯಕ್ತಿಕ ಪರಿಚಯ, ಸಹಕಾರ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ವಿವರ, ಸಹಕಾರ ಚಳುವಳಿಯಲ್ಲಿ ತೊಡಗಿಸಿಕೊಂಡಿರುವ ವಿವರ ಹಾಗೂ ಪೂರಕ ಮಾಹಿತಿ ಹಾಗೂ ಅಗತ್ಯ ದಾಖಲಾತಿಗಳೊಂದಿಗೆ ಸಹಕಾರ ಸಂಘಗಳ ಉಪ ನಿಬಂಧಕರು, ರಾಯಚೂರು ಇವರಿಗೆ ಅಕ್ಟೋಬರ್ 28ರ ಸಂಜೆ 5.30ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ರಾಯಚೂರಿನ ಸಹಕಾರ ಸಂಘಗಳ ಉಪ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದರ ನಿಗದಿಯಾಗದೆ ಸಕ್ಕರೆ ಕಾರ್ಖಾನೆ ಪ್ರಾರಂಭಿಸದಿರಲು ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಕಬ್ಬು ಬೆಳೆಯುವ ರೈತರಿಗೆ ಪ್ರತಿ ವರ್ಷ ವೆಚ್ಚ ಹೆಚ್ಚಾಗುತ್ತಿದ್ದು, ಸಕ್ಕರೆ ಕಾರ್ಖಾನೆಗಳು ಬೆಲೆ ನಿಗದಿ, ಕಟಾವು ಸಂದರ್ಭದಲ್ಲಿ ಮೋಸ ಮಾಡುತ್ತಿವೆ. ಆದ್ದರಿಂದ ಪ್ರತಿ ಟನ್ ಕಬ್ಬಿನ ಬೆಲೆಯನ್ನು ಸರ್ಕಾರ ₹ 3500ರಂತೆ ನಿಗದಿ ಮಾಡಬೇಕು ಹಾಗೂ ದರ ನಿಗದಿಯಾಗದೆ ಸಕ್ಕರೆ ಕಾರ್ಖಾನೆ ಪ್ರಾರಂಭಿಸ ಬೇಡಿ ಎಂದು ರೈತಪರ ಹೋರಾಟಗಾರ ಚೆನ್ನವೀರ ದಸ್ತಾಪೂರ ಅವರು ಸರಕಾರಕ್ಕೆ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಉತ್ತರ ಪ್ರದೇಶದಲ್ಲಿ ರಾಜ್ಯ ಸಲಹಾ ಸಮಿತಿ ದರ ಪ್ರತಿ ಟನ್ನಿಗೆ 3500 ಇದೆ. ಕರ್ನಾಟಕ ಸರ್ಕಾರವು ₹ 3200 ಖರ್ಚು ತಗಲುತ್ತದೆ ಎಂದು ವರದಿ ನೀಡಿದೆ. ಪ್ರಸ್ತುತ ಕಬ್ಬಿನ ದರವನ್ನು ₹ 2300ರಂತೆ ಖರೀದಿ ಮಾಡುತ್ತಿವೆ. ಹಾಗಾಗಿ, ಕಬ್ಬು ಬೆಳೆಗಾರರ ನೆರವಿಗೆ ಬರುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ 3500 ದರ ನಿಗದಿ ಮಾಡಬೇಕು. ಸಕ್ಕರೆ ಕಾರ್ಖಾನೆಯವರು ಅವೈಜ್ಞಾನಿಕ ಕಟಾವು ಮತ್ತು ಟೋಳಿ ಸಂಯೋಜನೆಯಿಂದಾಗಿ ರೈತರಿಂದ ಪ್ರತಿ ಎಕರೆ ಕಟಾವು ಮಾಡಲು ₹ 10 ರಿಂದ 12 ಸಾವಿರ ಹೆಚ್ಚುವರಿಯಾಗಿ ವಸೂಲಿ ಮಾಡುತ್ತಿದ್ದಾರೆ. ಇದನ್ನು ತಪ್ಪಿಸುವ ನಿಟ್ಟಿನಲ್ಲಿ ಸಕ್ಕರೆ ಸಚಿವರು ಹಾಗೂ ಜಿಲ್ಲಾಧಿಕಾರಿಗಳು ಸಕ್ಕರೆ ಕಾರ್ಖಾನೆಗಳ ಆಡಳಿತ ಮಂಡಳಿಗಳ ಸಭೆ ಕರೆದು ಸುಲಿಗೆ ಆಗುವುದನ್ನು ತಪ್ಪಿಸಬೇಕು ಎಂದು ಒತ್ತಾಯಿಸಿದರು. ತೂಕದಲ್ಲಿ ಮೋಸವನ್ನು ತಡೆಯಬೇಕು. ಎಫ್‌ಆರ್‌ಪಿ ಪ್ರಕಾರ ಕಬ್ಬು ಖರೀದಿಸಿದ 15 ದಿನಗಳ ಒಳಗಾಗಿ ಅದರ ಮೊತ್ತವನ್ನು ರೈತರಿಗೆ ವಿತರಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

## ಸಂಡೂರಿನಲ್ಲಿ ಎದ್ದೇಳು ಕನ್ನಡಿಗ ಕೆ ಆರ್ ಎಸ್ ಪಕ್ಷ ಸೇರು ಬಾ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ


ಬಳ್ಳಾರಿ, ಅ.25 :– ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ವತಿಯಿಂದ ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ಹಮ್ಮಿಕೊಂಡಿದ್ದ ಎದ್ದೇಳು ಕನ್ನಡಿಗ ಕೆ ಆರ್ ಎಸ್ ಪಕ್ಷ ಸೇರು ಬಾ ಅಭಿಯಾನ ಯಶಸ್ವಿಯಾಗಿ ನಡೆಯಿತು. ನಗರದ ವಿಜಯ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಅಭಿಯಾನಕ್ಕೆ ಚಾಲನೆ ತಾಲೂಕಾದ್ಯಂತ ಅಭಿಯಾನ ಮಾಡಿ ಜನ ಜಾಗೃತಿ, ಹಾಗೂ ಪಕ್ಷದ ಸದಸ್ಯತ್ವ ಮಾಡುವ ಮೂಲಕ ದೇಣಿಗೆ ಸಂಗ್ರಹಿಸಲಾಯಿತು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕೆ ಆರ್ ಎಸ್ ಪಕ್ಷದ ರಾಜ್ಯ ರೈತ ಘಟಕದ ಕಾರ್ಯದರ್ಶಿ ನಿರುಪಾದಿ ಕೆ ಗೋಮರ್ಸಿ ಅವರು ಇತ್ತೀಚಿನ ದಿನಗಳಲ್ಲಿ ಕನ್ನಡಿಗರು ಅನುಭವಿಸುತ್ತಿರುವ ನೋವುಗಳಿಗೆ, ಕಷ್ಟ ಕಾರ್ಪಣ್ಯಗಳಿಗೆ ನಮ್ಮನ್ನು ಆಳುತ್ತಿರುವ ಎಲ್ಲಾ ರಾಜಕೀಯ ಪಕ್ಷಗಳು ನೇರವಾಗಿ ಕಾರಣ. ಅವರವರ ಸ್ವಾರ್ಥದ ಮತ್ತು ಕುಟುಂಬದ ರಾಜಕಾರಣದಲ್ಲಿ ತಾಲೂಕಿನ ಜನರನ್ನು ಮೂರ್ಖರನ್ನಾಗಿ ಮಾಡಿ ಜನರನ್ನು ವಂಚಿಸುತ್ತಿದ್ದಾರೆ ಜನಪರವಾದ ಆಡಳಿತ ನಡೆಸಬೇಕಾದ ಪಕ್ಷಗಳು ಜಾತಿ ರಾಜಕಾರಣ, ಹಣಬಲದ ರಾಜಕಾರಣದಲ್ಲಿ ತೊಡಗಿಸಿಕೊಂಡಿವೆ ಹಾಗಾಗಿ ನಮ್ಮ ಪಕ್ಷವು ಕನ್ನಡ ನಾಡಿನ ನೆಲ, ಜಲ, ಗಡಿ ಭಾಷೆಯ ಉಳಿವಿಗಾಗಿ ಮತ್ತು ಕನ್ನಡಿಗರಿಗೆ ಉದ್ಯೋಗದಲ್ಲಿ ಹೆಚ್ಚಿನ ಆದ್ಯತೆ ನೀಡುವಿಕೆಗಾಗಿ ಒತ್ತಾಯಿಸಿ ಮುಂದಿನ ನವಂಬರ್ ತಿಂಗಳಲ್ಲಿ ಒಂದು ದೊಡ್ಡ ಸಮಾವೇಶ ಆಯೋಜಿಸಲಾಗುತ್ತಿದ್ದು ತಾಲೂಕಿನ ಸಮಸ್ತ ಕನ್ನಡಿಗರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಬಳ್ಳಾರಿ ಜಿಲ್ಲಾ ಕಾರ್ಯದರ್ಶಿ ಖಾದರಬಾಷಾ ಮಾತನಾಡಿ ರೈತರಿಗೆ, ಮಹಿಳೆಯರಿಗೆ, ವಿದ್ಯಾರ್ಥಿಗಳಿಗೆ, ಕೃಷಿ ಕಾರ್ಮಿಕರಿಗೆ ಉತ್ತಮವಾದ ಜೀವನ ನಿರ್ವಹಣೆಗೆ ಅನಾನುಕೂಲದ ವಾತಾವರಣ ನಿರ್ಮಾಣವಾಗಿದೆ ಈ ಎಲ್ಲಾ ಅವ್ಯವಸ್ಥೆಗಳನ್ನು ವಿರೋಧಿಸಿ ಪ್ರತಿಯೊಬ್ಬರು ಉತ್ತಮವಾದ ಜನ ಜೀವನ ಮಾಡುವಂತೆ ಹಾಗೂ ರಾಜ್ಯ ಮತ್ತು ಕೇಂದ್ರ ಸರ್ಕಾರದ ಹಲವಾರು ಯೋಜನೆಗಳು ಜನರಿಗೆ ತಲುಪಿಸಿ ಕನ್ನಡಿಗರನ್ನು ಜಾಗೃತಿ ಮೂಡಿಸಲು ಈ ಅಭಿಯಾನ ಹಮ್ಮಿಕೊಳ್ಳಲಾಗಿದು ಇದಕ್ಕೆ ಕನ್ನಡಪರ, ರೈತಪರ, ಪ್ರಗತಿಪರ ಸಂಘಟನೆಗಳ ಮುಖಂಡರು, ನಾಯಕರು ಬೆಂಬಲಿಸಬೇಕೆಂದು ವಿನಂತಿಸಿದರು.

ಇದೇ ಸಂದರ್ಭದಲ್ಲಿ ಪಕ್ಷದ ರಾಜ್ಯ ಸಮಿತಿ ಮುಖಂಡರಾದ ಶ್ರೀನಿವಾಸ ರೆಡ್ಡಿ, ಜಿಲ್ಲಾ ಕಾರ್ಯದರ್ಶಿ ಕಟ್ಟೆ ಬಸಪ್ಪ, ರೈತ ಘಟಕದ ಜಿಲ್ಲಾಧ್ಯಕ್ಷ ಜನಾರ್ಧನ ರೆಡ್ಡಿ, ಸಂಡೂರು ತಾಲೂಕಾಧ್ಯಕ್ಷ ಮಂಜುನಾಥ್ ಗೌಳಿ, ಉಪಾಧ್ಯಕ್ಷ ಶರ್ಮಾಸ ವಲಿ, ಪ್ರಧಾನ ಕಾರ್ಯದರ್ಶಿ ರವಿ ನಾಡಿಗೇರ, ಕಾರ್ಯದರ್ಶಿಗಳಾದ ಮೆಹಬೂಬ್, ಪಂಪಾಪತಿ, ರಾಮುನಾಯಕ, ಇಮಾಮ ಬಾಷಾ, ಸುರೇಶ್, ಕೂಡ್ಲಿಗಿ ಅಧ್ಯಕ್ಷ ಶರಣಪ್ಪ, ಲೋಕೇಶ್, ಉಪಾಧ್ಯಕ್ಷ ಮಂಜುನಾಥ್, ಮೋಹನ್, ಹುಚ್ಚುಸಾಬ್ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ಗೀಸರ್ ಅನಿಲ ಸೋರಿಕೆ ಉಸಿರುಗಟ್ಟಿ ಅಕ್ಕ–ತಂಗಿ ಸಾವು



ಮಲ್ಲಮ್ಮ ನುಡಿ ವಾರ್ತೆ

ಕೊಡಗು, ಅ.25–ಗ್ಯಾಸ್ ಸಿಲಿಂಡರ್ ಗೀಸರ್‌ನಿಂದ ಅನಿಲ ಸೋರಿಕೆಯಾಗಿ ಅಕ್ಕ–ತಂಗಿ ಇಬ್ಬರು ಉಸಿರುಗಟ್ಟಿ ಮೃತಪಟ್ಟಿರುವ ದಾರುಣ ಘಟನೆ ಪಿರಿಯಾಪಟ್ಟಣ ತಾಲೂಕಿನಲ್ಲಿ ನಡೆದಿದೆ. ಪಿರಿಯಾಪಟ್ಟಣದ ಬೆಟ್ಟದಪುರ ಮೂಲದ ಅಲ್ತಾಫ್ ಪಾಷಾ ಅವರ ಎರಡನೇ ಮಗಳು ಗುಲ್ಬಮ್ ತಾಜ್(23) ಮತ್ತು ನಾಲ್ಕನೇ ಮಗಳಾದ ಸಿಮ್ರಾನ್ ತಾಜ್ (21) ಮೃತಪಟ್ಟವರು.

ಪಿರಿಯಾಪಟ್ಟಣದ ಜೋನಿಗೇರಿ ಬೀದಿಯಲ್ಲಿ ಅಲ್ತಾಫ್ ಪಾಷಾ ಮತ್ತು ಅವರ ಕುಟುಂದವರು ಬಾಡಿಗೆ ಮನೆಯಲ್ಲಿ ವಾಸವಾಗಿದ್ದಾರೆ. ಅ.22ರ ರಾತ್ರಿ ಸುಮಾರು 7ರ ಸಮಯದಲ್ಲಿ ಸಹೋದರಿಯರು ಒಟ್ಟಿಗೆ ಸ್ನಾನಕ್ಕೆ ತೆರಳಿದ್ದಾರೆ. ಈ ವೇಳೆ ಸ್ನಾನದ ಕೋಣೆಯಲ್ಲಿ ಗ್ಯಾಸ್ ಗೀಸರ್ ಆನ್ ಮಾಡಿದ ತಕ್ಷಣ ಅದ–ರಿಂದ ಬಿಡುಗಡೆಯಾದ ವಿಷಾನಿಲ ಸೇವನೆಯಿಂದ ಉಸಿರಾಡಲು ತೊಂದರೆ ಉಂಟಾಗಿ ತಕ್ಷಣ ಅಸ್ವಸ್ಥರಾಗಿ ಕುಸಿದು ಬಿದ್ದಿದ್ದರು.

ಕೆಲ ಹೊತ್ತಾದರೂ ಸ್ನಾನದ ಕೋಣೆಯಿಂದ ಹೊರಗೆ ಬರದಿದ್ದಾಗ, ಕುಟುಂಬಸ್ಥರು ತೆರಳಿ ನೋಡಿದಾಗ ಇಬ್ಬರೂ ಕುಸಿದು ಬಿದ್ದಿದ್ದರು. ತಕ್ಷಣವೇ ಇಬ್ಬರು ಸಹೋದರಿಯರನ್ನು ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಆದರೆ ಆ ವೇಳೆಗೆ ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದರು ಎಂದು ತಂದೆ ದೂರಿನಲ್ಲಿ ತಿಳಿಸಿದ್ದಾರೆ. ಪಿರಿಯಾಪಟ್ಟಣದ ಶವಾಗಾರದಲ್ಲಿ ಇಬ್ಬರೂ ಯುವತಿಯರ ಮರಣೋತ್ತರ ಪರೀಕ್ಷೆ ನಡೆಸಿ, ನಂತರ ಬೆಟ್ಟದಪುರದ ಗ್ರಾಮದಲ್ಲಿ ನಿನ್ನೆ ಸಂಜೆ ಅಂತ್ಯಕ್ರಿಯೆ ನೆರವೇರಿಸಲಾಯಿತು. ಈ ಸಂಬಂಧ ಪಿರಿಯಾಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಗುಲ್ಬಮ್‌ಗೆ ನಿಶ್ಚಿತಾರ್ಥ:

ಅಲ್ತಾಫ್ ಪಾಷ ಅವರಿಗೆ ನಾಲ್ಕು ಜನ ಹೆಣ್ಣು ಮಕ್ಕಳಿದ್ದು, ಇಬ್ಬರಿಗೆ ಮದುವೆಯಾಗಿದೆ. ಮೃತ ಗುಲ್ಬಮ್ ತಾಜ್‌ಗೆ ನಿಶ್ಚಿತಾರ್ಥವಾಗಿತ್ತು. ಪಿರಿಯಾಪಟ್ಟಣಕ್ಕೆ ಹೊಸ ಬಾಡಿಗೆ ಮನೆಗೆ ಬಂದಿದ್ದಕ್ಕೆ ಪೂಜೆ ಹಮ್ಮಿಕೊಂಡಿದ್ದರು. ಈ ಪೂಜೆಗೆ ವರನ ಕಡೆಯವರು ಮನೆಯಲ್ಲಿದ್ದ ಸಂದರ್ಭದಲ್ಲಿ ಈ ಅವಘಡ ಸಂಭವಿಸಿದೆ.

# ಯಾರು ಎಷ್ಟು ಮಕ್ಕಳನ್ನು ಹೆರಬೇಕು ಎಂದು ಹೇಳೋಕೆ ಕಲ್ಲಡ್ಕ ಯಾರು? ಜ್ಯೋತಿ ಪ್ರಶ್ನೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ದೀಪಾವಳಿ ನಿಮಿತ್ಯ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಕಲ್ಲಡ್ಕ ಭಟ್ಟ ಅವರು ಅತ್ಯಂತ ಕೆಟ್ಟ ಮನಸ್ಥಿತಿಯ ಅನಾವರಣಗೊಳಿಸಿದ್ದಾರೆ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಜ್ಯೋತಿ ಎಂ. ಗೊಂಡಬಾಳ ಟೀಕಿಸಿದ್ದಾರೆ. ದೀಪಾವಳಿ ಹಬ್ಬದ ಪ್ರಯುಕ್ತ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲೂಕಿನ ಉಪ್ಪಳಿಗೆ ಎಂಬಲ್ಲಿ ಆಯೋಜಿಸಿದ್ದ ದೀಪೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ವೇಳೆ ಈ ಹೇಳಿಕೆ ನೀಡಿದ್ದಾರೆ.



ವಿಧಾನ ಸಭಾಧ್ಯಕ್ಷ ಯು. ಟಿ. ಖಾದರ್ ಪ್ರತಿನಿಧಿಸುವ ಮಂಗಳೂರು (ಉಳ್ಳಾಲ) ಕ್ಷೇತ್ರದ ಬಗ್ಗೆ ಮಾತನಾಡಿದ ಪ್ರಭಾಕರ್ ಭಟ್, "ಉಳ್ಳಾಲದಲ್ಲಿ ಹಿಂದೂ ಅಭ್ಯರ್ಥಿ ಚುನಾವಣೆಯಲ್ಲಿ ಗೆಲ್ಲುವುದಕ್ಕೆ ಸಾಧ್ಯವೇ ಇಲ್ಲ. ಯಾ–ಕೆಂದರೆ ಅಲ್ಲಿನ ಬ್ಯಾರಿ (ಕರಾವಳಿಯ ಮುಸ್ಲಿಮರು)ಗಳ ಮನೆಯಲ್ಲಿ ಆರರಿಂದ ಏಳು ಮಕ್ಕಳಿದ್ದಾರೆ. ಅಲ್ಲಾನ ಹೆಸರಿನಲ್ಲಿ ಅವರು ಮಕ್ಕಳು ಮಾಡುತ್ತಲೇ ಇದ್ದಾರೆ. ಹಿಂದೂಗಳಲ್ಲಿ ವೋಟಿಲ್ಲದ ಕಾರಣ ನಮ್ಮವರು ಸೋಲುತ್ತಿದ್ದಾರೆ ಎಂದು ಹೇಳಿರುವದು ನಿಜಕ್ಕೂ ಮಾನಗೇಡಿ ಕೃತ್ಯ. ಬಿಜೆಪಿ, ಸಂಘ–ಪರಿವಾರದ ಕೆಲಸ ಕೇವಲ ಇಂತಹ ದ್ವೇಷ ಹುಟ್ಟಿಸುವದಾಗಿದೆ. ಯಾರು ಎಷ್ಟು ಮಕ್ಕಳನ್ನು ಹೆರಬೇಕು ಎಂಬುದನ್ನು ನಿರ್ಧರಿಸುವ ಅಧಿಕಾರವಾಗಲಿ, ಯೋಚನೆಯಾಗಲಿ ಗಂಡ ಹೆಂಡತಿಗೆ ಸಂಬಂದಿಸಿದ್ದು ಹೊರತು ಮೂರನೇ ವ್ಯಕ್ತಿಗೆ ಅಲ್ಲಿ ಕೆಲಸವಿಲ್ಲ. ಇನ್ನು ಅವರವರ ಕುಟುಂಬದ ರಕ್ಷಣೆಯನ್ನು ಅವರೇ ನೋಡಿಕೊಳ್ಳಬೇಕಿದೆ, ಬೇಕಾಬಿಟ್ಟಿ ಜಿ ಎಸ್ ಟಿ ಮೂಲಕ, ಸುಖಾಸುಮ್ಮನೇ ಬೆಲೆ ಏರಿಕೆ ಮಾಡಿ ಜನರ ಬದುಕನ್ನು ಹೈರಾಣಾಗಿಸಿದ ಬಿಜೆಪಿ ಮೋದಿ ಸರಕಾರದಿಂದ ಮಕ್ಕಳ ರಕ್ಷಣೆ ಅಸಾಧ್ಯ. ಹಿಂದೂ ರಕ್ಷಕರೆಂದು ಬೊಬ್ಬೆ ಇಡುವ ಜನರಿಂದ ದೇಶದ ಯಾವ ಜನರೂ ಸುಖವಾಗಿ ಇಲ್ಲ. ಅವರು ಕೇವಲ ಅಧಿಕಾರಶಾಹಿ ಮೇಲ್ವರ್ಗದ ಶ್ರೀಮಂತ ಜನರಿಗೆ ಮಾತ್ರ ಎಂದು ಜ್ಯೋತಿ ಗೊಂಡಬಾಳ ಕುಟುಕಿದ್ದಾರೆ.

# ಕೆಯುಡಬ್ಲ್ಯೂಜೆ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಹನುಮಂತ ಹಳ್ಳಿಕೇರಿ, ಜಿ.ಪ್ರ,ಕಾರ್ಯದರ್ಶಿ ಸ್ಥಾನಕ್ಕೆ ನಾಗರಾಜ ನಾಮಪತ್ರ ಸಲ್ಲಿಕೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕೊಪ್ಪಳ ಜಿಲ್ಲಾ ಘಟಕದ ಚುನಾವಣಾ ಪ್ರಕ್ರಿಯೆ ಪ್ರಾರಂಭವಾಗಿದ್ದು, ಹಾಲಿ ಜಿಲ್ಲಾಧ್ಯಕ್ಷರಾದ ಹನುಮಂತ ಹಳ್ಳಿಕೇರಿ, ಹಾಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾದ ನಾಗರಾಜ್ ಅವರು ಮತ್ತೊಮ್ಮೆ ಸ್ಪರ್ಧೆ ಬಯಸಿ ನಾಮಪತ್ರ ಸಲ್ಲಿಸಿದರು. ಶುಕ್ರವಾರದಂದು ಇಲ್ಲಿನ ಚುನಾವಣಾ ಕಚೇರಿಯಾಗಿ–ರೋ ಪತ್ರಿಕಾಭವನದಲ್ಲಿ ಅಪಾರ ಪತ್ರಕರ್ತರೊಡನೆ ತೆರಳಿ ಜಿಲ್ಲಾಧ್ಯಕ್ಷರ ಸ್ಥಾನಕ್ಕೆ ಹನುಮಂತ ಹಳ್ಳಿಕೇರಿ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ನಾಗರಾಜ್. ವೈ ಅವರು ಚುನಾವಣಾ ಅಧಿಕಾರಿಗಳಾದ ದುರಗಪ್ಪ ತಿಪ್ಪನಾಳ ಅವರಿಗೆ ನಾಮಪತ್ರ ಸಲ್ಲಿಸಿದರು.

ಈ ಸಂಧರ್ಬದಲ್ಲಿ ನಾಮಪತ್ರ ಸಲ್ಲಿಸಿದ ಹನುಮಂತ ಹಳ್ಳಿಕೇರಿ, ನಾಗರಾಜ್. ವೈ ನಾಮಪತ್ರ ಸಲ್ಲಿಸುವ ವೇಳೆ ರಾಷ್ಟ್ರೀಯ ಸಮಿತಿ ಸದಸ್ಯರಾದ ಜಿ.ಎಸ್ ಗೋನಾಳ, ರಾಜ್ಯ ಸಮಿತಿ ಸದಸ್ಯರಾದ ಎಂ.ಸಾದಿಕ್ ಅಲಿ, ಎಚ್.ಎಸ್ ಹರೀಶ್, ಉಪಾಧ್ಯಕ್ಷರಾದ ರುದ್ರಗೌಡ ಪಾಟೀಲ್, ಜಿಲ್ಲಾ ಕಾರ್ಯದರ್ಶಿ ವೀರಣ್ಣ ಕಳ್ಳಿಮನಿ, ನಿಕಟಪೂರ್ವ ಅಧ್ಯಕ್ಷ ಬಸವರಾಜ ಗುಡ್ಲಾನೂರು, ಜಿಲ್ಲಾ ಖಜಾಂಚಿ ರಾಜು.ಬಿ.ಆರ್, ಸದಸ್ಯರಾದ ಪ್ರಭು ಗಾಳಿ, ಬಸವರಾಜ ತೊಂಡಿಹಾಳ, ಶಿವಕುಮಾರ್ ಪತ್ತಾರ್, ಮಾರುತಿ ಕಟ್ಟಿಮನಿ, ಶಿವಕುಮಾರ್ ಹಿರೇಮಠ, ಬಸವರಾಜ ಪಲ್ಲೇದ್, ಜಿಲ್ಲಾ ಕಾರ್ಯಕಾರಣಿ ಸಮಿತಿ ಸದಸ್ಯ ಮಂಜುನಾಥ ಪ್ರಸಾದ್ ಸೇರಿದಂತೆ ಅನೇಕ ಪತ್ರಕರ್ತರ ಇದ್ದರು.

# ಗ್ರಾಮೀಣ ಮಹಿಳೆಯರಿಗೆ ದೇಶಿ ಕೋಳಿಮರಿ ವಿತರಣೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಸರ್ಕಾರದಿಂದ ಯುವನಿಧಿ ಪ್ಲಸ್ ಉಪಕ್ರಮದಡಿಯಲ್ಲಿ ನೀಡುತ್ತಿರುವ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳನ್ನು ನೋಂದಾಯಿಸಬೇಕೆಂದು ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾ ಪಂಚಾಯತ್‌ನ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಂಬಂಧ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಯುವನಿಧಿ ಪ್ಲಸ್ ಕರ್ನಾಟಕ ಸರ್ಕಾರದ ಉಪಕ್ರಮವಾಗಿದ್ದು, ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ಕೌಶಲ್ಯ ಆಧಾರಿತ ತರಬೇತಿ ಕಾರ್ಯಕ್ರಮಗಳನ್ನು ನೀಡಲಾಗುತ್ತಿದೆ. ಇದು ಅವರನ್ನು ಉದ್ಯೋಗಕ್ಕೆ ಅರ್ಹರನ್ನಾಗಿ ಮಾಡುವ ಉದ್ದೇಶ ಹೊಂದಿದೆ. ಈ ಕೌಶಲ್ಯ ಆಧಾರಿತ ತರಬೇತಿ ಕಾರ್ಯಕ್ರಮವು ಯುವನಿಧಿ ಫಲಾನುಭವಿಗಳಿಗೆ ಉದ್ಯಮ–ಸಂಬಂಧಿತ ಕೌಶಲ್ಯಗಳನ್ನು ಒದಗಿಸುವ ಮೂಲಕ ಅವರ ಉದ್ಯೋಗಾವಕಾಶಗಳನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ಈ ಉಪಕ್ರಮವು ಯುವನಿಧಿ ಫಲಾನುಭವಿಗಳಿಗೆ ವಿವಿಧ ಕೌಶಲ್ಯ ಕೋರ್ಸ್‌ಗಳ ಅಡಿಯಲ್ಲಿ ತರಬೇತಿ ನೀಡುವ ಗುರಿಯನ್ನು ಹೊಂದಿದ್ದು, ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳು ಕೌಶಲ್ಯ ಆಧಾರಿತ ತರಬೇತಿ ಕಾರ್ಯಕ್ರಮಕ್ಕೆ ನೋಂದಣಿ ಮಾಡಿಕೊಳ್ಳಬೇಕು. ನೋಂದಣಿ ಮಾಡಿಕೊಳ್ಳುವುದರಿಂದ ಯಾವುದೇ ಯುವನಿಧಿ ಫಲಾನುಭವಿಯು ಯುವನಿಧಿ ಯೋಜನೆಯಿಂದ ದೂರ ಉಳಿಯುವುದಿಲ್ಲ. ಈ ಬಗ್ಗೆ ಅವರಿಗೆ ಸೂಕ್ತ ಮಾಹಿತಿ ನೀಡಬೇಕು ಎಂದರು.

ಜಿಲ್ಲೆಯ ನ್ಯಾಯಬೆಲೆ ಅಂಗಡಿಗಳಲ್ಲಿ ಸುರಕ್ಷತೆ ದೃಷ್ಟಿಯಿಂದ ಸಿಸಿ ಕ್ಯಾಮರಾಗಳ ಅಳವಡಿಕೆ ಮಾಡಲು ಆದಷ್ಟು ಬೇಗ ಕ್ರಮ ಕೈಗೊಳ್ಳಲು ಆಹಾರ ಮತ್ತು



ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು ಹಾಗೂ ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ನಾಮಫಲಕಗಳನ್ನು ಪ್ರದರ್ಶಿಸಬೇಕು. ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಹಾಗೂ ಜಿಲ್ಲೆಯ ಏಳು ತಾಲ್ಲೂಕಿನ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಮಟ್ಟದ ಗ್ಯಾರಂಟಿ ಪ್ರಗತಿ ಪರಿಶೀಲನಾ ಸಭೆಗೆ ಕಡ್ಡಾಯವಾಗಿ ಹಾಜರಾಗಬೇಕು ಎಂದು ಸೂಚಿಸಿದರು.

ಕೊಪ್ಪಳ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ಪಡಿತರ ವಿತರಣಾ ಕೇಂದ್ರಗಳಲ್ಲಿ ಸರಕಾರದ ಅನ್ನಭಾಗ್ಯ ಯೋಜನೆ ಕುರಿತು ಸಿಎಂ, ಡಿಸಿಎಂ ಹಾಗೂ ಸಚಿವರ ಭಾವಚಿತ್ರವಿರುವ ಫಲಕ ಹಾಕಬೇಕು. ಜಿಲ್ಲೆಯ ಎಲ್ಲಾ ಬಸ್ ನಿಲ್ದಾಣಗಳಲ್ಲಿರುವ ಶೌಚಾಲಯ ವ್ಯವಸ್ಥೆ ಸರಿಪಡಿಸಿ ಸ್ವಚ್ಛತೆಯನ್ನು ಕಾಪಾಡಬೇಕು ಹಾಗೂ ಅಗತ್ಯವಿರುವ ಕಡೆಗೆ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಹೆಚ್ಚಿನ ಬಸ್ ವ್ಯವಸ್ಥೆ ಮಾಡಬೇಕೆಂದು ಕ.ಕ.ಸಾ. ನಿಗಮದ ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಐದು ಗ್ಯಾರಂಟಿ ಯೋಜನೆಗಳ ಪ್ರಗತಿ ವರದಿಯ ಕುರಿತು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್. ಬಿ. ಖಾದ್ರಿ, ಅಮರೇಶಪ್ಪ ಗಾಂಜಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಗ್ಯಾರಂಟಿ ಯೋಜನೆಗಳ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ ಸೇರಿದಂತೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು, ಜಿಲ್ಲೆಯ ವಿವಿಧ ತಾಲ್ಲೂಕುಗಳ ಅಧ್ಯಕ್ಷರು ಹಾಗೂ ಗ್ಯಾರಂಟಿ ಯೋಜನೆ ಅನುಷ್ಠಾನ ಇಲಾಖೆಗಳ ಅಧಿಕಾರಿಗಳು, ಇತರರು ಉಪಸ್ಥಿತರಿದ್ದರು.

ಈ ಯೋಜನೆಯಡಿ ಆಯ್ಕೆಯಾದ ಪ್ರತಿ ಫಲಾನುಭವಿಗಳಿಗೆ 5 ವಾರದ 20 ದೇಶಿ ಕೋಳಿ ಮರಿಗಳನ್ನು ಉಚಿತವಾಗಿ ವಿತರಣೆ ಮಾಡಲಾಗುವುದು. ಪ್ರಸ್ತುತ ಸಾಲಿನಲ್ಲಿ ಕರ್ನಾಟಕ ಸಹಕಾರ ಕುಕ್ಕುಟ ಮಹಾಮಂಡಳಿ ನಿಯಮಿತ, ಬೆಂಗಳೂರು ವತಿಯಿಂದ ಯಲಬುರ್ಗಾ ತಾಲ್ಲೂಕನ್ನು ಆಯ್ಕೆ ಮಾಡಲಾಗಿದ್ದು, 99 ಫಲಾನುಭವಿಗಳ ಗುರಿಗಳನ್ನು ನಿಗದಿಪಡಿಸಲಾಗಿರುತ್ತದೆ.

ಅರ್ಜಿ ಸಲ್ಲಿಸಲು ಫಲಾನುಭವಿಯು ಗ್ರಾಮೀಣ ಭಾಗದ ರೈತ ಮಹಿಳೆಯರಾಗಿರಬೇಕು, ಬಡತನ ರೇಖೆಗಿಂತ ಕೆಳಗಿರುವ ಬಗ್ಗೆ ಪ್ರಮಾಣ ಪತ್ರ (ಬಿ.ಪಿ.ಎಲ್. ಕಾರ್ಡ್) ಹೊಂದಿರಬೇಕು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರು, ಹಿಂದುಳಿದ ವರ್ಗದ ಫಲಾನುಭವಿಗಳು ಜಾತಿ ಪ್ರಮಾಣ ಪತ್ರವನ್ನು ಹೊಂದಿರಬೇಕು (ಪ್ರಮಾಣ ಪತ್ರದಲ್ಲಿ ಖಆ ಓಔ. ಇರಬೇಕು). ಅಂಗವಿಕಲರಾಗಿದ್ದಲ್ಲಿ ಪ್ರಮಾಣ ಪತ್ರ ಹೊಂದಿರಬೇಕು. ರೈತ ಮಹಿಳೆಯರು, ಸ್ವ–ಸಹಾಯ ಗುಂಪಿನ ಮಹಿಳಾ ಸದಸ್ಯರಿಗೆ, ಪ್ರಾಥಮಿಕ ಕೋಳಿ ಸಹಕಾರ ಸಂಘಗಳಲ್ಲಿರುವ ಮಹಿಳಾ ಸದಸ್ಯರಿಗೆ, ರೈತ ಉತ್ಪಾದಕ ಸಂಸ್ಥೆಯ ಮಹಿಳಾ ಸದಸ್ಯರಿಗೆ ಆದ್ಯತೆ ನೀಡಲಾಗುವುದು.

ಅರ್ಜಿ ಸಲ್ಲಿಸಲು ನವೆಂಬರ್ 10 ಕೊನೆಯ ದಿನವಾಗಿದೆ. ಅರ್ಜಿಗಳಿಗಾಗಿ ಮತ್ತು ಹೆಚ್ಚಿನ ಮಾಹಿತಿಗಾಗಿ ಮುಖ್ಯ ಪಶುವೈದ್ಯಾಧಿಕಾರಿಗಳು(ಆಡಳಿತ), ಸಹಾಯಕ ನಿರ್ದೇಶಕರು, ಪಶು ಆಸ್ಪತ್ರೆ, ಯಲಬುರ್ಗಾ ಕಛೇರಿಗೆ ಸಂಪರ್ಕಿಸಲು ಮತ್ತು ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ರೈತರಲ್ಲಿ ಇಲಾಖೆಯ ಉಪನಿರ್ದೇಶಕರಾದ ಡಾ.ಪಿ.ಎಂ.ಮಲ್ಲಯ್ಯ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ: ನೋಂದಾಯಿಸಿಕೊಳ್ಳಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.25–ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯನ್ನು ಹೊಸದಾಗಿ ಸಿದ್ಧಪಡಿಸಬೇಕಾಗಿರುವುದರಿಂದ ಅರ್ಹರಿಂದ ನೋಂದಾಯಿಸಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಅವರು ತಿಳಿಸಿದ್ದಾರೆ.

ಅರ್ಹತಾ ದಿನಾಂಕ 01.11.2025 ಕ್ಕೆ ಅನ್ವಯಿಸುವಂತೆ ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯು ನೂತನವಾಗಿ ಸಿದ್ಧಪಡಿಸುವ ಕಾರ್ಯವು ಈಗಾಗಲೇ ಪ್ರಾರಂಭವಾಗಿದೆ. ಈ ಹಿಂದಿನ ಮತದಾರರ ಪಟ್ಟಿಯಲ್ಲಿ ಹೆಸರು ಇರುವ ಮತದಾರರು ಸಹ ನಮೂನೆ 19 ರಲ್ಲಿ ಹೊಸದಾಗಿ ಅರ್ಜಿ ಸಲ್ಲಿಸಬೇಕು ಎಂದು ತಿಳಿಸಿದ್ದಾರೆ. ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಸಿದ್ಧಪಡಿಸುವಿಕೆಗೆ ವೇಳಾಪಟ್ಟಿ:

06.11.2025 (ಗುರುವಾರ) ರಂದು ಅರ್ಜಿ ನಮೂನೆ 19 ರಲ್ಲಿ ಅರ್ಜಿಯನ್ನು ಸ್ವೀಕರಿಸುವ ಕೊನೆಯ ದಿನ.

25.11.2025 (ಮಂಗಳವಾರ) ರಂದು ಕರಡು ಮತದಾರರ ಪಟ್ಟಿ ಪ್ರಕಟಿಸುವ ದಿನ.

25.11.2025 (ಮಂಗಳವಾರ) ರಿಂದ 10.12.2025 (ಬುಧವಾರ) ರ ವರೆಗೆ ಹಕ್ಕು ಮತ್ತು ಆಕ್ಷೇಪಣೆಗಳಿಗಾಗಿ ನಿಗಧಿಪಡಿಸಿದ ಅವಧಿ. 30.12.2025 (ಮಂಗಳವಾರ) ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸುವ ದಿನ.

ಭಾರತ ಚುನಾವಣಾ ಆಯೋಗವು ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರನ್ನು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಾಧಿಕಾರಿಯನ್ನಾಗಿ ನೇಮಿಸಿದೆ. ಈ ಚುನಾವಣಾ ಕ್ಷೇತ್ರ ವ್ಯಾಪ್ತಿಗೊಳಪಡುವ ವಿಭಾಗದ ಎಲ್ಲಾ ಜಿಲ್ಲಾಧಿಕಾರಿಗಳನ್ನು, ಆಯುಕ್ತರು ಮಹಾನಗರ ಪಾಲಿಕೆ ಕಲಬುರಗಿ ಹಾಗೂ ಬಳ್ಳಾರಿ, ಕಲಬುರಗಿ ವಿಭಾಗದ ಆಯಾ ಉಪ ವಿಭಾಗಕ್ಕೆ ಸಂಬಂಧಪಟ್ಟ ಎಲ್ಲಾ ಸಹಾಯಕ ಆಯುಕ್ತರು, ವಿಭಾಗದ ಎಲ್ಲಾ ಸಂಬಂಧಪಟ್ಟ ತಾಲೂಕಿನ ತಹಶೀಲ್ದಾರರನ್ನು ಸಹಾಯಕ ಮತದಾರರ ನೋಂದಣಾಧಿಕಾರಿಯನ್ನಾಗಿ ನೇಮಿಸಿದೆ. ಹೆಸರು ನೋಂದಾಯಿಸಲು ಮಾರ್ಗಸೂಚಿ:

ಭಾರತದ ಪ್ರಜೆಯಾಗಿರುವ, ಆಯಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಮಾನ್ಯ ನಿವಾಸಿಯಾಗಿರುವ ಹಾಗೂ 1ನೇ ನವೆಂಬರ್ 2025 ಕ್ಕೆ ಮೊದಲ 6 ವರ್ಷಗಳ ಅವಧಿಯಲ್ಲಿ ಸೆಕೆಂಡರಿ ದರ್ಜೆಯಲ್ಲಿ ಪ್ರೌಢ ಶಾಲೆಗಿಂತ ಕಡಿಮೆ ಇಲ್ಲದ ನಿರ್ದಿಷ್ಟಪಡಿಸಿದಂತಹ ರಾಜ್ಯದೊಳಗಿನ ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದ ಶೈಕ್ಷಣಿಕ ಸಂಸ್ಥೆಗಳಲ್ಲಿ ಒಟ್ಟು ಕನಿಷ್ಠ 3 ವರ್ಷ ಬೋಧನಾ ವೃತ್ತಿಯಲ್ಲಿ ನಿರತವಾಗಿರುವ ಪ್ರತಿಯೊಬ್ಬ ವ್ಯಕ್ತಿಯು ಮತದಾರರ ಪಟ್ಟಿಯಲ್ಲಿ ತನ್ನ ಹೆಸರನ್ನು ಸೇರಿಸಲು ಅರ್ಹನಾಗಿರುತ್ತಾನೆ. ಖುದ್ದಾಗಿ ಅಥವಾ ಅಂಚೆ ಮುಖಾಂತರ ಒಟ್ಟಾರೆಯಾಗಿ ಸಲ್ಲಿಸಿದ (ಬಲ್ಕ್) ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿಯು ಮತದಾರರ ಪಟ್ಟಿಯಲ್ಲಿ ಸೇರ್ಪಡೆಗಾಗಿ ಪರಿಗಣಿಸತಕ್ಕದ್ದಲ್ಲ. ಆದರೆ ಸಂಸ್ಥೆಯ ಮುಖ್ಯಸ್ಥರು ಅವರ ಸಿಬ್ಬಂದಿಯವರ ಎಲ್ಲಾ ಅರ್ಜಿಗಳನ್ನು ಒಟ್ಟಾಗಿ ಮತದಾರರ ನೋಂದಣಾಧಿಕಾರಿಗಳಿಗೆ ಕಳುಹಿಸಬಹುದು.

ಒಂದೇ ಕುಟಂಬದ ಎಲ್ಲಾ ಸದಸ್ಯರು ನಮೂನೆ 19 ರಲ್ಲಿ ಅರ್ಜಿಗಳನ್ನು ಕುಟುಂಬ ಯಾವುದಾದರೂ ಒಬ್ಬ ಸದಸ್ಯರು ಸಲ್ಲಿಸಬಹುದು ಹಾಗೂ ಪ್ರತಿ ಸದಸ್ಯನಿಗೆ ಸಂಬಂಧಿಸಿದಂತೆ ಮೂಲ ಪ್ರಮಾಣ ಪತ್ರಗಳನ್ನು ಒದಗಿಸಿ, ಪ್ರಮಾಣ ಪತ್ರವನ್ನು ಪರಿಶೀಲಿಸಿಕೊಳ್ಳತಕ್ಕದ್ದು.

ಅರ್ಜಿದಾರರು ನಮೂನೆ–19 ರ ಅರ್ಜಿಯೊಂದಿಗೆ ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ ಹಾಗೂ ಬಿಳಿ ಬಣ್ಣದ ಹಿನ್ನೆಲೆ ಹೊಂದಿದ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳನ್ನು ಸಲ್ಲಿಸತಕ್ಕದ್ದು. ಅರ್ಜಿದಾರರು ನಮೂನೆ–19 ರೊಂದಿಗೆ ಲಗತ್ತಿಸಿದ ಆಧಾರ್ ಕಾರ್ಡ್‌ನ ಗೌಪ್ಯತೆಯನ್ನು ಕಾಪಾಡುವ ದೃಷ್ಟಿಕೋನದಿಂದ ಆಧಾರ್ ಸಂಖ್ಯೆಯ ಪ್ರಥಮ 8 ಸಂಖ್ಯೆಗಳನ್ನು ಮಾಸ್ಕ್ ಮಾಡಲು ಹಾಗೂ ಅರ್ಜಿದಾರರ ಖಾಸಗಿತ್ವದ ದಾಖಲೆ ಹಾಗೂ ಮೊಬೈಲ್ ಸಂಖ್ಯೆಯನ್ನು ಯಾರಿಗೂ ನೀಡಬಾರದೆಂದು ಕಡ್ಡಾಯವಾಗಿ ಸೂಚಿಸಲಾಗಿದೆ. ಅರ್ಜಿಯಲ್ಲಿನ ತಪ್ಪು ಅಥವಾ ತಪ್ಪೆಂದು ಅವನು ತಿಳಿದಿರುವ ಅಥವಾ ನಂಬುವಂತಹ ಅಥವಾ ಸತ್ಯವೆಂದು ನಂಬಲಾಗದಿರುವಂತಹ ಹೇಳಿಕೆಗಳನ್ನು ಅಥವಾ ಘೋಷಣೆಗಳನ್ನು ಮಾಡುವ ಯಾವುದೇ ವ್ಯಕ್ತಿಯನ್ನು ಪ್ರಜಾಪ್ರಾತಿನಿಧ್ಯ ಅಧಿನಿಯಮ 1950 ರ 31 ನೇ ಪ್ರಕರಣದ ಮೇರೆಗೆ ಶಿಕ್ಷೆಗೆ ಗುರಿಪಡಿಸಲಾಗುವುದು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿಮಾಡಿ ಅದರೊಂದಿಗೆ ಶೈಕ್ಷಣಿಕ ಸಂಸ್ಥೆಗಳಲ್ಲಿ 1 ನೇ ನವೆಂಬರ್ 2025 ಕ್ಕೆ ಮೊದಲು 6 ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಠ 3 ವರ್ಷ ಭೋದನಾ ವೃತಿಯಲ್ಲಿ ನಿರತವಾಗಿರುವ ಬಗ್ಗೆ ಶೈಕ್ಷಣಿಕ ಸಂಸ್ಥೆಗಳಿಂದ ಅನುಬಂಧ 2 ರಲ್ಲಿ ಸಂಬಳ ಬಟವಾಡೆ ಅಧಿಕಾರಿಯಿಂದ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

ಅರ್ಹ ಮತದಾರರು ಅವರು ಕಾರ್ಯನಿರ್ವಹಿಸುತ್ತಿರುವ ಸ್ಥಳದಲ್ಲಿ ನೋಂದಾಯಿಸಕೂಡಬಾರದು. ಅವರು ಸಾಮಾನ್ಯ ನಿವಾಸಿಯಾಗಿ ವಾಸಿಸುತ್ತಿರುವ ಸ್ಥಳೀಯ ಕ್ಷೇತ್ರದಲ್ಲಿ ಅವರ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಬೇಕು.

ಈ ಕ್ಷೇತ್ರ ವ್ಯಾಪ್ತಿಯ ಹೊರಗಡೆ ಸೆಕೆಂಡರಿ ಶಿಕ್ಷಣ ಸಂಸ್ಥೆಗಳಿಗಿಂತಲೂ ಕಡಿಮೆ ಇಲ್ಲದ ಶಿಕ್ಷಣ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿ ಮತದಾರರನಾಗಲು ಆಯೋಗದ ಮಾರ್ಗಸೂಚಿಗಳನ್ನು ಪೂರೈಸಿ ಅವರು ಈ ಚುನಾವಣಾ ಕ್ಷೇತ್ರ ವ್ಯಾಪ್ತಿಯ ಸಾಮಾನ್ಯ ನಿವಾಸಿಯಾಗಿ ಇದಕ್ಕೆ ಪೂರಕವಾಗಿರುವಂತಹ ದಾಖಲೆಗಳನ್ನು ಅರ್ಜಿಯೊಂದಿಗೆ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿದಾರರು ಮತದಾರರ ಪಟ್ಟಿಯಲ್ಲಿ ನೋಂದಣಿಗಾಗಿ ಅರ್ಹರಿರುತ್ತಾರೆ. ಆಯೋಗವು ಮುಂಬರುವ ದಿನಗಳಲ್ಲಿ ಸದರಿ ನಮೂನೆ 19 ರ ಅರ್ಜಿಗಳನ್ನು ಇಖಓಖ ನಲ್ಲಿ ಅಳವಡಿಸಲು ಉದ್ದೇಶಿಸಿದೆ. ಕರ್ನಾಟಕ ಈಶಾನ್ಯ ಶಿಕ್ಷಕರ ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳು ಇದ್ದಲ್ಲಿ ಮತದಾರರ ನೋಂದಣಾಧಿಕಾರಿಗಳು ಹಾಗೂ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಚೇರಿಯಲ್ಲಿ ಮತ್ತು ಸಂಬಂಧಪಟ್ಟ ವಿಧಾನಸಭಾ ಮತಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಗಳ ಕಾರ್ಯಾಲಯದಲ್ಲಿ (ಮಹಾನಗರ ಪಾಲಿಕೆ ಹಾಗೂ ತಹಶೀಲ್ದಾರ್ ಕಾರ್ಯಾಲಯದಲ್ಲಿ) ನಿಗದಿಪಡಿಸಿದ ಕಾಲಮಿತಿಯೊಳಗೆ ಸಲ್ಲಿಸಬಹುದು.

ಅರ್ಹ ಶಿಕ್ಷಕರು ಹೆಚ್ಚಿನ ಆಸಕ್ತಿ ವಹಿಸಿ ಈ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಂಡು, ಸುಭದ್ರ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸುವಲ್ಲಿ ಸಕ್ರೀಯವಾಗಿ ಪಾಲ್ಗೊಳ್ಳಬೇಕು ಎಂದು ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ: ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.25–ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ–2026 ರ ಮತದಾರರ ಪಟ್ಟಿ ಸಿದ್ಧಪಡಿಸುವ ಹಿನ್ನೆಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಅರ್ಹ ಶಿಕ್ಷಕರ ಮತದಾರರನ್ನು ನೋಂದಾಯಿಸಲು ಜಿಲ್ಲೆಯಲ್ಲಿ 'ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ' ಹಮ್ಮಿಕೊಳ್ಳಲಾಗಿದೆ.

ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನವು ಅಕ್ಟೋಬರ್ 27, 30 ಹಾಗೂ ನವೆಂಬರ್ 03 ರಂದು ಜಿಲ್ಲೆಯ ಶಿಕ್ಷಣ ಸಂಸ್ಥೆಗಳಲ್ಲಿ ನೋಂದಣಿ ಪ್ರಕ್ರಿಯೆ ನಡೆಯಲಿದೆ.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಈಶಾನ್ಯ ಶಿಕ್ಷಕರ ಕೇತ್ರದ ವ್ಯಾಪ್ತಿಗೊಳಪಡುವ ವಿಭಾಗದ ಎಲ್ಲಾ ಅರ್ಹ ಮತದಾರರ ಪಟ್ಟಿ ಸಿದ್ಧಪಡಿಸುವ ವೇಳಾ ಪಟ್ಟಿಯನ್ವಯ ದಿನಾಂಕ: 01.10.2025 ರಿಂದ 06.11.2025 ರವರೆಗೆ ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಅರ್ಹ ಮತದಾರರ ನೋಂದಣಿಗಾಗಿ ಅವಕಾಶ ಕಲ್ಪಿಸಲಾಗಿದೆ.

ಮತದಾರರ ಪಟ್ಟಿಯ ನೋಂದಣಿ ಪ್ರಕ್ರಿಯೆ ತೀವ್ರಗತಿಯಲ್ಲಿ ಚುರುಕುಗೊಳಿಸುವುದು ಅತ್ಯವಶ್ಯಕವಾಗಿದ್ದು, ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಮತದಾರರನ್ನು ಗುರುತಿಸಿ ಅವರ ಹೆಸರುಗಳನ್ನು ನೋಂದಾಯಿಸಿ ಯಾವೊಬ್ಬ ಅರ್ಹ ಮತದಾರರು ನೋಂದಣಿ ಪ್ರಕ್ರಿಯೆಯಿಂದ ಹೊರಗುಳಿಯದೆ ನೋಂದಾಯಿಸಬೇಕಾಗಿರುವುದರಿಂದಾಗಿ ಸಂಬಂಧಿಸಿದ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ದಿನಾಂಕ: 27.10.2025, 30.10.2025 ಹಾಗೂ 03.11.2025 ರಂದು ಅರ್ಹ ಮತದಾರರನ್ನು ಮತಪಟ್ಟಿಗೆ ಸೇರ್ಪಡೆಗೊಳಿಸಲು 'ಮತದಾರರ ವಿಶೇಷ ಮಿಂಚಿನ ನೋಂದಣಿ ಅಭಿಯಾನ'ವನ್ನು ಆಯೋಜಿಸಲಿದ್ದಾರೆ.

ಈ ವಿಶೇಷ ಮಿಂಚಿನ ನೋಂದಣಿ ಅಭಿಯಾನ ಕಾರ್ಯಕ್ರಮಕ್ಕೆ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮೀಣ ಮಹಿಳೆಯರಿಗೆ ದೇಶಿ ಕೋಳಿಮರಿ ವಿತರಣೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ 2025–26 ನೇ ಸಾಲಿನಲ್ಲಿ ದೇಶಿ ಕೋಳಿಮರಿಗಳನ್ನು ಗ್ರಾಮೀಣ ರೈತ ಮಹಿಳೆಯರಿಗೆ ವಿತರಿಸಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.




ಈ ಯೋಜನೆಯಡಿ ಆಯ್ಕೆಯಾದ ಪ್ರತಿ ಫಲಾನುಭವಿಗಳಿಗೆ 5 ವಾರದ 20 ದೇಶಿ ಕೋಳಿ ಮರಿಗಳನ್ನು ಉಚಿತವಾಗಿ ವಿತರಣೆ ಮಾಡಲಾಗುವುದು. ಪ್ರಸ್ತುತ ಸಾಲಿನಲ್ಲಿ ಕರ್ನಾಟಕ ಸಹಕಾರ ಕುಕ್ಕುಟ ಮಹಾಮಂಡಳಿ ನಿಯಮಿತ, ಬೆಂಗಳೂರು ವತಿಯಿಂದ ಯಲಬುರ್ಗಾ ತಾಲ್ಲೂಕನ್ನು ಆಯ್ಕೆ ಮಾಡಲಾಗಿದ್ದು, 99 ಫಲಾನುಭವಿಗಳ ಗುರಿಗಳನ್ನು ನಿಗದಿಪಡಿಸಲಾಗಿರುತ್ತದೆ.

ಅರ್ಜಿ ಸಲ್ಲಿಸಲು ಫಲಾನುಭವಿಯು ಗ್ರಾಮೀಣ ಭಾಗದ ರೈತ ಮಹಿಳೆಯರಾಗಿರಬೇಕು, ಬಡತನ ರೇಖೆಗಿಂತ ಕೆಳಗಿರುವ ಬಗ್ಗೆ ಪ್ರಮಾಣ ಪತ್ರ (ಬಿ.ಪಿ.ಎಲ್. ಕಾರ್ಡ್) ಹೊಂದಿರಬೇಕು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರು, ಹಿಂದುಳಿದ ವರ್ಗದ ಫಲಾನುಭವಿಗಳು ಜಾತಿ ಪ್ರಮಾಣ ಪತ್ರವನ್ನು ಹೊಂದಿರಬೇಕು (ಪ್ರಮಾಣ ಪತ್ರದಲ್ಲಿ RD NO. ಇರಬೇಕು). ಅಂಗವಿಕಲರಾಗಿದ್ದಲ್ಲಿ ಪ್ರಮಾಣ ಪತ್ರ ಹೊಂದಿರಬೇಕು. ರೈತ ಮಹಿಳೆಯರು, ಸ್ವ–ಸಹಾಯ ಗುಂಪಿನ ಮಹಿಳಾ ಸದಸ್ಯರಿಗೆ, ಪ್ರಾಥಮಿಕ ಕೋಳಿ ಸಹಕಾರ ಸಂಘಗಳಲ್ಲಿರುವ ಮಹಿಳಾ ಸದಸ್ಯರಿಗೆ, ರೈತ ಉತ್ಪಾದಕ ಸಂಸ್ಥೆಯ ಮಹಿಳಾ ಸದಸ್ಯರಿಗೆ ಆದ್ಯತೆ ನೀಡಲಾಗುವುದು.

ಅರ್ಜಿ ಸಲ್ಲಿಸಲು ನವೆಂಬರ್ 10 ಕೊನೆಯ ದಿನವಾಗಿದೆ. ಅರ್ಜಿಗಳಿಗಾಗಿ ಮತ್ತು ಹೆಚ್ಚಿನ ಮಾಹಿತಿಗಾಗಿ ಮುಖ್ಯ ಪಶುವೈದ್ಯಾಧಿಕಾರಿಗಳು(ಆಡಳಿತ), ಸಹಾಯಕ ನಿರ್ದೇಶಕರು, ಪಶು ಆಸ್ಪತ್ರೆ, ಯಲಬುರ್ಗಾ ಕಛೇರಿಗೆ ಸಂಪರ್ಕಿಸಲು ಮತ್ತು ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ರೈತರಲ್ಲಿ ಇಲಾಖೆಯ ಉಪನಿರ್ದೇಶಕರಾದ ಡಾ.ಪಿ.ಎಂ.ಮಲ್ಲಯ್ಯ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಳೆ:ತುಂಬಿ ಹರಿದ ಹಳ್ಳ ಕೊಳ್ಳಗಳು



ಮಲ್ಲಮ್ಮ ನುಡಿ ವಾರ್ತೆ

ಸಿರುಗುಪ್ಪ, ಅ.25: ತಾಲೂಕಿನ ಎಚ್ ಹೊಸಳ್ಳಿ ಹತ್ತಿರ ಹರಿಯುತ್ತಿರುವ ಹಿರೇಹಳ್ಳದ ಸೇತುವೆ ಮೇಲೆ ಮಳೆ ನೀರು ಹರಿಯುತ್ತಿದ್ದು, ಬಸ್ ಮತ್ತು ಲಾರಿಗಳ ಓಡಾಟಕ್ಕೆ ಅನಾನುಕೂಲವಾಗಿದೆ. ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡಿದೆ. ತಾಲೂಕಿನ ಮೇಲ್ಬಾಗದಲ್ಲಿ ಉತ್ತಮ ಮಳೆ ಸುರಿದಿದ್ದರಿಂದ ಹಳ್ಳದಲ್ಲಿ ನೀರು ಹೆಚ್ಚಾಗಿ ಸೇತುವೆ ಮೇಲೆ ಹರಿಯುತ್ತಿದೆ.

ಸೇತುವೆ ಮೇಲೆ ನೀರು ಹರಿದು ಬರುತ್ತಿದ್ದು, ಕಾರ್ಮಿಕರು ಮತ್ತು ರೈತರು ತಮ್ಮ ಕೆಲಸ ಕಾರ್ಯಗಳಿಗೆ ತೆರಳಲು ಅಡಚಣೆ ಉಂಟಾಯಿತು.

ಇದೇ ಸೇತುವೆಯ ಮೇಲೆ ವಿವಿಧ ಗ್ರಾಮಗಳಿಗೆ ಸಂಚರಿಸುತ್ತಿದ್ದ ವಾಹನಗಳು ಪರ್ಯಾಯ ಮಾರ್ಗದಲ್ಲಿ ಸಂಚರಿಸಿದವು.

ಸೇತುವೆ ಮೇಲೆ ಸಂಚಾರ ನಿರ್ಬಂಧಿಸಿ ತಾಲೂಕು ಆಡಳಿತ ಸೂಕ್ತ ಬಂದೋಬಸ್ತ್ ಒದಗಿಸಿತ್ತು.

# ವಿಜಯನಗರದಲ್ಲಿ ಸಕ್ಕರೆ ಕಾರ್ಖಾನೆ ಸ್ಥಾಪನೆಗೆ ರೈತರ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಹೊಸಪೇಟೆ, ಅ.25: ಜಿಲ್ಲೆಯಲ್ಲಿ ಕೂಡಲೇ ಸಕ್ಕರೆ ಕಾರ್ಖಾನೆ ಸ್ಥಾಪಿಸುವುದು ಸೇರಿದಂತೆ ಇನ್ನಿತರೆ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ರಾಜ್ಯ ರೈತ ಸಂಘ ಒತ್ತಾಯಿಸಿದೆ.

ಸಂಘದ ಪದಾಧಿಕಾರಿಗಳು ಈ ಕುರಿತು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿ, ಜಿಲ್ಲೆಯಲ್ಲಿ ಸಕ್ಕರೆ ಕಾರ್ಖಾನೆ ಸ್ಥಾಪನೆಗೆ ರಾಜಕಾರಣಿಗಳಿಂದಲೇ ತೊಂದರೆ ಆಗುತ್ತಿದೆ. ಈ ಹಿನ್ನೆಲೆಯಲ್ಲಿ ಸರ್ಕಾರ ಮಧ್ಯಪ್ರವೇಶಿಸಿ, ಜಿಲ್ಲೆಯಲ್ಲಿ ಸಕ್ಕರೆ ಕಾರ್ಖಾನೆ ಸ್ಥಾಪಿಸಬೇಕು. ಜಿಲ್ಲಾಡಳಿತವೇ ಮಧ್ಯಸ್ಥಿಕೆ ವಹಿಸಿ, ರೈತರ ಅನುಕೂಲಕ್ಕಾಗಿ ಸೂಕ್ತ ಬೆಲೆ ನಿಗದಿಗೊಳಿಸಬೇಕು.

ಜಿಲ್ಲೆಯಲ್ಲಿ ಮುಂಗಾರು ಮಳೆಗೆ ಮೆಕ್ಕೆಜೋಳದ ಹೆಚ್ಚಿನ ಬೆಳೆ ಬಂದಿದ್ದು, ಪ್ರತಿ ಕ್ವಿಂಟಾಲ್ 1700 ದಿಂದ 1900 ರೂ. ದರದಲ್ಲಿ ಮಾರಾಟವಾಗುತ್ತಿದ್ದು, ರೈತರಿಗೆ ನಷ್ಟವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ನಿಗದಿಪಡಿಸಿರುವಂತೆ ಪ್ರತಿ ಕ್ವಿಂಟಾಲ್‌ಗೆ 2400 ರೂ. ಗಳಂತೆ ಖರೀದಿ ಕೇಂದ್ರ ತೆರೆಯಬೇಕು. ಸರ್ಕಾರಿ ಹಾಗೂ ಅರಣ್ಯ ಭೂಮಿಯಲ್ಲಿ ಕೃಷಿ ಮಾಡುತ್ತಿರುವ ರೈತರಿಗೆ ಹಕ್ಕು ಪತ್ರ ವಿತರಿಸಬೇಕು. ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಗಳನ್ನು ದುರಸ್ತಿಗೊಳಿಸಬೇಕು ಎಂದು ಆಗ್ರಹಿಸಿದರು.

ಸರ್ಕಾರದ ಆದೇಶದಂತೆ ತೋಟದ ಮನೆಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಬೇಕು. ಜಿಲ್ಲೆಯ ಎಲ್ಲಾ ತಾಲೂಕಿನಲ್ಲಿ ರೈತರ ಪಂಪ್ ಸೆಟ್ಟುಗಳಿಗೆ ಸಮರ್ಪಕ ವಿದ್ಯುತ್ ಕಲ್ಪಿಸಬೇಕು. ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಎ.ಪಿ.ಎಂ.ಸಿ.ಯಲ್ಲಿ 1 ಚೀಲಕ್ಕೆ 5 ಕೆ.ಜಿ. ಬಾದ್(ಹಾನಿ) ಎಂದು ತೆಗೆಯುವ ಅವೈಜ್ಞಾನಿಕ ಕ್ರಮಕ್ಕೆ ಕಡಿವಾಣ ಹಾಕಬೇಕು ಮನವಿ ಮಾಡಿದರು. ಈ ಸಂದರ್ಭದಲ್ಲಿ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಬಿ.ಗೋಣಿಬಸಪ್ಪ, ತಾಲೂಕು ಅಧ್ಯಕ್ಷ ಗಂಟೆ ಸೋಮಶೇಖರ್, ಹಗರಿಬೊಮ್ಮನಹಳ್ಳಿ ಗೌರವಾಧ್ಯಕ್ಷ ಮಹೇಶ್, ಪ್ರಮುಖರಾದ ಯು.ನಾಗೇಂದ್ರಪ್ಪ, ಗುಂಡ ಬಣಕಾರ್ ಈ ಸಂದರ್ಭದಲ್ಲಿ ಹಾಜರಿದ್ದರು.

# ಯುವ ಸಮೂಹ ದುಶ್ಚಟಗಳಿಂದ ದೂರವಿರಲಿ-ನಾಗರಾಳೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.25–ಆರೋಗ್ಯಪೂರ್ಣ ಹಾಗೂ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಯುವ ಜನಾಂಗ ದುಶ್ಚಟಗಳಿಂದ ದೂರವಿರಬೇಕು ಎಂದು ಸ್ಥಳೀಯ ಸರ್ಕಾರಿ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಅಜೀತ ನಾಗರಾಳೆ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಗ್ರಾಮ ಪಂಚಾಯತಿ ಸಹಯೋಗದಲ್ಲಿ ರಾಂಪುರದ ಸರ್ಕಾರಿ ಪದವಿ ಮಹಾವಿದ್ಯಾಲಯದಲ್ಲಿ ಶನಿವಾರ ನಡೆದ ನಶಾ ಮುಕ್ತ ಭಾರತ ಅಭಿಯಾನ ಜಾಗೃತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಾದಕ ವಸ್ತುಗಳ ಸೇವನೆ ಬದು–ಕಿಗೆ ಮಾರಕವಾಗುತ್ತದೆ ಎಂಬುದರ ತಿಳುವಳಿಕೆ ಪ್ರತಿಯೊಬ್ಬ ಯುವಕರಲ್ಲಿ ಬರಬೇಕಿದೆ ಎಂದರು.

ದುಶ್ಚಟಗಳು ನಮ್ಮ ದೇಹ ಮತ್ತು ಮನಸ್ಸನ್ನು ವಿನಾಶದತ್ತ ಕೊಂಡೊಯ್ಯುತ್ತವೆ. ಈ ನಿಟ್ಟಿನಲ್ಲಿ ಯುವ ಸಮೂಹ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಂಡು ಆರೋಗ್ಯಪೂರ್ಣ ಜೀವನ ಸಾಗಿಸಬೇಕು. ಇದರಿಂದ ಆರೋಗ್ಯವಂತ ಸಮಾಜವೂ ನಿರ್ಮಾಣವಾಗುತ್ತದೆ ಎಂದು ನಾಗರಾಳೆ ಹೇಳಿದರು.

ಅತಿಥಿಗಳಾಗಿದ್ದ ರಾಂಪುರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಎಸ್.ಎಸ್.ಮೇಟಿ ಮಾತನಾಡಿ, ಮಾದಕ ವಸ್ತುಗಳ ಬಳಕೆಯಿಂದ ವ್ಯಕ್ತಿಯ ಬದುಕಿನ ಮೇಲೆ ದುಷ್ಪರಿಣಾಮವುಂಟಾಗುತ್ತದೆ. ಇದರ ಅರಿವು ಪ್ರತಿ ಯುವಕರಿಗೆ ಆಗಬೇಕಿದೆ ಎಂದರು.

ಗ್ರಾಮ ಪಂಚಾಯತಿ ವತಿಯಿಂದ ವ್ಯಸನಮುಕ್ತ ಸಮಾಜದ ತಿಳುವಳಿಕೆ ಕುರಿತು ಮಾಹಿತಿ ನೀಡಲಾಯಿತಲ್ಲದೇ, ಕಾಲೇಜಿನ ಎನ್.ಎಸ್.ಎಸ್ ಘಟಕದ ಸಂಚಾಲಕ ಚನ್ನಮಲ್ಲಯ್ಯ ಹಿರೇಮಠ ವಿದ್ಯಾರ್ಥಿಗಳಿಗೆ ನಶಾ ಮುಕ್ತ ಸಮಾಜ ನಿರ್ಮಾಣ ಸಂಕಲ್ಪದ ಪ್ರತಿಜ್ಞಾವಿಧಿ ಬೋಧಿಸಿದರು. ಡಾ.ಶಾರದಾ ನಿಂಬರಗಿ, ಕರಡಿ, ಅಕ್ಷತಾ ಚಿಮ್ಮಲಗಿ, ಲಕ್ಷ್ಮೀ ರಾಠೋಡ, ಡಾ. ಆನಂದಕುಮಾರ, ಆರ್.ಆರ್. ದೊರೆಗೋಳ, ಎಂ.ಎಸ್.ಕೊಪ್ಪದ, ರೂಪಾ ಘೋರತ್, ಕವಿತಾ ಮಠದ, ಡಾ.ಗೀತಾ ನಾಯ್ಕ ಗುರುದೇವರ ಮಠದ ಸಾವಿತ್ರಮ್ಮ, ರಿಯಾಜ್ ದಣ್ಣೂರ, ಚಂದ್ರಶೇಖರ ಹಂಗರಗಿ, ರಾಘವೇಂದ್ರ ಜುಂಜಾ, ಮಹೇಶ ಗಬ್ಬೂರ, ಸಿದ್ದು ಕುಂಬಾರ, ಭೀಮಣ್ಣ ಡೋಣಿ ಇದ್ದರು.

# ಶಿರೂರಿನಲ್ಲಿ ಉಚಿತ ಸಾಮೂಹಿಕ ವಿವಾಹ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.25–ಶಿರೂರ ಪಟ್ಟಣದಲ್ಲಿ ಡಿಸೆಂಬರ ತಿಂಗಳಲ್ಲಿ ಜರುಗುವ ಸಿದ್ದೇಶ್ವರ ಜಾತ್ರೆಯ ಅಂಗವಾಗಿ 25 ಜೋಡಿ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸ್ಥಳೀಯ ಸ್ನೇಹ ಸಿಂಚನ ಗೆಳೆಯರ ಬಳಗದವರು ಡಿಸೆಂಬರ್ 5 ರಂದು ಈ ವಿವಾಹ ಕಾರ್ಯಕ್ರಮ ಏರ್ಪಡಿಸಿದ್ದು, ಮದುವೆಯಾಗುವ ವಧು–ವರರು ಸೂಕ್ತ ದಾಖಲೆಗಳೊಂದಿಗೆ ಹೆಸರು ನೊಂದಣಿ ಮಾಡಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗೆ 9980104522, 9901296006 ಹಾಗೂ 8722997002 ಗಳಿಗೆ ಸಂಪರ್ಕಿಸುವಂತೆ ಸ್ನೇಹ ಸಿಂಚನ ಗೆಳೆಯರ ಬಳಗ ಪ್ರಕಟಣೆ ತಿಳಿಸಿದೆ.

# ಶಿರೂರಿನಲ್ಲಿ ಇಂದು ಪಥಸಂಚಲನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.25–ತಾಲೂಕಿನ ಶಿರೂರ ಪಟ್ಟಣದಲ್ಲಿ ಭಾನುವಾರ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಗಣವೇಷಧಾರಿ ಸ್ವಯಂ ಸೇವಕರ ಪಥಸಂಚಲನ ಜರುಗಲಿದೆ.


ಮಧ್ಯಾಹ್ನ 4–10 ಗಂಟೆಗೆ ಸ್ಥಳೀಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಿಂದ ಆರಂಭಗೊಳ್ಳಲಿರುವ ಪಥಸಂಚಲನ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಹಾಯ್ದು ಸಿದ್ದೇಶ್ವರ ಪ್ರೌಢಶಾಲಾ ಮೈದಾನಕ್ಕೆ ಆಗಮಿಸಿ ಮುಕ್ತಾಯಗೊಳ್ಳಲಿದೆ.

ಶಿರೂರ, ರಾಂಪುರ, ನಾಯನೇಗಲಿ ಹೋಬಳಿಯ ಸಂಘದ ಸ್ವಯಂ ಸೇವಕರು ಪಥಸಂಚಲನದಲ್ಲಿ ಪಾಲ್ಗೊಳ್ಳಲಿದ್ದಾರೆ. ನಂತರ 5–30 ಗಂಟೆಗೆ ಸಾರ್ವಜನಿಕ ಸಭೆ ನಡೆಯಲಿದೆ ಎಂದು ಸಂಘದ ಪ್ರಕಟಣೆ ತಿಳಿಸಿದೆ.



ಬಸವಕಲ್ಯಾಣ :– ತಾಲೂಕಿನ ಮೈಸಲಗಾ ತಾಂಡಾದಲ್ಲಿ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರ ಪಾವನ ಸಾನಿಧ್ಯದಲ್ಲಿ ಶ್ರೀ ಭಾಗ್ಯವಂತಿ ದೇವಿ 21ನೇ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ಜರುಗಿತು. ಜಾತ್ರಾ ಮಹೋತ್ಸವ ನಿಮಿತ್ಯ ಜರುಗಿದ ಧರ್ಮ ಸಭೆಯನ್ನು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ದೀಪ ಬೆಳಗಿಸಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಪೂಜ್ಯ ಶಂಕರ ಆಯಿ, ಶ್ರೀ ಅನಿಲ ಮಹಾರಾಜ, ಶಾಂತಕುಮಾರ ರಾಠೋಡ, ಗುಂಡಪ್ಪ ಮಲ್ಕಾಜಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ಛತ್ತೀಸ್‌ಗಢ: ಬಿಜಾಪುರದಲ್ಲಿ ನಕ್ಸಲರಿಂದ ಇಬ್ಬರು ಗ್ರಾಮಸ್ಥರ ಹತ್ಯೆ



ಮಲ್ಲಮ್ಮ ನುಡಿ ವಾರ್ತೆ

ಛತ್ತೀಸ್‌ಗಢ: ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯ ಹಳ್ಳಿಯೊಂದರಲ್ಲಿ ನಕ್ಸಲರು, ಇಬ್ಬರು ವ್ಯಕ್ತಿಗಳ ಮೇಲೆ ದಾಳಿ ಮಾಡಿ ಕೊಂದಿದ್ದಾರೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ.

ಉಸುರ್ ಪೊಲೀಸ್ ಠಾಣಾ ವ್ಯಾಪ್ತಿಯ ನೆಲಕಂಕೇರ್ ಗ್ರಾಮದಲ್ಲಿ ಶುಕ್ರವಾರ ರಾತ್ರಿ ಈ ಘಟನೆ ನಡೆದಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ನಕ್ಸಲರ ಗುಂಪೊಂದು ರವಿ ಕಟ್ಟಮ್(25) ಮತ್ತು ತಿರುಪತಿ ಸೋಧಿ(38) ಅವರನ್ನು ಅವರ ಮನೆಗಳಿಂದ ಹೊರಗೆಳೆದು ಹರಿತವಾದ ಆಯುಧಗಳಿಂದ ಹಲ್ಲೆ ನಡೆಸಿ ಸ್ಥಳದಲ್ಲೇ ಹತ್ಯೆ ಮಾಡಿದ್ದಾರೆ ಎಂದು ಅವರು ಹೇಳಿದ್ದಾರೆ.

ದಾಳಿಯ ನಂತರ ನಕ್ಸಲರು ಸ್ಥಳದಿಂದ ಓಡಿಹೋದ ಬಳಿಕ ಪೊಲೀಸರಿಗೆ ಮಾಹಿತಿ ನೀಡಲಾಗಿದೆ ಎಂದು ಅಧಿಕಾರಿ ಹೇಳಿದ್ದಾರೆ.

ಬಿಜಾಪುರ ಸೇರಿದಂತೆ ಏಳು ಜಿಲ್ಲೆಗಳನ್ನು ಒಳಗೊಂಡಿರುವ ಬಸ್ತಾರ್ ವಿಭಾಗದಲ್ಲಿ ನಕ್ಸಲರು ಗ್ರಾಮಸ್ಥರನ್ನು ಗುರಿಯಾಗಿಸಿಕೊಂಡಿದ್ದಾರೆ. ಅಕ್ಟೋಬರ್ 14 ರಂದು, ನಕ್ಸಲರು ಬಿಜೆಪಿ ಕಾರ್ಯಕರ್ತನ ಕತ್ತು ಹಿಸುಕಿ ಕೊಂದಿದ್ದರು.

# RJD ಬಿಹಾರವನ್ನು ಅಪಹರಣ, ಸುಲಿಗೆಯ ಕೇಂದ್ರವನ್ನಾಗಿ ಮಾಡಿದೆ: ಅಮಿತ್ ಶಾ



ಮಲ್ಲಮ್ಮ ನುಡಿ ವಾರ್ತೆ

ಪಾಟ್ನಾ: ಲಾಲು ಪ್ರಸಾದ್ ನೇತೃತ್ವದ ರಾಷ್ಟ್ರೀಯ ಜನತಾ ದಳ(ಆರ್‌ಜೆಡಿ) ವಿರುದ್ಧದ ತಮ್ಮ ದಾಳಿಯನ್ನು ತೀಕ್ಷ್ಣಗೊಳಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಆರ್‌ಜೆಡಿ ಆಳ್ವಿಕೆಯಲ್ಲಿ ಬಿಹಾರದಲ್ಲಿ ಕೇವಲ ಒಂದು "ಉದ್ಯಮ" ಮಾತ್ರ ಪ್ರವರ್ಧಮಾನಕ್ಕೆ ಬಂದಿತು – ಅದು "ಅಪಹರಣ, ಸುಲಿಗೆ, ಸುಪಾರಿ ಹತ್ಯೆಗಳು ಮತ್ತು ಡಕಾಯಿತಿ" ಎಂದು ಆರೋಪಿಸಿದರು.

"ಆರ್‌ಜೆಡಿ ಆಳ್ವಿಕೆಯಲ್ಲಿ ರಾಜ್ಯದಲ್ಲಿ ಎಲ್ಲಾ ಕೈಗಾರಿಕಾ ಘಟಕಗಳು ಮುಚ್ಚಲ್ಪಟ್ಟವು" ಎಂದು ಕೇಂದ್ರ ಗೃಹ ಸಚಿವರು ದೂರಿದರು.

ಬಿಜೆಪಿ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಮೈತ್ರಿಕೂಟ(ಎನ್‌ಡಿಎ) ಅಧಿಕಾರಕ್ಕೆ ಮರಳಿದರೆ ಮುಂದೆ ಬಿಹಾರದಲ್ಲಿ ಒಂದೇ ಹಂತದಲ್ಲಿ ಚುನಾವಣೆ ನಡೆಸಬಹುದು ಎಂದು ಶಾ ಹೇಳಿದರು. ಅಮಿತ್ ಶಾ

ಬಿಹಾರ ಚುನಾವಣೆ: ಪ್ರಮುಖ ಯಾದವ್ ನಾಯಕರಿಗೆ ಟಿಕೆಟ್ ನಿರಾಕರಣೆ; ಓಆಂಗೆ ಹಿನ್ನಡೆ

ನಳಂದ ಜಿಲ್ಲೆಯ ಬಿಹಾರ್‌ಶರೀಫ್‌ನಲ್ಲಿ ನಡೆದ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಅಮಿತ್ ಶಾ, ಎನ್‌ಡಿಎನ ಉತ್ತಮ ಆಡಳಿತದ ದಾಖಲೆಯು ಬಿಹಾರದಲ್ಲಿ ಮತದಾನದ ಹಂತಗಳನ್ನು ಈಗಾಗಲೇ ಕಡಿಮೆ ಮಾಡಿದೆ ಎಂದು ತಿಳಿಸಿದರು.

"ಮುಂದಿನ ಬಾರಿ, ನಾವು ಅಧಿಕಾರಕ್ಕೆ ಮರಳಿದರೆ ಕೇವಲ ಒಂದು ಹಂತದಲ್ಲಿ ಚುನಾವಣೆಗಳು ನಡೆಯುತ್ತವೆ" ಎಂದು ಅಮಿತ್ ಶಾ ಹೇಳಿದರು.

ಇದೇ ವೇಳೆ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರನ್ನು ಶ್ಲಾಘಿಸಿದ ಶಾ, ಅವರ ನಾಯಕತ್ವದಲ್ಲಿ ಎನ್‌ಡಿಎ ರಾಜ್ಯವನ್ನು 'ಜಂಗಲ್ ರಾಜ್' ಮತ್ತು ನಕ್ಸಲಿಸಂನ ಹಿಡುಗಿನಿಂದ ಮುಕ್ತಗೊಳಿಸಿದೆ ಎಂದರು.

"ಕೇಂದ್ರದಲ್ಲಿರುವ ನಮ್ಮ ಸರ್ಕಾರ ಇಡೀ ದೇಶವನ್ನು ನಕ್ಸಲ್ ಹಿಡುಗಿನಿಂದ ಮುಕ್ತಗೊಳಿಸಲು ದೃಢನಿಶ್ಚಯ ಹೊಂದಿದೆ" ಎಂದು ಶಾ ಪ್ರತಿಪಾದಿಸಿದರು.

# ಬೆಂಗಳೂರು : ಮನೆಯೊಂದರಲ್ಲಿ ಗ್ಯಾಸ್ ಸಿಲಿಂಡರ್ ಸ್ಫೋಟ, ವೃದ್ಧೆ ಸಾವು, ಮನೆ ನೆಲಸಮ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಅ.25– ಮನೆಯೊಂದರಲ್ಲಿ ಸಿಲಿಂಡರ್‌ನಿಂದ ಅನಿಲ ಸೋರಿಕೆಯಾಗಿ ಬೆಂಕಿ ಹೊತ್ತಿಕೊಂಡು ಸ್ಫೋಟಗೊಂಡ ಪರಿಣಾಮ ಬೃಹತ್ ಕಟ್ಟಡವೇ ಕುಸಿದು ವೃದ್ಧೆ ಮೃತಪಟ್ಟಿರುವ ಘಟನೆ ಇಂದು ಬೆಳಗ್ಗೆ ನಗರದಲ್ಲಿ ನಡೆದಿದೆ.

ಅಕ್ಕಯ್ಯಮ (80) ಮೃತಪಟ್ಟ ವೃದ್ಧೆ. ಈ ದುರಂತದಲ್ಲಿ ಕುಟುಂಬದ ಶೇಖರ್(52), ಕಿರಣ್‌ಕುಮಾರ್ (22) ಮತ್ತು ಚಂದನ್ (25) ಎಂಬುವವರು ಗಂಭೀರ ಗಾಯಗೊಂಡಿದ್ದು, ಈ ಪೈಕಿ ಚಂದನ್ ಅವರ ಸ್ಥಿತಿ ಗಂಭೀರವಾಗಿದ್ದು, ಅವರನ್ನು ಚಿಕಿತ್ಸೆಗಾಗಿ ಟಿಸಿಇ ಪಾಳ್ಯದ ಆಲ್ಟರ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಕೆ.ಆರ್‌ಪುರಂ ಪೊಲೀಸ್ ಠಾಣೆ ವ್ಯಾಪ್ತಿಯ ತ್ರಿವೇಣಿ ನಗರದ ಮನೆಯೊಂದರಲ್ಲಿ ಇಂದು ಬೆಳಿಗ್ಗೆ 7 ಗಂಟೆ ಸುಮಾರಿಗೆ ಸಿಲಿಂಡರ್‌ನಿಂದ ಅನಿಲ ಸೋರಿ–ಕೆಯಾಗಿ ಬೆಂಕಿ ಹೊತ್ತಿಕೊಂಡ ಪರಿಣಾಮ ಸ್ಫೋಟಗೊಂಡು ಈ ದುರ್ಘಟನೆ ಸಂಭವಿಸಿದೆ.

ಸ್ಫೋಟದ ತೀವ್ರತೆಗೆ ಈ ಮನೆಯ ಹಿಂಭಾಗದ ಮೂರು ಶೆಡ್ ಮನೆಗಳಿಗೂ ಹಾನಿಯಾಗಿದ್ದು, ಶೆಡ್‌ನಲ್ಲಿದ್ದ ಮಹಿಳೆ ಕಾಂಚನಾ ಎಂಬುವವರ ತಲೆಗೆ ಗಾಯವಾಗಿದ್ದು, ಅವರನ್ನೂ ಸಹ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಸ್ಥಳದಲ್ಲಿದ್ದ ಪೊಲೀಸರು ಮಾಧ್ಯಮಗಳಿಗೆ ತಿಳಿಸಿದ್ದಾರೆ.

ಘಟನೆಯಲ್ಲಿ ಅಕ್ಕಪಕ್ಕದ ಮನೆಗಳ ಕಿಟಕಿಗಳು ಹಾನಿಯಾಗಿವೆ, ಗೋಡೆಗಳು ಬಿರುಕು ಬಿಟ್ಟಿವೆ. ಸುದ್ದಿ ತಿಳಿದು ಸ್ಥಳಕ್ಕೆ ಕೆಆರ್‌ಪುರಂ ಠಾಣೆ ಪೊಲೀಸರು ಹಾಗೂ ಬಾಂಬ್ ನಿಗ್ರಹ ದಳ ಹಾಗೂ ಶ್ವಾನದಳ, ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

ಭೀಕರ ಸ್ಫೋಟಕ್ಕೆ ಕಾರಣವೇನೆಂಬುವುದು ಸದ್ಯಕ್ಕೆ ತಿಳಿದು ಬಂದಿಲ್ಲ. ಮೇಲ್ನೋಟಕ್ಕೆ ಸಿಲಿಂಡರ್‌ನಿಂದ ಅನಿಲ ಸೋರಿ–ಕೆಯಾಗಿ ಸ್ಫೋಟಗೊಂಡಿದೆ. ತಜ್ಞರ ವರದಿ ಬಂದ ಬಳಿಕ ಇನ್ನಷ್ಟು ಮಾಹಿತಿಗಳು ಲಭ್ಯವಾಗಲಿವೆ ಎಂದು ಪೊಲೀಸರು ತಿಳಿಸಿದ್ದಾರೆ.

# ಯುಎಸ್ ಕೋರ್ಟ್‌ನಲ್ಲಿ H-1B ಶುಲ್ಕದ ವಾದ-ವಿವಾದ, 1 ಲಕ್ಷ ಡಾಲರ್ ಕ್ರಮಕ್ಕೆ ಟ್ರಂಪ್ ಆಡಳಿತದ ಸಮರ್ಥನೆ

ಮಲ್ಲಮ್ಮ ನುಡಿ ವಾರ್ತೆ

ಡೊನಾಲ್ಡ್ ಟ್ರಂಪ್ ಆಡಳಿತವು ವಲಸೆ ಮತ್ತು ವೀಸಾ ನಿಯಮಗಳಿಗೆ ಸರ್ಜರಿ ಮಾಡ್ತೀವಿಂತ ಅಮೆರಿಕದ ಕಂಪನಿಗಳು ಮತ್ತು ವಿದೇಶಿ ಉದ್ಯೋಗಿಗಳ ಪಾಲಿಗೆ ಹಗುಲು–ರಾತ್ರಿ ಕಾಡುವ ಗುಮ್ಮನಾಗಿ ಹೋಗಿದೆ. ಸೀದಾ ಊ–1ಃ ವೀಸಾ ಶುಲ್ಕವನ್ನು ಒಂದು ಲಕ್ಷ ಡಾಲರ್ ಫಿಕ್ಸ್ ಮಾಡಿ ಏಕಾಏಕಿ ಆದೇಶ ಹೊರಡಿಸಿ, ಅಮೆರಿಕದಲ್ಲಿರುವ ಭಾರತೀಯ ಉದ್ಯೋಗಿಗಳು ಸೇರಿದಂತೆ ಎಲ್ಲ ಉದ್ಯಮಗಳಿಗೆ ಟ್ರಂಪ್ ಶಾಕ್ ಕೊಟ್ಟಿದ್ದರು. ಅದರ ಬಗ್ಗೆ ಸಿಕ್ಕಾಪಟ್ಟೆ ಚರ್ಚೆಗಳು ನಡೆದು, ವಿರೋಧವೂ ವ್ಯಕ್ತವಾಗಿ ಕೋರ್ಟ್‌ನಲ್ಲಿ ಕೇಸ್‌ಗಳು ದಾಖಲಾಗ್ತಿದ್ದಂತೆ, ಈ ಹೊಸ ಶುಲ್ಕದಿಂದ ಒಂದಷ್ಟು ಜನರಿಗೆ ವಿನಾಯಿತಿ ಇದೆ ಅನ್ನೋದನ್ನು ಪ್ರಕಟಿಸಲಾಯ್ತು. ಆದರೆ, ಈಗಾಗಲೇ ಅಮೆರಿಕದಲ್ಲಿರೋರಿಗೆ ಮಾತ್ರ ವಿನಾಯಿತಿ ಅನ್ವಯ ಆಗುತ್ತೆ ಅನ್ನೋದು ಕೂಡ ಒಂದು ಕೊಕ್ಕೆ ಇಟ್ಟಂತೆ. ಅಂದ್ರೆ, ವಿದೇಶಗಳಿಂದ ಹೊಸದಾಗಿ ಯಾರೇ ಬರೋದಾದ್ರೂ ಅಥವಾ ಮುಂದೆ ವಿದೇಶದಲ್ಲಿ ಓದೋಕೆ ಬರೋರೂ ಕೂಡ ಹೊಸ ಶುಲ್ಕದ ವ್ಯಾಪ್ತಿಗೆ ಸೇರುತ್ತಾರೆ! ಈಗ ಕೊಟ್ಟಿರುವ ವಿನಾಯಿತಿಯನ್ನು ಯಾವಾಗ ಬೇಕಾದ್ರೂ ಟ್ರಂಪ್ ವಾಪಸ್ ತಗೊಳ್ಳೋದು ಅನ್ನೋ ಆತಂಕವಂತೂ ಇದ್ದೇ ಇದೆ. ಕಂಪನಿಗಳು ಉದ್ಯಮ ವಿಸ್ತರಣೆಯನ್ನು ಬಿಟ್ಟು, ವಿದೇಶಿ ಟ್ಯಾಲೆಂಟ್‌ಗಳು ಉದ್ಯೋಗದಲ್ಲಿ ಉನ್ನತಿಯ ಬಗ್ಗೆ ಯೋಚಿಸೋದನ್ನು ಬಿಟ್ಟು ವೀಸಾದಲ್ಲಿ ಇನ್ನೇನು ಬದಲಾಗುತ್ತೋ ಎಂಬ ಆತಂಕದಲ್ಲೇ ದಿನ ಕಳೆಯಬೇಕಾಗುತ್ತೆ. ಅಂಥ ಸ್ಥಿತಿಯಿಂದ ಹೊರಬರಬೇಕೂಂದ್ರೆ ವೀಸಾ ವಿಚಾರ ಕ್ಲಿಯರ್ ಆಗಬೇಕು. ಹೀಗಾಗಿ ಲಕ್ಷ ಡಾಲರ್ ಶುಲ್ಕವನ್ನು ತೆಗೆದುಹಾಕಬೇಕು ಅನ್ನೋದು ಯುಎಸ್ ಚೇಂಬರ್ ಆಫ್ ಕಾಮರ್ಸ್‌ನ ವಾದ. ಆದ–ರೆ, ವೀಸಾ ವಂಚನೆಗಳನ್ನು ತಡೆಯಬೇಕಾದ್ರೆ ಲಕ್ಷಗಟ್ಟಲೆ ಶುಲ್ಕ ಪಡೆಯೋದು ಅನಿವಾರ್ಯ ಅನ್ನೋದು ಟ್ರಂಪ್ ಆಡಳಿತದ ವಾದ. ಈಗ ಈ ವಾದ–ವಿವಾದವು ಕೋರ್ಟ್ ಮೆಟ್ಟಿಲೇರಿದೆ. ಸರಕಾರ ಮತ್ತು ಉದ್ಯಮವು ನ್ಯಾಯಾಲಯದಲ್ಲಿ ಹಗ್ಗಜಗ್ಗಾಟಕ್ಕೆ ಇಳಿದಿವೆ.

# ಸಿಡಿಲು ಬಡಿದು ಹಾನಿಯಾದ ಮನೆಗೆ ನೇಸರ ಯುವಕ ಮಂಡಲದಿಂದ ಸಹಾಯ ಹಸ್ತ

ಸುಳ್ಯ:ಕುಂಡಡ್ಕದಲ್ಲಿ ಸಿಡಿಲು ಬಡಿದು ತೀವ್ರಹಾನಿ ಉಂಟಾಗಿದ್ದ ಮನೆಗೆ ಮುಕ್ಕೂರು ನೇಸರ ಯುವಕ ಮಂಡಲ ನೆರವು ನೀಡಿದೆ.

ಅ.17 ರಂದು ಕುಂಡಡ್ಕ ಭಾರತಿ ಅವರ ಮನೆಗೆ ಸಿಡಿಲು ಬಡಿದು ಹಾನಿ ಉಂಟಾಗಿತ್ತು. ಮೂವರು ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿ ಮಂಗಳವಾರ ರಾತ್ರಿ ಮನೆಗೆ ಮರಳಿದ್ದರು. ದೀಪಾವಳಿ ಸಂಭ್ರಮದಲ್ಲಿರಬೇಕಾದ ಬಡ ಕುಟುಂಬದ ಮನೆಗೆ ಸಿಡಿಲಿನ ಆಘಾತದಿಂದ ಕತ್ತಲು ಆವರಿಸಿತ್ತು. ಮನೆ ಛಾವಣಿಗೆ ಹಾನಿ ಮಳೆಯ ನಡುವೆ ಇರಬೇಕಾದ ಸ್ಥಿತಿ ಒಂದೆಡೆಯಾದರೆ, ಇನ್ನೊಂದೆಡೆ ವಿದ್ಯುತ್ ಸಂಪರ್ಕ, ಪರಿಕರ ಸಂಪೂರ್ಣ ಹಾನಿಗೀಡಾಗಿ ಬೆಳಕು ಇಲ್ಲದ ಸ್ಥಿತಿ ಉಂಟಾಗಿತ್ತು.

ಮನೆಯ ಪರಿಸ್ಥಿತಿ ಅರಿತ ಮುಕ್ಕೂರು ನೇಸರ ಯುವಕ ಮಂಡಲ ತನ್ನ ಸೇವಾ ನಿಧಿಯ ಮೂಲಕ ಬಡ ಕುಟುಂಬಕ್ಕೆ ಬುಧವಾರ ನೆರವು ನೀಡಿದೆ. ಬುಧವಾರ ಬೆಳಗ್ಗೆ ಸಂಘದ ವತಿಯಿಂದ ಸಿಮೆಂಟ್ ಶೀಟು, ವಿದ್ಯುತ್ ಮರು ಜೋಡಣೆಗೆ ಬೇಕಾದ ಎಲ್ಲ ಸಾಮಗ್ರಿಗಳನ್ನು ಒದಗಿಸಲಾಯಿತು. ಸದಸ್ಯರು ಶ್ರಮದಾನದ ಮೂಲಕ ಜೋಡಣೆ–ಯ ಕೆಲಸ ನಿರ್ವಹಿಸಿದರು. ವಿದ್ಯುತ್ ಮೀಟರ್ ಬೋರ್ಡ್ ಸುಟ್ಟು ಕರಲಾಗಿತ್ತು. ಸಂಘದ ಕರೆಗೆ ತಕ್ಷಣ ಸ್ಪಂದಿಸಿದ ಪವರ್ ಮೆನ್ ಮಹಾಂತೇಶ್ ಹೊಸ ಮೀಟರ್ ಜೋಡಿಸಲು ನೆರವಾದರು. ಜತೆಗೆ ಛಾವಣಿ ದುರಸ್ತಿಯ ಸಂದರ್ಭದಲ್ಲಿಯು ಸಹಕರಿಸಿದರು.

ಈ ಸಂದರ್ಭದಲ್ಲಿ ನೇಸರ ಯುವಕ ಮಂಡಲದ ಅಧ್ಯಕ್ಷ ರಮೇಶ್ ಕಾನಾವು, ಕಾರ್ಯದರ್ಶಿ ರಾಮಚಂದ್ರ ಚೆನ್ನಾವರ, ಸದಸ್ಯರಾದ ಜಯಂತ ಕುಂಡಡ್ಕ, ರವಿ ಕುಂಡಡ್ಕ, ವಿದ್ಯುತ್ ಸಂಬಂಧಿಸಿದ ಕೆಲಸ ನಿರ್ವಹಿಸಿದ ಹುಕ್ರಪ್ಪ ಮೊದಲಾದವರು ಉಪಸ್ಥಿತರಿದ್ದರು.

# ಇಂದು ಮಹಿಳಾ ಸಾಧಕರಿಗೆ ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ

ಮೈಸೂರು:ಅ.24:–ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಬಳಗದ ವತಿಯಿಂದ ಅ.26ರಂದು ಬಳಗದ 7ನೇ ವಾರ್ಷಿಕೋತ್ಸವದ ಅಂಗವಾಗಿ ಮಹಿಳಾ ಸಾಧಕರಿಗೆ ಆದರ್ಶ ಗೃಹಿಣಿ ಪ್ರಶಸ್ತಿ ಹಾಗೂ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಬಳಗದ ಅಧ್ಯಕ್ಷ ಡಾ.ಜಿ.ಎಂ. ವಾಮದೇವ ಹೇಳಿದರು.

ಜಎಸ್‌ಎಸ್ ಆಸ್ಪತ್ರೆ ಆವರಣದಲ್ಲಿರುವ ಡಾ.ಶಿವರಾತ್ರೀಶ್ವರ ರಾಜೇಂದ್ರ ಭವನದಲ್ಲಿ ಅಂದು ಸಂಜೆ 6ಗಂಟೆಗೆ ನಡೆಯಲಿರುವ ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನಸ್ವಾಮಿ ಉದ್ಘಾಟಿಸುವರು. ಮೈವಿವಿ ಗಣಕ ವಿಜ್ಞಾನ ಅಧ್ಯಯನ ವಿಭಾಗದ ಹಿರಿಯ ಪ್ರಾಧ್ಯಾಪಕ ಡಾ.ಡಿ.ಎಸ್. ಗುರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಹಿರಿಯ ಸಾಹಿತಿ ಪ್ರೊ.ಶಶಿಕಲಾ ವಸದ ಅವರು ಶಿವರುದ್ರಮ್ಮ, ಶಿವಲಿಂಗಮ್ಮ, ಡಾ.ನಾಗಲಕ್ಷ್ಮಿ ಭಟ್ಟಾಚಾರ್ಯ ಅವರಿಗೆ ಆದರ್ಶ ಗೃಹಿಣಿ ಪ್ರಶಸ್ತಿಯನ್ನು ಪ್ರದಾನ ಮಾಡಿ ಹಾಗೂ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುವರು. ಬಳಗದ ಗೌರವಾಧ್ಯಕ್ಷ ಡಾ.ಟಿ.ತಿಪ್ಪೇಸ್ವಾಮಿ ಉಪಸ್ಥಿತಿರಿರುವರು. ತಾವು ಅಧ್ಯಕ್ಷತೆ ವಹಿಸುವುದಾಗಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬಳಗದ ಗೌರವಾಧ್ಯಕ್ಷ ಡಾ.ಟಿ.ತಿಪ್ಪೇಸ್ವಾಮಿ, ಕಾರ್ಯದರ್ಶಿ ಡಾ.ವಿಠಲರೆಡ್ಡಿ ಎ.ಚುಳಕಿ, ಖಜಾಂಚಿ ಟಿ.ಮಹಾಂತೇಶ್, ಶಾರದಾ ಶಿವಲಿಂಗಸ್ವಾಮಿ ಇದ್ದರು.

# ಸಿದ್ಧೇಶ್ವರ ಶ್ರೀಗಳ ಜಯಂತ್ಯುತ್ಸವ ಇಂದು



ಮಲ್ಲಮ್ಮ ನುಡಿ ವಾರ್ತೆ

ಜಮಖಂಡಿ:ಅ.25:ತಾಲ್ಲೂಕಿನ ಹುಲ್ಯಾಳ ಗುರುದೇವಾಶ್ರಮದ ಶ್ರೀಗುರುದೇವ ಸತ್ಸಂಗ ಬಳಗದ ಆಶ್ರಯದಲ್ಲಿ ಪ್ರತಿ ತಿಂಗಳ 4ನೇ ಭಾನುವಾರ ಹಮ್ಮಿಕೊಳ್ಳುವ 'ಶ್ರೀಗುರುದೇವ ಸತ್ಸಂಗ' ಮಾಸಿಕ ಕಾರ್ಯಕ್ರಮ ಅ.26 ರಂದು ಸಂಜೆ 6.00 ಗಂಟೆಗೆ ಜರುಗಲಿದೆ ಎಂದು ಹರ್ಷಾನಂದ ಮಹಾಸ್ವಾಮಿಗಳು ತಿಳಿಸಿದ್ದಾರೆ.

ಕಾರ್ಯಕ್ರಮದ ಅಂಗವಾಗಿ ವೇದಾಂತಕೇಸರಿ ಪೂಜ್ಯಶ್ರೀ ಮಲ್ಲಿಕಾರ್ಜುನ ಮಹಾಶಿವಯೋಗಿಗಳವರ ಹಾಗೂ ಜ್ಞಾನಯೋಗಿ ಪೂಜ್ಯಶ್ರೀ ಸಿದ್ಧೇಶ್ವರ ಮಹಾಸ್ವಾಮಿಗಳವರ ಜಯಂತ್ಯುತ್ಸವ ಜರುಗಲಿದೆ.

ವಿಜಯಪುರ ಜ್ಞಾನಯೋಗಾಶ್ರಮದ ಬಸವಲಿಂಗ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು.

ಹಂಚಿನಾಳ ಭಕ್ತಿಯೋಗಾಶ್ರಮದ ಮಹೇಶಾನಂದ ಮಹಾಸ್ವಾಮಿಗಳು 'ಮಲ್ಲಿಕಾರ್ಜುನ ಮಹಾಶಿವಯೋಗಿಗಳ ಜೀವನ ಸಂದೇಶ' ಹಾಗೂ ಜಮಖಂಡಿಯ ಬಸವಜ್ಯೋತಿ ಶಿಕ್ಷಣ ಸಮೂಹ ಸಂಸ್ಥೆಗಳ ಆಡಳಿತಾಧಿಕಾರಿ ಪ್ರೊ.ಬಸವರಾಜ ಕಡ್ಡಿ 'ಸಿದ್ಧೇಶ್ವರ ಶ್ರೀಗಳ ಸಂದೇಶ' ಕುರಿತು ಉಪನ್ಯಾಸ ನೀಡಲಿದ್ದಾರೆ.

ಮೈಗೂರಿನ ಶಿವಾನಂದ ಮಠದ ಗುರುಪ್ರಸಾದ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದಾರೆ. ಶ್ರೀಗುರುದೇವ ಸಂಗೀತ ಬಳಗದಿಂದ ಸಂಗೀತ ಸೇವೆ ನಡೆಯಲಿದೆ. ದಾಂಡೇಲಿಯ ಸಾತಗೌಡ ಮಾದಗೌಡ ಪಾಟೀಲ ಮಹಾಪ್ರಸಾದದ ದಾಸೋಹ ಸೇವೆ ನೆರವೇರಿಸಲಿದ್ದಾರೆ.

ವೇದಾಂತಕೇಸರಿ ಮಲ್ಲಿಕಾರ್ಜುನ ಶಿವಯೋಗಿಗಳಿಂದ ಲಿಂಗದೀಕ್ಷೆ ಪಡೆದ ದಾಂಡೇಲಿಯ ವಲಯ ಅರಣ್ಯಾಧಿಕಾರಿ ಅಶೋಕ ಪಾಟೀಲ, ಬೆಳಗಾವಿಯ ಶ್ರೀಮಲ್ಲಿಕಾರ್ಜುನ ವಿದ್ಯಾಪೀಠದ ಜಿ.ಎಂ. ಪಾಟೀಲ ಅವರಿಗೆ ವಿಶೇಷ ಸನ್ಮಾನ ನೆರವೇರಿಸಲಾಗುವುದು. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ತಿಳಿಸಿದ್ದಾರೆ.

# ಹಾಡಿ ಜನರಿಗೆ ಗ್ಯಾರಂಟಿಗಳ ಅರಿವು ಮೂಡಿಸಿ

ಮಲ್ಲಮ್ಮ ನುಡಿ ವಾರ್ತೆ

ಮೈಸೂರು: ಅ.25:– ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಅರಿವು ಕಾರ್ಯಕ್ರಮಗಳನ್ನು ನಡೆಸಿ ಹಾಡಿ ಜನಗಳಿಗೆ ಜಾಗೃತಿ ಮೂಡಿಸಿ. ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಮಾಡಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಯ ಅನುಷ್ಠಾನದ ಪ್ರಾಧಿಕಾರದ ಅಧ್ಯಕ್ಷ ಅರುಣ್ ಕುಮಾರ್.ಎಸ್ ಹೇಳಿದರು. ಶುಕ್ರವಾರ ಜಿಲ್ಲಾ ಪಂಚಾಯತ್‌ನ ಡಿ.ದೇವರಾಜ ಅರಸು ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಾಡಿ ಪ್ರದೇಶಗಳು ಇರುವಂತಹ ಪ್ರದೇಶಗಳಲ್ಲಿ ಅಧಿಕಾರಿಗಳು ಶಿಬಿರ ಆಯೋಜಿಸಿ ಅವರಿಗೆ ಗ್ಯಾರಂಟಿ ಯೋಜನೆಯ ಬಗ್ಗೆ ತಿಳಿಸಬೇಕು. ಅವರಿಗೆ ಎಲ್ಲಾ ಯೋಜನೆಗಳು ಲಭ್ಯವಾಗುತ್ತಾ ಇದಿಯಾ ಎಂದು ಪರಿಶೀಲನೆ ಮಾಡಬೇಕು. ಒಂದು ವೇಳೆ ಯೋಜನೆಗಳಿಗೆ ಅರ್ಜಿ ಸಲ್ಲಿಸಿ ತಿರಸ್ಕೃತಗೊಂಡಿದ್ದರೆ ಅರ್ಜಿಗಳನ್ನೂ ಪರಿಶೀಲನೆ ಮಾಡಿ ಅವರಿಗೆ ಎಲ್ಲಾ ಯೋಜನೆಗಳು ತಲುಪುವಂತೆ ಮಾಡಬೇಕು ಎಂದರು.

# ಸಂಗೀತ ದೇವರು ಕೊಟ್ಟ ವರ:ಹೊನ್ನಲಿಂಗೇಶ್ವರ ಸ್ವಾಮಿಗಳು





ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ ತಾಲೂಕಿನ ಸಿಂಧನಕೇರಾ ಗ್ರಾಮದಲ್ಲಿ ಶ್ರೀ ಅನ್ನಪೂರ್ಣೇಶ್ವರಿ ಮಠ ಟ್ರಸ್ಟ್ ಮತ್ತು ಶ್ರೀ ಗುರು ಸೋಮಲಿಂಗೇಶ್ವರ ಟ್ರಸ್ಟ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ 2025–26ನೇ ಸಾಲಿನ ಯೋಜನೆಯಡಿ ಪ್ರಾಯೋಜಿತ ಕಾರ್ಯಕ್ರಮವನ್ನು ಸಿಂಧನಕೇರಾ ಹೊನ್ನಲಿಂಗೇಶ್ವರ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಸಂಗೀತ ದೇವರ ಕೊಡುಗೆಯಾಗಿದ್ದು, ಸಂಗೀತ ಆರಾಧನೆಯತ್ತ ಗಮನ ಹರಿಸಬೇಕು. ರಾಗವನ್ನು ಆಲಿಸಿ ರೋಗದಿಂದ ಮುಕ್ತಿ ಹೊಂದಬಹುದು ಎಂದರು.

ಬೀದರ ಜಿಲ್ಲೆ ಶರಣರ ನಾಡಿನಲ್ಲಿ ಸಂಗೀತದ ಶಕ್ತಿ ಇದೆ. ಇಲ್ಲಿನ ಸಂಗೀತದ ಪ್ರತಿಭೆಗಳು ಪಲಾಯನವಾಗದಂತೆ ಅವರನ್ನು ಪ್ರೋತ್ಸಾಹಿಸಬೇಕಿದೆ. ಸಿಂಧನಕೇರಾ ಗ್ರಾಮದಲ್ಲಿ ಸಾಂಸ್ಕೃತಿಕ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ ಎಂದರು. ಅತಿಥಿಗಳಾಗಿ ಸಾಮಾಜಿಕ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಮಾತನಾಡಿದ ಅವರು ಭಾರತ ದೇಶದಲ್ಲೇ ನಮ್ಮ ಕರ್ನಾಟಕದ ಜಾನಪದ ಸಂಸ್ಕೃತಿ ಅತ್ಯಂತ ಶ್ರೀಮಂತವಾಗಿದೆ. ಕಲೆ, ಸಾಹಿತ್ಯ, ನೃತ್ಯ (ಡೊಳ್ಳು ಕುಣಿತ, ಕಂಸಾಳೆ, ಕರಡಿ ಮಜಲು, ವೀರಗಾಸೆ, ನಂದಿಕೋಲು ಕುಣಿತ, ಇತ್ಯಾದಿ), ನಾಟಕ (ಬಯಲಾಟ, ದೊಡ್ಡಾಟ, ಶ್ರೀ ಕೃಷ್ಣಪಾರಿಜಾತ, ಯಕ್ಷಗಾನ) ಮುಂತಾದ ವಿವಿಧ ಪ್ರಕಾರಗಳನ್ನು ನಮ್ಮ ಕನ್ನಡ ಜಾನಪದ ಸಂಸ್ಕೃತಿಯಲ್ಲಿ ಕಾಣಬಹುದು ಎಂದರು. ಪರಿಸರವಾದಿ ಶೈಲೇಂದ್ರ ಕಾವಡಿ ಮಾತನಾಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕನ್ನಡ ಸಂಸ್ಕೃತಿ ಉಳಿಸಿ ಸಂರಕ್ಷಿಸಲು ಹಲವಾರು ಕಾರ್ಯಕ್ರಮಗಳು ಜಾರಿಗೊಳಿಸಿದೆ, ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು. ಶಂಕರ ಚೀಲವಂತ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಗಣೇಶ ಪಾಟೀಲ್, ರಾಜಕುಮಾರ ಆರ್. ಹಡಪದ, ರೇವಣಸಿದ್ದ ಮರಕಲ್, ತಿಪಣ್ಣ, ಕಲ್ಯಾಣ ಕರ್ನಾಟಕ ಸಂಗೀತ ಕಲಾವಿದರರಾದ ವಿಜಯಕುಮಾರ್ ಸೇರಿದಂತೆ ಗ್ರಾಮಸ್ಥರು ಮಹಿಳಾ ತಾಯಿಯಂದಿಯರು ಮಕ್ಕಳು, ಇದ್ದರು. ಸುಗಮ ಸಂಗೀತ ಗಾಯನ ಕಾರ್ಯಕ್ರಮವನ್ನು ಛತ್ರಪ್ಪ ಕೆ. ಹಡಪದ, ಸೂರ್ಯಕಾಂತ ಹಡಪದ ಮತ್ತು ಸಂಗಡಿಗರು ನಡೆಸಿಕೊಟ್ಟರು. ಜಾನಪದ ಗೀತೆ ಬಸಮ್ಮ ಹುಡುಗೆನೋರ್ ನಡೆಸಿಕೊಟ್ಟರು ಹಾರ್ಮೋನಿಯಂ ವೀರಯ್ಯಾ ಮಠಪತಿ, ಮಂಜುನಾಥ್ ಹೊನ್ನಗೊಂಡ್, ತಬಲಾ ವಾದಕರು ಚಿನ್ನಮ್ಮ ಮಠಪತಿ, ವಿಜಯಕುಮಾರ್ ದುಬಲಗುಂಡಿ ನಡೆಸಿಕೊಟ್ಟರು. ಇದೇ ಸಂದರ್ಭದಲ್ಲಿ ಕಲಾ ತಂಡಗಳಾದ ಹನುಮಾನ್ ಭಜನ್ ಸಂಘ ಸಿಂಧನಕೇರಾ, ಭವಾನಿ ಮಂದಿರ ಭಜನ್ ಸಂಘ, ಸೇರಿದಂತೆ ವಿವಿಧ ಭಜನ್ ಸಂಘಗಳು ಭಾಗವಹಿಸಿದವು.

# ಸ್ಪರ್ಧಾತ್ಮಕ ಪರೀಕ್ಷೆಯ ಯಶಸ್ಸಿಗೆ ಉತ್ತಮ ತಯಾರಿ ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.25:ವಿವಿಧಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿಯಶಸ್ಸು ಪಡೆಯಲು ವಿದ್ಯಾರ್ಥಿಗಳು ಪದವಿ ಪ್ರಥಮ ವರ್ಷದಿಂದಲೇಉತ್ತಮತಯಾರಿ ನಡೆಸುವುದು ಅತ್ಯಗತ್ಯ ಎಂದು ಹುಮನಾಬಾದ್‌ಸರ್ಕಾರಿಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ವೀರಣ್ಣ ತುಪ್ಪದ್ ಹೇಳಿದರು.

ಪಟ್ಟಣದಸರ್ಕಾರಿಪ್ರಥಮದರ್ಜೆ ಕಾಲೇಜಿನಪ್ರಥಮವರ್ಷದವಿವಿಧ ಕೋರ್ಸ್‌ನವಿದ್ಯಾರ್ಥಿಗಳಿಗೆಹಿರಿಯ ವಿದ್ಯಾರ್ಥಿಗಳಿಂದಹಮ್ಮಿಕೊಂಡಿದ್ದ ಸ್ವಾಗತಸಮಾರಂಭದಲ್ಲಿಭಾಗವಹಿಸಿ ಅವರು ಮಾತನಾಡಿದರು.

ಸಾಧನೆಗೆಬೇಕಾಗಿರುವುದುನಿರಂತರ ಪ್ರಯತ್ನ,ಸತತಅಧ್ಯಯನ,ಗುರುಗಳ ಮಾರ್ಗದರ್ಶನ ಎಂದರು.

ಕಾಲೇಜಿನಪ್ರಾಚಾರ್ಯಹೇಮಾವತಿ ಪಾಟೀಲ ಮಾತನಾಡಿ, ಶೈಕ್ಷಣಿಕ ಪ್ರಗತಿಯೊಂದಿಗೆ ವಿದ್ಯಾರ್ಥಿಗಳು ಸುಸಂಸ್ಕೃತಿ ಬೆಳೆಸಿಕೊಳ್ಳಬೇಕು. ಕಾಲೇಜಿನಲ್ಲಿಅಭ್ಯಾಸಮಾಡುತ್ತಿರುವ ವಿದ್ಯಾರ್ಥಿಗಳೆಲ್ಲರೂಕಾಲೇಜಿನಲ್ಲಿ ದೊರೆಯುವಉತ್ತಮವಾದಸೌಲಭ್ಯಗಳು ಹಾಗೂ ಹಿರಿಯ ಪ್ರಾಧ್ಯಾಪಕರ ಸೇವೆಯನ್ನು ಸಂಪೂರ್ಣವಾಗಿ ಸದುಪಯೋಗಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಗುಲ್ಬರ್ಗ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯೆ ಶ್ರೀದೇವಿ ಕಟ್ಟಿಮನಿ, ಸಂಪತ್‌ಕುಮಾರಿ, ರವಿ ಮೇಟಿ ಮಾತನಾಡಿದರು.

ವಿದ್ಯಾರ್ಥಿಗಳು ಪ್ರದರ್ಶಿಸಿದ ವಿವಿಧಸಾಂಸ್ಕೃತಿಕಕಾರ್ಯಕ್ರಮಗಳು ನೆರೆದವರ ಮನ ರಂಜಿಸಿದವು.

ಪ್ರಮುಖರಾದನಾಗಮ್ಮ ಬಂಗರಗಿ, ನಾಗೇಂದ್ರಪ್ಪ,ಕೃಷ್ಣಮೂರ್ತಿಸೋಮನಾಥ, ಪ್ರದೀಪ, ಅಶೋಕ, ಶ್ರೀಕಾಂತ, ಧೋಂಡಿಬಾ, ವಿಜಯಕುಮಾರ, ರಮೇಶ, ಸೋಮನಾಥ, ವನಿತಾ ಬಾಂಗೆ,ಸಪ್ನಾ,ಸಂಗೀತಾ ಡೋಣೆ, ಜೈಶ್ರೀ, ದಿವ್ಯಜ್ಯೋತಿ ಸೇರಿದಂತೆ ಇತರರು ಇದ್ದರು.

# ಮಹಿಳೆ ತಲೆ ಕೂದಲು ಕತ್ತರಿಸಿ, ಖಾರದ ಪುಡಿ ಹಚ್ಚಿ ದೌರ್ಜನ್ಯ

ಯಾದಗಿರಿ:ಅ.25:ಜಿಲ್ಲೆಯಲ್ಲಿಇಡೀನಾಗರಿಕ ಸಮಾಜವೇತಲೆತಗ್ಗಿಸುವಂತಹಘಟನೆಯೊಂದು ನಡೆದಿದೆ. ಶಹಾಪುರ ತಾಲ್ಲೂಕಿನ ಚಾಮನಾಳ ತಾಂಡಾದಲ್ಲಿ ಮಹಿಳೆಯೊಬ್ಬರ ತಲೆ ಕೂದಲು ಕತ್ತರಿಸಿ, ಸುಣ್ಣ ಹಚ್ಚಿ, ಖಾರದ ಪುಡಿ ಎರಚಿ ಅಮಾನುಷವಾಗಿ ವರ್ತಿಸಿದ ಘಟನೆ ನಡೆದಿದೆ. ಪ್ರಕರಣಸಂಬಂಧಇಬ್ಬರನ್ನಬಂಧಿಸಲಾಗಿದ್ದು,11 ಜನರ ವಿರುದ್ಧ ಕೆಂಭಾವಿ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಿಸಲಾಗಿದೆ.

ಅ.16 ರಂದು ಘಟನೆ ನಡೆದಿದ್ದು ತಡವಾಗಿ ಬೆಳಕಿಗೆಬಂದಿದೆ. ಕಸ್ತೂರಿಬಾಯಿಡಾಕಪ್ಪ ಮತ್ತು ಡಾಕಪ್ಪ ಚಿನ್ನಾರಾಠೋಡಬಂಧಿತಆರೋಪಿಗಳು. ಇನ್ನುಳಿದಂತೆವಿಜಯಕುಮಾರಕಿಶನ್ ರಾಠೋಡ (ರೌಡಿ ಶೀಟರ್) ಮತ್ತು ಇತರೆ ಹತ್ತು ಮಂದಿ ಆರೋಪಿಗಳುತಮ್ಮ ಮೊಬೈಲ್ ಫೋನ್‌ಗಳನ್ನು ಸ್ವಿಚ್ ಆಫ್ ಮಾಡಿದ್ದು, ಮುಂಬೈ, ಪುಣೆಯಲ್ಲಿ ತಲೆಮರೆಸಿಕೊಂಡಿರುವಶಂಕೆಇದೆಎಂದುಎಂದು ಪೊಲೀಸರು ತಿಳಿಸಿದ್ದಾರೆ.

ಸಂತ್ರಸ್ತೆಆರೋಗ್ಯಸಮಸ್ಯೆಯಿಂದಾಗಿಕಲಬುರಗಿ ಇರುವಚಿಕ್ಕಮ್ಮನಮನೆಗೆಆಗಾಗಹೋಗುತ್ತಿದ್ದಳು. ಆಕೆಯ ಅಳಿಯ ಆಸ್ಪತ್ರೆಗೆ ಕರೆದುಕೊಂಡು ಹೋಗುತ್ತಿದ್ದ. ಆದ್ರೆ ಆರೋಪಿಗಳು ಅಳಿಯನ ಜೊತೆಗೆ ಸಂಬಂಧ ಇಟ್ಟುಕೊಂಡು ಓಡಿ ಹೋಗಿ ಮರ್ಯಾದೆ ತೆಗೆದಿದ್ದೀಯಾ ಅಂತ ನಿಂದಿಸಿ ಮನಸೋಇಚ್ಛೆಥಳಿಸಿದ್ದಾರೆ. ಸುಮಾರು11 ಜನ ಗಂಗೂಭಾಯಿಯನ್ನ ಒದ್ದುನೆಲಕ್ಕೆಕೆಡವಿದ್ದಾರೆ. ಆಕೆಯನ್ನ ಹಿಡಿದು ತಲೆಕೂದಲು ಕತ್ತರಿಸಿದ್ದಾರೆ. ನಂತರತಲೆಗೆಸುಣ್ಣಹಚ್ಚಿ, ಮೈಮೇಲೆಕಾರದಪುಡಿ ಹಾಕಿ ದುಷ್ಕೃತ್ಯ ಎಸಗಿದ್ದಾರೆ. ಜೊತೆಗೆ ಜೀವ ಬೆದರಿಕೆ ಹಾಕಲಾಗಿದೆ ಎಂಬ ಆರೋಪ ಕೂಡ ಕೇಳಿಬಂದಿದೆ.

ಘಟನೆಸಂಬಂಧಕೆಂಭಾವಿಪೊಲೀಸ್ ಠಾಣೆಯಲ್ಲಿ 11 ಜನರ ವಿರುದ್ಧ ಕೇಸ್ ದಾಖಲಾಗಿದ್ದು, ಕಸ್ತೂರಿಭಾಯಿ, ಡಾಕಪ್ಪಇಬ್ಬರನ್ನ ಬಂಧಿಸಲಾಗಿದೆ. ಇನ್ನುಳಿದವಿಜಯಕುಮಾರ್, ತಿಪ್ಪಣ್ಣ, ರಮೇಶ, ದೇವಿಭಾಯಿ, ತಿಪ್ಪಿಭಾಯಿ, ರೂಪ್ಲಿಭಾಯಿ, ಅನುಸೂಯಾ, ಚಾವಳಿಭಾಯಿ, ತಿಪ್ಪಣ್ಣನಾಯ್ಕ್ ಆರೋಪಿಗಳಿಗಾಗಿ ಕೆಂಭಾವಿ ಪೊಲೀಸರು ತೀವ್ರ ಹುಡುಕಾಟ ನಡೆಸುತ್ತಿದ್ದಾರೆ.

# ಆರ್‌ಎಸ್‌ಎಸ್ ಪಥಸಂಚಲನ : ಖರ್ಗೆ ರಾಜಕೀಯ ಮಾಡಬೇಡಿ: ನಮೋಶಿ

ಮಲ್ಲಮ್ಮ ನುಡಿವಾರ್ತೆ

ಕಲಬುರಗಿ: ಅ.25 – ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪಥಸಂಚಲನದ ವಿಷಯದಲ್ಲಿ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ರಾಜಕೀಯ ಮಾಡಬಾರದು ಎಂದು ರಾಜ್ಯ ವಿಧಾನಪರಿಷತ್ ಸದಸ್ಯ ಹಾಗೂ ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಶಶೀಲ್ ಜಿ. ನಮೋಶಿ ಅವರು ಸಲಹೆ ಮಾಡಿದರು.



ಶನಿವಾರ ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ದೇಶಾದ್ಯಂತ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪಥಸಂಚಲನಗಳು ಯಾವುದೇ ರೀತಿಯಲ್ಲಿ ಅಡ್ಡಿ, ಆತಂಕಗಳು ಇಲ್ಲದೇ ಜರುಗಿವೆ. ಆದಾಗ್ಯೂ, ಇದೇ ಪ್ರಥಮ ಬಾರಿಗೆ ಜಿಲ್ಲೆಯಲ್ಲಿ ಮತ್ತು ಹೊರಜಿಲ್ಲೆ ಯಾದಗಿರಿಯಲ್ಲಿ ಮತ್ತು ಚಿತ್ತಾಪುರದಲ್ಲಿ ಸಮಸ್ಯೆಯಾಗುತ್ತಿದೆ. ಇದು ಆಗಬಾರದು ಎಂದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘವು ಸದುದ್ದೇಶಗಳನ್ನು ಹೊಂದಿದೆ. ಯಾವುದೇ ರೀತಿಯಲ್ಲಿ ಸಂಘಟನೆಯು ಕೆಟ್ಟ ಕೆಲಸಗಳನ್ನು ಮಾಡುವುದಿಲ್ಲ. ಸಂಘಟನೆಗೆ ಒಳ್ಳೆಯ ಹೆಸರು ಇದೆ. ಮಹಾತ್ಮಾ ಗಾಂಧಿ ಮತ್ತು ಅಂಬೇಡ್ಕರ್ ಅವರೇ ಸಂಘದ ಕಾರ್ಯ ಚಟುವಟಿಕೆಗಳಿಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಈ ರೀತಿ ಪಥ ಸಂಚಲನಕ್ಕೆ ಅಡ್ಡಿಪಡಿಸುವುದು ಸರಿಯಲ್ಲ ಎಂದು ಸಚಿವ ಖರ್ಗೆ ಅವರ ವಿರುದ್ಧ ಪರೋಕ್ಷ ಅಸಮಾಧಾನವನ್ನು ನಮೋಶಿ ಅವರು ವ್ಯಕ್ತಪಡಿಸಿದರು.

ಚಿತ್ತಾಪುರದಲ್ಲಿ ನವೆಂಬರ್ 2 ರಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಪಥ ಸಂಚಲನದಂದೇ ಎಂಟು ಸಂಘಟನೆಗಳು ಸಹ ಸಭೆ ಹಮ್ಮಿಕೊಳ್ಳಲು ನಿರ್ಧರಿಸಿರುವ ಕುರಿತು ಸುದ್ದಿಗಾರರು ಪ್ರಶ್ನಿಸಿದಾಗ, ಎಲ್ಲ ಸಂಘಟನೆಗಳಿಗೂ ಸಭೆ ಹಾಗೂ ಕಾರ್ಯಕ್ರಮ ಮಾಡಲು ಹಕ್ಕಿದೆ. ಎಲ್ಲರಿಗೂ ಸಹ ಅವಕಾಶ ಕೊಡಬೇಕು. ಅದರಲ್ಲಿ ಎರಡು ಮಾತಿಲ್ಲ. ಅದಕ್ಕೆ ಸಂಬಂಧಿಸಿದಂತೆ ಆಯಾ ತಾಲ್ಲೂಕು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು. ಹೀಗಾಗಿ ರಾಜಕೀಯ ಮಾಡುವ ಅವಶ್ಯಕತೆ ಇಲ್ಲ ಎಂದು ಅವರು ಹೇಳಿದರು.

ಎಂಟು ಸಂಘಟನೆಗಳು ಚಿತ್ತಾಪುರದಲ್ಲಿ ಸಭೆ ಹಾಗೂ ಕಾರ್ಯಕ್ರಮ ಆಯೋಜಿಸುವುದಕ್ಕೆ ಯಾವುದೇ ವಿರೋಧವಿಲ್ಲ. ಹಾಗಾಗಿ ಜಿಲ್ಲಾಧಿಕಾರಿಗಳು ಹಾಗೂ ತಹಸಿಲ್ದಾರರು ಆ ಕುರಿತು ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ತಿಳಿಸಿದ ಅವರು, ಚಿತ್ತಾಪುರದ ರೀತಿಯಲ್ಲಿಯೇ ಯಾದಗಿರಿಯಲ್ಲಿ ಮತ್ತು ಗುರುಮಿಠಕಲ್‌ನಲ್ಲಿಯೂ ಸಹ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪಥಸಂಚಲನಕ್ಕೆ ಸಮಸ್ಯೆ ಯಾಗಿರುವ ಕುರಿತು ತೀವ್ರ ಬೇಸರ ವ್ಯಕ್ತಪಡಿಸಿದ ಅವರು, ಆ ಕುರಿತು ಅಡ್ಡಿಪಡಿಸದೇ ಆರ್‌ಎಸ್‌ಎಸ್ ಪಥಸಂಚಲನಕ್ಕೆ ಅವಕಾಶಗಳನ್ನು ಆಯಾ ತಾಲ್ಲೂಕು ಮತ್ತು ಜಿಲ್ಲಾ ಅಧಿಕಾರಿಗಳು ಅನುಮತಿಯನ್ನು ಕೊಡಬೇಕು ಎಂದು ಕೋರಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷದಲ್ಲಿನ ಆಂತರಿಕ ಕಲಹಗಳು ಬೀದಿಗೆ ಬರುತ್ತಿವೆ. ಇಂತಹ ಆಡಳಿತ ಪಕ್ಷದ ಜಗಳವು ಬಿಜೆಪಿಗೆ ಲಾಭ ಸಿಗಲಿದೆ ಎಂದು ಅವರು ತಿಳಿಸಿದರು.

# ಉಪ ಲೋಕಾಯುಕ್ತರಿಂದ ಅ.30, 31 ರಂದು ಸಾರ್ವಜನಿಕ ಅಹವಾಲು ಸ್ವೀಕಾರ




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ :ಅ.25: ಗೌರವಾನ್ವಿತ ಉಪಲೋಕಾಯುಕ್ತನ್ಯಾಯಮೂರ್ತಿಗಳಾದ ಬಿ.ವೀರಪ್ಪಅವರುಅಕ್ಟೋಬರ್29 ರಿಂದ 31 ರವರೆಗೆ ಕೊಪ್ಪಳ ಜಿಲ್ಲಾ ಪ್ರವಾಸವನ್ನುಹಮ್ಮಿಕೊಂಡಿದ್ದು, ಪ್ರವಾಸದಅವಧಿಯಲ್ಲಿಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಅ.30 ರಂದು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಹಾಗೂ ಅ.31 ರಂದು ಲೋಕಾಯುಕ್ತ ವ್ಯಾಪ್ತಿಯಲ್ಲಿಬಾಕಿ ಇರುವಪ್ರಕರಣಗಳವಿಚಾರಣೆಯನ್ನು ನಡೆಸಲಿದ್ದಾರೆ.

ಉಪಲೋಕಾಯುಕ್ತರು ಅ.30 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.30 ರವರೆಗೆ ಹಾಗೂ ಮಧ್ಯಾಹ್ನ 2.30 ರಿಂದ ಸಂಜೆ 5 ಗಂಟೆಯವರೆಗೆ ಸಾರ್ವಜನಿಕರ ಅಹವಾಲು ಸ್ವೀಕರಿಸುವರು. ಈ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಯಾರಿಗಾದರೂಸರ್ಕಾರಿಅಧಿಕಾರಿ, ನೌಕರರಿಂದಸಾರ್ವಜನಿಕರಿಗೆಕಾನೂನು ರೀತ್ಯ ಆಗಬೇಕಾದ ಕೆಲಸದಲ್ಲಿ ವಿಳಂಬ, ವೃಥಾತೊಂದರೆಅಥವಾ ಇನ್ನಾವುದೇ ತರಹದ ಭ್ರಷ್ಟಾಚಾರ ಮತ್ತುದುರಾಡಳಿತದಲ್ಲಿತೊಡಗಿದ್ದರೆ ಈಕುರಿತುಉಪಲೋಕಾಯುಕ್ತರಿಗೆ ಲಿಖಿತ ದೂರು ಸಲ್ಲಿಸಬಹುದು.

ಅ.31 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.45 ಗಂಟೆಯವರೆಗೆ ಹಾಗೂಮಧ್ಯಾಹ್ನ2.30ರಿಂದಸಂಜೆ 6 ಗಂಟೆಯವರೆಗೆ ಕೊಪ್ಪಳ ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ಪ್ರಕರಣಗಳವಿಚಾರಣೆನಡೆಸುವರು.

ಗೌರವಾನ್ವಿತಉಪಲೋಕಾಯುಕ್ತರ ಕಾರ್ಯವ್ಯಾಪ್ತಿಗೆ ಒಳಪಡುವ ಪ್ರಕರಣಗಳಲ್ಲಿ ತನಿಖೆ ಅಥವಾ ವಿಚಾರಣೆಬಾಕಿಇರುವಪ್ರಕರಣಗಳ (ಈ ಕಚೇರಿಯಿಂದ ನೋಟಿಸ್ ಕಳುಹಿಸಿರುವ) ದೂರುದಾರರು ಹಾಗೂ ಎದುರುದಾರರು ನಿಗದಿತ ಸಮಯಕ್ಕೆಹಾಜರಾಗಿಕಾರ್ಯಕ್ರಮದ ಸದುಪಯೋಗಪಡೆದುಕೊಳ್ಳಬೇಕು ಎಂದು ಕೊಪ್ಪಳ ಲೋಕಾಯುಕ್ತ ಕಚೇರಿ ಪ್ರಕಟಣೆ ತಿಳಿಸಿದೆ.

# ಗೀಸರ್ ಅನಿಲ ಸೋರಿಕೆ : ಅಕ್ಕ-ತಂಗಿ ಸಾವು

ಕೊಡಗು, ಅ.25: ಗ್ಯಾಸ್ ಸಿಲಿಂಡರ್ ಗೀಸರ್‌ನಿಂದಅನಿಲಸೋರಿಕೆಯಾಗಿಅಕ್ಕ-ತಂಗಿ ಇಬ್ಬರುಉಸಿರುಗಟ್ಟಿಮೃತಪಟ್ಟಿರುವದಾರುಣ ಘಟನೆ ಪಿರಿಯಾಪಟ್ಟಣ ತಾಲೂಕಿನಲ್ಲಿ ನಡೆದಿದೆ. ಪಿರಿಯಾಪಟ್ಟಣದಬೆಟ್ಟದಪುರ ಮೂಲದಅಲ್ತಾಫ್‌ಪಾಷಾಅವರಎರಡನೇ ಮಗಳು ಗುಲ್ಬಮ್ ತಾಜ್(23) ಮತ್ತು ನಾಲ್ಕನೇ ಮಗಳಾದ ಸಿಮ್ರಾನ್ ತಾಜ್ (21) ಮೃತಪಟ್ಟವರು.

ಪಿರಿಯಾಪಟ್ಟಣದ ಜೋನಿಗೇರಿ ಬೀದಿಯಲ್ಲಿ ಅಲ್ತಾಫ್ ಪಾಷಾ ಮತ್ತು ಅವರಕುಟುಂದವರುಬಾಡಿಗೆಮನೆಯಲ್ಲಿ ವಾಸವಾಗಿದ್ದಾರೆ.ಅ.22ರರಾತ್ರಿಸುಮಾರು 7ರ ಸಮಯದಲ್ಲಿ ಸಹೋದರಿಯರು ಒಟ್ಟಿಗೆ ಸ್ನಾನಕ್ಕೆ ತೆರಳಿದ್ದಾರೆ. ಈ ವೇಳೆ ಸ್ನಾನದಕೋಣೆಯಲ್ಲಿಗ್ಯಾಸ್‌ಗೀಸರ್ ಆನ್ ಮಾಡಿದತಕ್ಷಣಅದರಿಂದಬಿಡುಗಡೆಯಾದ ವಿಷಾನಿಲಸೇವನೆಯಿಂದಉಸಿರಾಡಲು ತೊಂದರೆ ಉಂಟಾಗಿ ತಕ್ಷಣ ಅಸ್ವಸ್ಥರಾಗಿ ಕುಸಿದು ಬಿದ್ದಿದ್ದರು.

ಕೆಲಹೊತ್ತಾದರೂಸ್ನಾನದಕೋಣೆಯಿಂದ ಹೊರಗೆಬರದಿದ್ದಾಗ,ಕುಟುಂಬಸ್ಥರುತೆರಳಿ ನೋಡಿದಾಗಇಬ್ಬರೂಕುಸಿದುಬಿದ್ದಿದ್ದರು. ತಕ್ಷಣವೇಇಬ್ಬರುಸಹೋದರಿಯರನ್ನು ಚಿಕಿತ್ಸೆ ಗಾಗಿ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಆದರೆಆವೇಳೆಗೆ ಮೃತಪಟ್ಟಿರುವುದಾಗಿವೈದ್ಯರುತಿಳಿಸಿದರು ಎಂದು ತಂದೆ ದೂರಿನಲ್ಲಿ ತಿಳಿಸಿದ್ದಾರೆ. ಪಿರಿಯಾಪಟ್ಟಣದಶವಾಗಾರದಲ್ಲಿಇಬ್ಬರೂ ಯುವತಿಯರಮರಣೋತ್ತರಪರೀಕ್ಷೆನಡೆಸಿ, ನಂತರ ಬೆಟ್ಟದಪುರದ ಗ್ರಾಮದಲ್ಲಿ ನಿನ್ನೆ ಸಂಜೆಅಂತ್ಯಕ್ರಿಯೆನೆರವೇರಿಸಲಾಯಿತು. ಈಸಂಬಂಧಪಿರಿಯಾಪಟ್ಟಣಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**★ಗುಲ್ಬಮ್ ಗೆ ನಿಶ್ಚಿತಾರ್ಥ:**

ಅಲ್ತಾಫ್ ಪಾಷ ಅವರಿಗೆ ನಾಲ್ಕು ಜನ ಹೆಣ್ಣು ಮಕ್ಕಳಿದ್ದು, ಇಬ್ಬರಿಗೆ ಮದುವೆಯಾಗಿದೆ. ಮೃತಗುಲ್ಬಮ್‌ತಾಜ್ ಗೆನಿಶ್ಚಿತಾರ್ಥವಾಗಿತ್ತು. ಪಿರಿಯಾಪಟ್ಟಣಕ್ಕೆ ಹೊಸ ಬಾಡಿಗೆಮನೆಗೆ ಬಂದಿದ್ದಕ್ಕೆ ಪೂಜೆ ಹಮ್ಮಿಕೊಂಡಿದ್ದರು. ಈ ಪೂಜೆಗೆ ವರನ ಕಡೆಯವರು ಮನೆಯಲ್ಲಿದ್ದ ಸಂದರ್ಭದಲ್ಲಿ ಈ ಅವಘಡ ಸಂಭವಿಸಿದೆ.

ಮೃತದೇಹಗಳಮರಣೋತ್ತರಪರೀಕ್ಷೆ ನಡೆಸಿದವೈದ್ಯ ಡಾ.ಪ್ರಮೋದ್‌ಕುಮಾರ್ ಮಾತನಾಡಿ, ಕಾರ್ಬನ್ ಮೋನಾಕ್ಸೆಡ್ ಸೇವನೆಯಿಂದ ಯುವತಿಯರು ಮೃತಪಟ್ಟಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ. ಶವ ಪರೀಕ್ಷೆ ನಡೆಸಿ, ವರದಿಗೆಕಳುಹಿಸಲಾಗಿದೆ. ಗ್ಯಾಸ್ ಗೀಸರ್ ಬಳಸುವಾಗಜನರುಎಚ್ಚರಿಕೆಯಿಂದಬಳಕೆ ಮಾಡಬೇಕು. ವೆಂಟಿಲೇಟರ್ ಇರುವ ಕಡೆ ಗ್ಯಾಸ್ ಗೀಸರ್ ಬಳಕೆ ಮಾಡಬೇಕು ಎಂದು ಸಲಹೆ ನೀಡಿದ್ದಾರೆ.

# ಲವ್ ಜಿಹಾದ್ ಪ್ರಕರಣದ ಆರೋಪಿ ಬಂಧನ

ಮಲ್ಲಮ್ಮ ನುಡಿವಾರ್ತೆ

ಬೆಂಗಳೂರು:ಅ.25:ಬೆಂಗಳೂರಿನಲ್ಲಿ ವ್ಯಾಪಕಸುದ್ದಿಗೆಗ್ರಾಸವಾಗಿದ್ದಲವ್ ಜಿಹಾದ್ ಪ್ರಕರಣದ ಆರೋಪಿ ಮಹಮ್ಮದ್ ಇಶಾಕ್ ನನ್ನು ಪೊಲೀಸರು ಬಂಧಿಸಿದ್ದಾರೆ.

ಲವ್ ಜಿಹಾದ್ ಪ್ರಕರಣಕ್ಕೆ ಸಂಬಂಧಿಸಿದಂತೆ ಅಮೃತಹಳ್ಳಿ ಪೊಲೀಸರುಆರೋಪಿಮೊಹಮ್ಮದ್ ಇಶಾಕ್‌ನನ್ನುಬಂಧಿಸಿದ್ದಾರೆಎಂದು ತಿಳಿದುಬಂದಿದೆ. ಆರೋಪಿಮಹಮ್ಮದ್ ಇಶಾಕ್‌ಹಾಗೂಆತನಬಾವಸಂತ್ರಸ್ಥೆಗೆ ಪದೇಪದೇಮತಾಂತರಕ್ಕೆಒತ್ತಾಯ ಮಾಡಿರುವಆರೋಪಕೇಳಿಬಂದಿತ್ತು.

ಮತಾಂತರಕ್ಕೆಒಪ್ಪದಿದ್ದಕ್ಕೆಪ್ರಿಯತಮೆಗೆ ಕೈಕೊಟ್ಟಿದ್ದ ಆರೋಪದ ಮೇರೆಗೆ ಆರೋಪಿಯನ್ನುಬಂಧಿಸಲಾಗಿದೆ. ಮಹಮದ್‌ಇಶಾಕ್‌ಬೇರೊಬ್ಬಯುವತಿ ಜೊತೆನಿಶ್ಚಿತಾರ್ಥಮಾಡಿಕೊಂಡಿದ್ದ. ಮದುವೆಯಾಗುವುದಾಗಿನಂಬಿಸಿ ಯುವತಿಗೆವಂಚಿಸಿದ್ದ. ಈಸಂಬಂಧ ಹೆಚ್‌ಎಸ್‌ಆರ್ ಲೇಔಟ್ ಠಾಣೆಗೆ ಸಂತ್ರಸ್ತೆ ದೂರು ನೀಡಿದ್ದಳು.

2024ರಅ.17ರಂದುಯುವತಿಗೆ ಮೊಹಮ್ಮದ್‌ಇಶಾಕ್‌ನಪರಿಚಯವಾಗಿತ್ತು. ಈಪರಿಚಯಸ್ನೇಹಮತ್ತುಪ್ರೀತಿಯಾಗಿ ಬೆಳೆದಿತ್ತು. 2024ರ ಅಕ್ಟೋಬರ್ 30ರಂದುಥಣಿಸಂದ್ರದಮಾಲ್‌ನಲ್ಲಿ ಇಬ್ಬರೂಭೇಟಿಯಾಗಿದ್ದರು. ನಂತರ ಯುವತಿ ಜೊತೆ ಇಶಾಕ್ ಸಲುಗೆ ಬೆಳೆಸಿಕೊಂಡಿದ್ದ. ಆರೋಪಿಇಶಾಕ್, ಮದುವೆಯಾಗುವುದಾಗಿಸಂತ್ರಸ್ಥೆಗೆ ನಂಬಿಸಿದ್ದ. ಬಳಿಕ ಆಕೆಯನ್ನು ಲೈಂಗಿಕವಾಗಿ ಬಳಸಿಕೊಂಡಿದ್ದಾನೆ ಎನ್ನಲಾಗಿದೆ.

ಇಷ್ಟೆಲ್ಲ ಆದಮೇಲೆ ಆಕೆಯನ್ನ ಮತಾಂತರಮಾಡಲುಪ್ರಯತ್ನಿಸಿದ್ದ ಎನ್ನಲಾಗಿದ್ದು, ಆದರೆಇದಕ್ಕೆಯುವತಿ ವಿರೋಧವ್ಯಕ್ತಪಡಿಸಿದ್ದಾಳೆ. ಅಲ್ಲದೇ, 2025ರ ಸೆ.14ರಂದು ಮುಸ್ಲಿಂ ಯುವತಿಯೊಬ್ಬರ ಜೊತೆಯಲ್ಲಿ ನಿಶ್ಚಿತಾರ್ಥ ಮಾಡಿಕೊಂಡಿರುವ ವಿಷಯತಿಳಿದುಪ್ರಶ್ನೆಮಾಡಿದಾಗ ಅಸಲಿ ವಿಚಾರ ಬೆಳಕಿಗೆ ಬಂದಿದೆ. ಇನ್ನು, ಆರೋಪಿ ಇಶಾಕ್ ಹಾಗೂ ಆತನಬಾವಸಂತ್ರಸ್ಥೆಗೆಪದೇಪದೇ ಮತಾಂತರಕ್ಕೆಒತ್ತಾಯಮಾಡಿರುವ ಆರೋಪ ಕೇಳಿಬಂದಿದೆ. ಸಂತ್ರಸ್ಥೆ ಜೊತೆಒಪ್ಪಿತಲೈಂಗಿಕಸಂಪರ್ಕಬೆಳಸಿ, ಮೋಸ ಮಾಡಲು ಯತ್ನಿಸಿದ್ದಾನೆ. ಈ ಕುರಿತು ಸಂತ್ರಸ್ಥೆ ಹೆಚ್?ಎಸ್?ಆರ್? ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು. ಈ ಕೃತ್ಯವು ಅಮೃತಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ನಡೆಸಿದ್ದರಿಂದ, ಅಮೃತಹಳ್ಳಿ ಠಾಣೆಗೆ ಪ್ರಕರಣ ವರ್ಗಾವಣೆಗೊಂಡಿದೆ.

# ವಾಯುಭಾರ ಕುಸಿತ; ಕರಾವಳಿಯಲ್ಲಿ ಮೂರ್ನಾಲ್ಕು ದಿನ ಭಾರೀ ಮಳೆ ಸಾಧ್ಯತೆ

ಉಡುಪಿ:ಅ.25: ಲಕ್ಷದ್ವೀಪದ ಸುತ್ತಮುತ್ತ ವಾಯುಭಾರ ಕುಸಿತವಾಗಿದ್ದು, ಚಂಡಮಾರುತದ ವಾತಾವರಣಸೃಷ್ಟಿಯಾಗಿದೆ. ಮುಂದಿನ ಮೂರ್ನಾಲ್ಕುದಿನಭಾರಿಗಾಳಿಮಳೆ ಬೀಳುವಸಾಧ್ಯತೆಇದೆ. ಹವಾಮಾನ ಇಲಾಖೆ ಕರ್ನಾಟಕ ಕರಾವಳಿಯ ಜಿಲ್ಲೆಗಳಿಗೆಹೈ ಅಲರ್ಟ್‌ಘೋಷಣೆ ಮಾಡಿದೆ.

ಉಡುಪಿ ಜಿಲ್ಲೆಯ ಮಲ್ಪೆ ಸರ್ವ ಋತು ಮೀನುಗಾರಿಕಾ ಬಂದರಿನಿಂದ ಮೀನುಗಾರಿಕೆಗೆ ತೆರಳಿದ್ದ ಎಲ್ಲ ಬೋಟುಗಳು ವಾಪಸ್ ಆಗಿವೆ. ರಾಜ್ಯದ ಗಡಿ ದಾಟಿ ಗೋವಾ, ಮಹಾರಾಷ್ಟ್ರಗುಜರಾತ್‌ಬಾರ್ಡರ್ ನಲ್ಲಿಇರುವಬೋಟ್‌ಗಳಿಗೆಹತ್ತಿರದ ಬಂದರುಗಳನ್ನುಆಶ್ರಯಿಸುವಂತೆ ಸೂಚನೆ ನೀಡಲಾಗಿದೆ.

ಉಡುಪಿಯ ಬೋಟ್‌ಗಳು ಗೋವಾ, ಮಹಾರಾಷ್ಟ್ರ, ಗುಜರಾತ್ ಬಂದರುಸೇರಿವೆ. ಮಲ್ಪೆ, ಗಂಗೊಳ್ಳಿ, ಕುಂದಾಪುರದಸಾವಿರಾರುಬೋಟ್‌ಗಳು ವಾಪಸ್ ಆಗಿವೆ. ಚಂಡಮಾರುತವು ಕಡಲ ತೀರದಿಂದ ಸುಮಾರು 300 ಕಿಲೋಮೀಟರ್ ದೂರದಲ್ಲಿದೆ.

ಅರಬ್ಬೀ ಕಡಲ ತೀರದ ಎಲ್ಲಾ ರಾಜ್ಯಗಳಿಗೂಕಟ್ಟೆಚ್ಚರನೀಡಲಾಗಿದೆ. 40 ರಿಂದ 50 ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಆಳಸಮುದ್ರ, ಪರ್ಶಿಯನ್, ಟ್ರಾಲ್, ನಾಡದೋಣಿಗಳು ಲಂಗರು ಹಾಕಿವೆ.

# ಆರ್‌ಜೆಡಿ ಬಿಹಾರವನ್ನು ಅಪಹರಣ, ಸುಲಿಗೆಯ ಕೇಂದ್ರವಾಗಿಸಿದೆ: ಅಮಿತ್ ಶಾ

ಮಲ್ಲಮ್ಮ ನುಡಿವಾರ್ತೆ

ಪಾಟ್ನಾ:ಅ.25: ಲಾಲು ಪ್ರಸಾದ್ ನೇತೃತ್ವದರಾಷ್ಟ್ರೀಯಜನತಾದಳ(ಆರ್ ಜೆಡಿ) ವಿರುದ್ಧದ ತಮ್ಮ ದಾಳಿಯನ್ನು ತೀಕ್ಷ್ಣಗೊಳಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಆರ್‌ಜೆಡಿ ಆಳ್ವಿಕೆಯಲ್ಲಿ ಬಿಹಾರದಲ್ಲಿ ಕೇವಲ ಒಂದು ಉದ್ಯಮ ಮಾತ್ರ ಪ್ರವರ್ಧಮಾನಕ್ಕೆ ಬಂದಿತು – ಅದು ಅಪಹರಣ, ಸುಲಿಗೆ, ಸುಪಾರಿ ಹತ್ಯೆಗಳು ಮತ್ತು ಡಕಾಯಿತಿ ಎಂದು ಆರೋಪಿಸಿದರು. ಆರ್‌ಜೆಡಿಆಳ್ವಿಕೆಯಲ್ಲಿ ರಾಜ್ಯದಲ್ಲಿಎಲ್ಲಾಕೈಗಾರಿಕಾಘಟಕಗಳು ಮುಚ್ಚಲ್ಪಟ್ಟವುಎಂದುಕೇಂದ್ರಗೃಹಸಚಿವರು ದೂರಿದರು. ಬಿಜೆಪಿನೇತೃತ್ವದರಾಷ್ಟ್ರೀಯ ಪ್ರಜಾಸತ್ತಾತ್ಮಕ ಮೈತ್ರಿಕೂಟ(ಎನ್ ಡಿಎ) ಅಧಿಕಾರಕ್ಕೆ ಮರಳಿದರೆ ಮುಂದೆ ಬಿಹಾರದಲ್ಲಿಒಂದೇಹಂತದಲ್ಲಿಚುನಾವಣೆ ನಡೆಸಬಹುದುಎಂದುಶಾಹೇಳಿದರು. ನಳಂದ ಜಿಲ್ಲೆಯ ಬಿಹಾರ್‌ಶರೀಫ್‌ನಲ್ಲಿ ನಡೆದ ರ್‍ಯಾಲಿಯನ್ನುದ್ದೇಶಿಸಿಮಾತನಾಡಿದ ಅಮಿತ್‌ಶಾ, ಎನ್‌ಡಿಎನಉತ್ತಮಆಡಳಿತದ ದಾಖಲೆಯುಬಿಹಾರದಲ್ಲಿಮತದಾನದ ಹಂತಗಳನ್ನುಈಗಾಗಲೇಕಡಿಮೆಮಾಡಿದೆ ಎಂದುತಿಳಿಸಿದರು. ಮುಂದಿನಬಾರಿ, ನಾವು ಅಧಿಕಾರಕ್ಕೆ ಮರಳಿದರೆ ಕೇವಲ ಒಂದು ಹಂತದಲ್ಲಿಚುನಾವಣೆಗಳುನಡೆಯುತ್ತವೆ ಎಂದು ಅಮಿತ್ ಶಾ ಹೇಳಿದರು. ಇದೇ ವೇಳೆ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರನ್ನುಶ್ಲಾಘಿಸಿದಶಾ, ಅವರ ನಾಯಕತ್ವದಲ್ಲಿ ಎನ್‌ಡಿಎ ರಾಜ್ಯವನ್ನು 'ಜಂಗಲ್ ರಾಜ್' ಮತ್ತು ನಕ್ಸಲಿಸಂನ ಹಿಡಿತದಿಂದ ಮುಕ್ತಗೊಳಿಸಿದೆಎಂದರು.

ಕೇಂದ್ರದಲ್ಲಿರುವ ನಮ್ಮ ಸರ್ಕಾರ ಇಡೀದೇಶವನ್ನುನಕ್ಸಲ್ ಹಿಡಿತದಿಂದ ಮುಕ್ತಗೊಳಿಸಲುದೃಢನಿಶ್ಚಯಹೊಂದಿದೆ ಎಂದು ಶಾ ಪ್ರತಿಪಾದಿಸಿದರು.

# ಮಾಧ್ಯಮ ಅಕಾಡೆಮಿಯಲ್ಲಿ ಟಿಜೆಎಸ್ ಜಾರ್ಜ್ ದತ್ತಿ ರಾಷ್ಟ್ರೀಯ ಪ್ರಶಸ್ತಿ ಸ್ಥಾಪನೆ: ವಿಧಾನಪರಿಷತ್ ಸದಸ್ಯ ಕೆ. ಶಿವಕುಮಾರ್ ಘೋಷಣೆ

ಬೆಂಗಳೂರು, ಅ 25: ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿಹಿರಿಯಪತ್ರಕರ್ತ ಟಿ.ಜೆ.ಎಸ್. ಜಾರ್ಜ್ ಅವರಹೆಸರಿನಲ್ಲಿರಾಷ್ಟ್ರೀಯಮಟ್ಟದಲ್ಲಿ ಮಾಧ್ಯಮಸಂಸ್ಥೆಗಳಸಂಪಾದಕರಿಗೆದತ್ತಿ ಪ್ರಶಸ್ತಿ ಸ್ಥಾಪಿಸಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಕೆ.ಶಿವಕುಮಾರ್ ಅವರು ಘೋಷಿಸಿದರು.



ಅವರು ಇಂದು ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿಸನ್ಮಾನಸ್ವೀಕರಿಸಿಮಾತನಾಡಿದರು. ಕರ್ನಾಟಕ ಮಾಧ್ಯಮ ಅಕಾಡೆಮಿಯಲ್ಲಿ ತಾವು ಈಗಾಗಲೇ ಸಾಮಾಜಿಕ ನ್ಯಾಯದ ಕುರಿತು ಬರೆಯುವ ಅಂಕಣಕಾರರಿಗೆ ಮೂಕನಾಯಕ ಡಾ. ಬಿ.ಆರ್. ಅಂಬೇಡ್ಕರ್ ದತ್ತಿ ಪ್ರಶಸ್ತಿಯನ್ನು ಸ್ಥಾಪಿಸಿದ್ದು, ಇತ್ತೀಚೆಗೆ ನಿಧನರಾದ ಹಿರಿಯ ಪತ್ರಕರ್ತ ಟಿ.ಜೆ.ಎಸ್. ಜಾರ್ಜ್ ಅವರು ನಿಷ್ಪಕ್ಷಪಾತಿ ಪತ್ರಕರ್ತರಾಗಿದ್ದರು. ಅವರು ಸ್ವತಃ ಪತ್ರಕರ್ತರವರದಿಗಳನ್ನು ತಿದ್ದಿ, ಮಾರ್ಗದರ್ಶನ ನೀಡುತ್ತಿದ್ದರು ಎಂದು ಸ್ಮರಿಸಿದರು. ಅವರ ಹೆಸರಿನಲ್ಲಿ ರಾಷ್ಟ್ರಮಟ್ಟದಲ್ಲಿ ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸುವ ಪತ್ರಕರ್ತರನ್ನು ಗುರುತಿಸುವ ಸಲುವಾಗಿ 1.5 ಲಕ್ಷ ರೂ.ಗಳ ದತ್ತಿನಿಧಿ ಸ್ಥಾಪಿಸುವುದಾಗಿ ತಿಳಿಸಿದರು.

ತಾವು ಇನ್ನೂ ಪತ್ರಿಕೋದ್ಯಮದಿಂದ ಹೊರ ಬಂದಿಲ್ಲ. ಸದನದಲ್ಲಿಯೂಪತ್ರಕರ್ತರುಹಾಗೂ ಪತ್ರಿಕೋದ್ಯಮಕ್ಷೇತ್ರದಕುರಿತುದನಿಎತ್ತುವುದಾಗಿ ಅವರು ತಿಳಿಸಿದರು. ತಮ್ಮ ಪತ್ರಕರ್ತ ವೃತ್ತಿ ಜೀವನ ಹಾಗೂ ಅಕಾಡೆಮಿಯ ಸದಸ್ಯರಾಗಿ ಕಾರ್ಯನಿರ್ವಹಣೆಯಸಂದರ್ಭಗಳನ್ನುಮೆಲುಕು ಹಾಕಿದ ಶಿವಕುಮಾರ್ ಅವರು ಅಕಾಡೆಮಿಯ ಚಟುವಟಿಕೆಗಳಿಗೆಸದಾ ಬೆಂಬಲನೀಡುವುದಾಗಿ ತಿಳಿಸಿದರು.

ಈಸಂದರ್ಭದಲ್ಲಿಮಾತನಾಡಿದಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿಆಯೇಶಾಖಾನಂಅವರು, ಶಿವಕುಮಾರ್ ಅವರು ಮೂರು ದಶಕಗಳಿಂದ ಪತ್ರಕರ್ತರಾಗಿಕಾರ್ಯನಿರ್ವಹಿಸಿದ್ದು, ತಮ್ಮ ನಿಷ್ಠುರವರದಿಗಳಿಗಾಗಿಹೆಸರುವಾಸಿಯಾಗಿದ್ದಾರೆ. ಅವರು ಇಂದು ವಿಧಾನ ಪರಿಷತ್ತಿನ ಸದಸ್ಯರಾಗಿ ಆಯ್ಕೆಯಾಗಿರುವುದುಪತ್ರಕರ್ತರಿಗೆಲ್ಲಹೆಮ್ಮೆಯ ವಿಷಯ. ಅವರುಅಕಾಡೆಮಿಯೊಂದಿಗೆಅವಿನಾಭಾವ ಸಂಬಂಧಹೊಂದಿದ್ದು, ಅವರಬೆಂಬಲಪತ್ರಕರ್ತರಿಗೆ ಸದಾ ಇರುವುದೆಂಬ ವಿಶ್ವಾಸ ವ್ಯಕ್ತಪಡಿಸಿದರು.

ಸದಸ್ಯರಾದ ಕೆ. ನಿಂಗಜ್ಜ, ಕೆ.ವೆಂಕಟೇಶ್, ಶಿವಾನಂದ ತಗಡೂರು, ಅಬ್ಬಾಸ್ ಮುಲ್ಲಾ ಮೊದಲಾದವರು ಶಿವಕುಮಾರ್ ಅವರಕುರಿತು ಮಾತನಾಡಿದರು.

# ಮುಂದಿನ ತಿಂಗಳು ರಾಹುಲ್ ಗಾಂಧಿ ರಾಜ್ಯಕ್ಕೆ

ಬೆಂಗಳೂರು:ಅ.25:ನಾಯಕತ್ವಬದಲಾವಣೆ, ಸಂಪುಟ ಪುನಾರಚನೆ ವಿಚಾರ ಕುರಿತು ರಾಜ್ಯ ಕಾಂಗ್ರೆಸ್ ನಲ್ಲಿ ಚರ್ಚೆಗಳು ನಡೆಯುತ್ತಿರುವ ನಡುವಲ್ಲೇ ನವೆಂಬರ್ ತಿಂಗಳಿನಲ್ಲಿ ಕಾಂಗ್ರೆಸ್ ನಾಯಕರಾಹುಲ್‌ಗಾಂಧಿಯವರುಬೆಂಗಳೂರಿಗೆ ಭೇಟಿ ನೀಡಲಿದ್ದಾರೆಂದು ಮೂಲಗಳಿಂದ ತಿಳಿದುಬಂದಿದೆ.

ಸಿದ್ದರಾಮಯ್ಯ ನಂತರಸತೀಶ್ ಜಾರಕಿಹೊಳಿ ಉತ್ತರಾಧಿಕಾರಿಎಂದುಯತೀಂದ್ರಸಿದ್ದರಾಮಯ್ಯ ನೀಡಿದ ಹೇಳಿಕೆ ಈಗ ರಾಜ್ಯ ರಾಜಕೀಯದಲ್ಲಿ ಸಂಚಲನಮೂಡಿಸಿದ್ದು, ಈನಡುವಲ್ಲೇನವೆಂಬರ್ 19ರಂದುರಾಹುಲ್‌ಗಾಂಧಿಬೆಂಗಳೂರಿಗೆಭೇಟಿ ನೀಡಲಿದ್ದಾರೆಂದು ಹೇಳಲಾಗುತ್ತಿದೆ.

ಮಹಿಳಾಮತ್ತುಮಕ್ಕಳಕಲ್ಯಾಣಇಲಾಖೆಸಚಿವೆ ಲಕ್ಷ್ಮಿಹೆಬ್ಬಾಳ್ಕರ್‌ಅವರುಕರ್ನಾಟಕದಲ್ಲಿಸ್ಥಾಪನೆಯಾದ ಅಂಗನವಾಡಿಗಳ 50 ನೇ ವಾರ್ಷಿಕೋತ್ಸವದ ಅಂಗನವಾಡಿ ಕಾರ್ಯಕರ್ತರ ರ್‍ಯಾಲಿಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ ಸಿ ವೇಣುಗೋಪಾಲ್ ಮತ್ತು ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಸೇರಿದಂತೆ ಹೈಕಮಾಂಡ್‌ನಾಯಕರನ್ನುಆಹ್ವಾನಿಸಿದ್ದಾರೆಂದು ಮೂಲಗಳಿಂದ ತಿಳಿದುಬಂದಿದೆ.

ವಯನಾಡ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ, ಮತ್ತು ರಾಹುಲ್ ಗಾಂಧಿ ಅವರನ್ನು ಸಹ ಆಹ್ವಾನಿಸುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

**ನವೆಂಬರ್ 15 ರಂದು ಸಿಎಂ ದೆಹಲಿ**

ಏತನ್ಮಧ್ಯೆ ನವೆಂಬರ್ 14 ರಂದು ಬಿಹಾರ ವಿಧಾನಸಭಾ ಚುನಾವಣೆಯ ಫಲಿತಾಂಶಗಳು ಪ್ರಕಟವಾದ ಮರುದಿನ, ನವೆಂಬರ್ 15 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ರಾಷ್ಟ್ರ ರಾಜಧಾನಿಗೆ ಭೇಟಿ ನೀಡುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ.

ಭೇಟಿ ವೇಳೆ ಮುಖ್ಯಮಂತ್ರಿಗಳು ಸಚಿವ ಸಂಪುಟ ಪುನಾರಚನೆ ಕುರಿತು ಹೈಕಮಾಂಡ್ ನಾಯಕರೊಂದಿಗೆ ಚರ್ಚಿಸುವ ನಿರೀಕ್ಷೆಯಿದೆ.

ಈಬಾರಿಸಚಿವಸಂಪುಟಪುನಾರಚನೆಯಾದರೆ ಹೊಸಮುಖಗಳಿಗೆದಾರಿಮಾಡಿಕೊಡಲುಸುಮಾರು 10ಸಚಿವರನ್ನುಕೈಬಿಡುವಸಾಧ್ಯತೆಯಿದೆಎಂದು ಮೂಲಗಳು ತಿಳಿಸಿವೆ.

ಕುತೂಹಲಕಾರಿವಿಚಾರವೆಂದರೆಸಿದ್ದರಾಮಯ್ಯ ಅವರಆಪ್ತ ಮತ್ತು ನಗರಾಭಿವೃದ್ಧಿಸಚಿವ ಬೈರತಿ ಸುರೇಶ್ ಮತ್ತು ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಎ ಎಸ್ ಪೊನ್ನಣ್ಣ ಅವರು ಶುಕ್ರವಾರ ದೆಹಲಿಗೆ ಭೇಟಿ ನೀಡಿದ್ದರು.

ಇಡಿಜೊತೆಗಿನಪ್ರಕರಣವೊಂದಕ್ಕೆಸಂಬಂಧಿಸಿದಂತೆ ತಮ್ಮ ಕಾನೂನು ಸಲಹೆಗಾರರನ್ನು ಭೇಟಿ ಮಾಡಲು ದೆಹಲಿಗೆ ಭೇಟಿ ನೀಡಿದ್ದಲು ಎಂದು ಹೇಳಲಾಗುತ್ತಿದೆ. ಈ ನಡುವೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಕೂಡ ದೆಹಲಿಗೆ ಭೇಟಿ ನೀಡಿದ್ದರು ಎಂದು ಮೂಲಗಳು ತಿಳಿಸಿವೆ.

ದೆಹಲಿಯಲ್ಲಿರುವ ಈಶ್ವರ್ ಖಂಡ್ರೆ ಅವರು, ರಣದೀಪ್ ಸಿಂಗ್ ಸುರ್ಜೇವಾಲಾ ಸೇರಿದಂತೆ ಹೈಕಮಾಂಡ್ ನಾಯಕರೊಂದಿಗೆ ರಾಜಕೀಯ ಬೆಳವಣಿಗೆಗಳಕುರಿತುಚರ್ಚಿಸುವಸಾಧ್ಯತೆಯಿದೆ.

ಈಶ್ವರ್ ಖಂಡ್ರೆ, ಅವರು ಕೆಪಿಸಿಸಿ ಅಧ್ಯಕ್ಷ ಹುದ್ದೆಯ ರೇಸ್‌ನಲ್ಲಿದ್ದು, ಇದಕ್ಕಾಗಿ ಸಚಿವ ಸ್ಥಾನವನ್ನು ತ್ಯಾಗ ಮಾಡುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)